ಸಂಪುಟ: 04 ಸಂಚಿಕೆ: 137 ಪುಟಗಳು: 08 ಮಂಗಳವಾರ 30 ಜುಲೈ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**
ಯಾರ ಸಹಾಯಕ್ಕೂ ಕಾದು ಕುಳಿತುಕೊಳ್ಳಬೇಡಿ, ಎಲ್ಲಾ ಮಾನವ ಸಹಾಯಕ್ಕಿಂತಲೂ ಭಗವಂತನ ಅನಂತಪಾಲು ಮಿಗಿಲಲ್ಲವೆ?

# ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ನಾನು ಎಷ್ಟು ದಿನ ಸಚಿವನಾಗಿ ಇರುತ್ತೇನೋ ಗೊತ್ತಿಲ್ಲ' : ಜಮೀರ್

• ಉದಯವಾಹಿನಿ, ಬೆಂಗಳೂರು

ನಾನು ಅಲ್ಪಸಂಖ್ಯಾತರ ಇಲಾಖೆಯಲ್ಲಿ ಇನ್ನೂ ಎಷ್ಟು ದಿನಗಳ ಕಾಲ ಸಚಿವನಾಗಿ ಇರುತ್ತೇನೆ ಗೊತ್ತಿಲ್ಲ. ಎಷ್ಟು ದಿನ ಬದುಕಿರುತ್ತೇನೋ ಗೊತ್ತಿಲ್ಲ. ದೇವರು ಯಾರ ಹಣೆಬರಹದಲ್ಲಿ ಏನು ಬರೆದಿದ್ದಾನೆ ಎನ್ನುವುದು ಯಾರಿಗೆ ಗೊತ್ತು ಎಂದು ಸಚಿವ ಜಮೀರ್ ಅಹ್ಮದ್ ಸಂಪುಟ ಸರ್ಜರಿ ಬಗ್ಗೆ ಸುಳಿವು ಕುರಿತು ಸ್ಫೋಟಕ ಹೇಳಿಕೆ ನೀಡಿದರು. ನಾನು ಎಷ್ಟು ದಿನ ಸಚಿವನಾಗಿ ಇರುತ್ತೇನೆ ಗೊತ್ತಿಲ್ಲ. ಅಲ್ಪಸಂಖ್ಯಾತ ಇಲಾಖೆಯ ಜವಾಬ್ದಾರಿ ಕೊಟ್ಟಿದ್ದಾರೆ. ನಾನು ಜೀವಂತವಾಗಿ ಇರುತ್ತೇನೆ ಇಲ್ಲವೋ ಗೊತ್ತಿಲ್ಲ. ಯಾಕೆ ಅಂದರೆ ದೇವರು ಹಣೆಬರಹ ಬರೆದಿರುತ್ತಾನೆ ಎಂದರು. ಈಗ ನನ್ನನ್ನು ಅಲ್ಪಸಂಖ್ಯಾತ ಸಚಿವರಾಗಿ ಮಾಡಿದ್ದಾರೆ. ಮುಂದಿನ ನಾಲ್ಕು ವರ್ಷ ನಮ್ಮ ಸರ್ಕಾರ ಇರುತ್ತದೆ. ಅಲ್ಲಿಯವರೆಗೂ ನಾನೇ ಅಲ್ಪಸಂಖ್ಯಾತ ಸಚಿವರಾಗಿರುತ್ತೇನೆ ಎಂಬ ವಿಶ್ವಾಸವಿದೆ. ಮನುಷ್ಯನಿಗೆ ಗ್ಯಾರಂಟಿ ಇದೆಯಾ ಯಾರು ಹೆಂಗೆ ಹೋಗುತ್ತಾರೆ ಗೊತ್ತಿಲ್ಲ. ನಾನು ಎಷ್ಟು ದಿನ ಬದುಕುತ್ತಿನೋ ಗೊತ್ತಿಲ್ಲ ಎಂದು ಅವರು ತಿಳಿಸಿದರು.

## ಬಿಜೆಪಿ ಕಾಲದಲ್ಲಿ ಆದ ಹಗರಣ ಒಪ್ಪಿಕೊಳ್ಳಲಿ: ಸಂತೋಷ್ ಲಾಡ್

• ಉದಯವಾಹಿನಿ, ಹುಬ್ಬಳ್ಳಿ

ಬಿಜೆಪಿಯವರು ಮಾಡಿದ ಹಗರಣ ಮೊದಲು ಒಪ್ಪಿಕೊಳ್ಳಬೇಕು ಎಂದು ಕಾರ್ಮಿಕ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹುಬ್ಬಳ್ಳಿಯಲ್ಲಿ ಹೇಳಿದ್ದಾರೆ. ಮೈಸೂರು ನಗರಾಭಿವೃದ್ಧಿ ಹಾಗೂ ವಾಲ್ಮೀಕಿ ನಿಗಮದಲ್ಲಿ ಹಗರಣದಲ್ಲಿ ಸಿಎಂ ರಾಜೀನಾಮೆಗೆ ವಿಚಾರವಾಗಿ ವಿರೋಧ ಪಕ್ಷಗಳು ಒತ್ತಾಯ ನಡೆಸಿವೆ. ಇದಕ್ಕೆ ಈಗಾಗಲೇ ಮುಖ್ಯಮಂತ್ರಿಗಳು ಸ್ಪಷ್ಟನೆ ಕೊಟ್ಟಿದ್ದಾರೆ. ವಿಪಕ್ಷಗಳಿಗೆ ಸಿಎಂ ಹೇಗೆ ಸ್ಪಷ್ಟನೇ ನೀಡಬೇಕು. ಬಿಜೆಪಿ ಕಾಲದಲ್ಲಿ ಏನು ಆಗಿದೆ ಮೊದಲು ಅವರನ್ನು ಹೇಳಲಿ ಎಂದು ಗುಡುಗಿದರು. ಬಿಜೆಪಿ ಅಧಿಕಾರವಧಿಯಲ್ಲಿ ನಡೆದ ಹಗರಣದ ಬಗ್ಗೆ ಬಿಜೆಪಿ ಸ್ಪಷ್ಟೀಕರಣ ನೀಡಿದೆಯಾ. ಅವರ ಕಾಲದಲ್ಲಿ ಆದ ಹಗರಣ ಬಗ್ಗೆ ಸ್ಪಷ್ಟೀಕರಣ ಕೊಟ್ಟಿದ್ದಾರೆಯೇ ಎಂದು ಪ್ರಶ್ನಿಸಿದ್ದಾರೆ. ಬಿಜೆಪಿಯಲ್ಲಿ ಆದ ಹಗರಣ ಕುರಿತು ತಪ್ಪು ಮಾಹಿತಿ ಕೊಟ್ಟಿದ್ದೇವೆ ಅಂತಾರಾ. ಬಿಜೆಪಿಯವರು ಮಾಡಿದ ಹಗರಣ ಮೊದಲು ಒಪ್ಪಿಕೊಳ್ಳಬೇಕು ಅವರ ಕಾಲದಲ್ಲಿ ಏನು ಆಗಿದೆ ಸ್ಪಷ್ಟತೆ ಕೊಡಲಿ ಎಂದು ಸಚಿವರು ತಿಳಿಸಿದ್ದಾರೆ. ವಿರೋಧ ಪಕ್ಷದವರು ಏಕೆ ಪಾದಯಾತ್ರೆ ಮಾಡುತ್ತಾರೆ ಎಂದು ಅವರನ್ನೇ ಕೇಳಬೇಕು. ನಮ್ಮ ಕಾಲದಲ್ಲಿ ತಪ್ಪಾಗಿದೆ ನಾವು ಸಹ ಕಾನೂನು ಬಾಹಿರವಾಗಿ ಕೊಟ್ಟಿದ್ದೇವೆ. ನಮ್ಮ ಕಾಲದಲ್ಲಿ 2019 ರಿಂದ 2024 ರವರೆಗೆ ಮುಡಾದಲ್ಲಿ ಹಂಚಿಕೆಯಾದ ಸೈಟ್ ಕಾನೂನು ಬಾಹಿರ ಆಗಿವೆ. ಈ ಬಗ್ಗೆ ಜನರು ಗಮನ ಹರಿಸುತ್ತಾರೆ. ಬಿಜೆಪಿ ಅವರು ತಾವು ಮಾಡಿದ ತಪ್ಪನ್ನು ಒಪ್ಪಿಕೊಳ್ಳಲಿ ಎಂದಿದ್ದಾರೆ. ಇನ್ನು ಮುಂದೆ ಮಾತನಾಡಿದ ಸಂತೋಷ್ ಲಾಡ್, ನೀಟ್ ಸಿಇಟಿ ಪರೀಕ್ಷೆಯಲ್ಲಿ ಆದ ಹಗರಣ ಕುರಿತು ಅವರು ಮಾತನಾಡುತ್ತಾರಾ ಎಂದು ತಿಳಿಸಿದ್ದಾರೆ.

## ಮುಖ್ಯಮಂತ್ರಿ ಬದಲಾವಣೆ ಚರ್ಚೆ ಸದ್ಯಕ್ಕಿಲ್ಲ: ಸತೀಶ ಜಾರಕಿಹೊಳಿ

• ಉದಯವಾಹಿನಿ, ಮಂಡ್ಯ

'ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಿ ಮುಂದುವರಿಯುತ್ತಾರೆ. ಸದ್ಯಕ್ಕೆ ಬದಲಾವಣೆ ಇಲ್ಲ. ಈ ಬಗ್ಗೆ ಚರ್ಚಿಸುವ ಪ್ರಶ್ನೆಯೂ ನಮ್ಮ ಮುಂದಿಲ್ಲ' ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು. ಇಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಮುಖ್ಯಮಂತ್ರಿ ಬದಲಾವಣೆ ಮಾಡುತ್ತೇವೆ ಎಂದವರು ಯಾರು, ಈಗ ಯಾರು ಚರ್ಚೆ ಮಾಡುತ್ತಿದ್ದಾರೆ? ಮುಂದೆ ಅವಕಾಶ ಸಿಕ್ಕರೆ ಮಾತನಾಡೋಣ' ಎಂದರು. 'ಸದ್ಯಕ್ಕೆ ದಲಿತ ಮುಖ್ಯಮಂತ್ರಿ ಬಗ್ಗೆ ಚರ್ಚೆಯೂ ಇಲ್ಲ. ಯಾವುದೇ ಕಾರಣಕ್ಕೂ ಮುಖ್ಯಮಂತ್ರಿ ಬದಲಾವಣೆ ಇಲ್ಲ. ಉಳಿದ ಅವಧಿಗೂ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿ ಆಗಿರುತ್ತಾರೆ' ಎಂದು ಹೇಳಿದರು.

## ಸರ್ಕಾರದ ವಿರುದ್ಧ ಹೋರಾಟಕ್ಕೆ ಶಕ್ತಿ ತುಂಬಿ: ನಿಖಿಲ್ ಕುಮಾರಸ್ವಾಮಿ

• ಉದಯವಾಹಿನಿ, ರಾಮನಗರ

'ಭ್ರಷ್ಟಾಚಾರ ಮತ್ತು ಹಗರಣಗಳಲ್ಲಿ ಮುಳುಗಿರುವ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದ ವಿರುದ್ಧ ಜೆಡಿಎಸ್ ಮತ್ತು ಬಿಜೆಪಿ ಕೈಗೊಂಡಿರುವ ಹೋರಾಟಕ್ಕೆ ಪಕ್ಷದ ಕಾರ್ಯಕರ್ತರು ಶಕ್ತಿ ತುಂಬಬೇಕು. ಹೋರಾಟವನ್ನು ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಎಲ್ಲಾರೂ ಕೆಲಸ ಮಾಡಬೇಕು' ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದರು. ಮೈತ್ರಿಕೂಟವು ಸರ್ಕಾರದ ವಿರುದ್ಧ ಹಮ್ಮಿಕೊಂಡಿರುವ ಹೋರಾಟದ ರೂಪುರೇಷೆ ಕುರಿತು ಚರ್ಚಿಸುವುದಕ್ಕಾಗಿ ನಗರದಲ್ಲಿ ಪಕ್ಷದ ಮುಖಂಡರೊಂದಿಗೆ ಸಭೆಯಲ್ಲಿ ಅವರು ಮಾತನಾಡಿದರು.



**ಸತತ 2 ವರ್ಷಗಳ ಬರಗಾಲದಿಂದ ರಾಜ್ಯ ತತ್ತರಿಸಿತ್ತು, ಈ ಬಾರಿ ವರುಣ ಕೃಪೆ ತೋರಿರುವ ಹಿನ್ನೆಲೆ ಮಂಡ್ಯ ಜಿಲ್ಲೆಯ ಜೀವನಾಡಿ ಕೃಷ್ಣರಾಜ ಸಾಗರ ಜಲಾಶಯ ಸಂಪೂರ್ಣ ಭರ್ತಿಯಾಗಿದ್ದು, ಭಾರತದ ಏಳು ಪವಿತ್ರ ನದಿಗಳಲ್ಲಿ ಕಾವೇರಿ ಕೂಡ ಒಂದು. ಕನ್ನಂಬಾಡಿ ಕಟ್ಟೆ ನಮ್ಮೆಲ್ಲರ ಅನ್ನದ ತಟ್ಟೆಯಾಗಿದೆ. ಎಲ್ಲರೂ ಕೂಡ ಈ ಕಟ್ಟೆಯಿಂದ ಅನ್ನದ ತಟ್ಟೆ ಇಟ್ಟುಕೊಂಡಿದ್ದಾರೆ. ನಾಡದೇವತೆ ಚಾಮುಂಡೇಶ್ವರಿ ಆಶೀರ್ವಾದ ಪಡೆದು ಮಳೆಯಾಗಲಿ ಎಂದು ಪ್ರಾರ್ಥನೆ ಮಾಡಿದ್ದೇವೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ**

1 ತುಂಬಿ ತುಳುಕುತ್ತಿರುವ ಮಂಡ್ಯ ಜಿಲ್ಲೆಯ ಕೃಷ್ಣರಾಜಸಾಗರ ಜಲಾಶಯ

2 ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ ಕೆ ಶಿವಕುಮಾರ್ ಬಾಗಿನ ಸಮರ್ಪಣೆ

3 ಮುಂದಿನ 10 ವರ್ಷ ನಾವೇ ಬಾಗಿನ ಸಲ್ಲಿಸುತ್ತೇವೆ ಎಂದ ಡಿಸಿಎಂ ಡಿಕೆಶಿ

# ಕಾವೇರಿ ತಾಯಿಗೆ ಬಾಗಿನ ಸಿಎಂ ಡಿಸಿಎಂ ನಮನ

■ ಕನ್ನಂಬಾಡಿಕಟ್ಟೆ ನಮ್ಮೆಲ್ಲರ ಅನ್ನದ ತಟ್ಟೆ , ಬಸ್‌ನಲ್ಲೇ ಜಲಾಶಯ ವೀಕ್ಷಿಸಿದ ಸಿದ್ದು ■ ಕಾವೇರಿಗೆ ಬಾಗಿನ ಅರ್ಪಿಸಿ ಡಿಸಿಎಂ ಡಿ.ಕೆ.ಶಿವಕುಮಾರ್ ಆಡಿದ ಭಾರೀ ವಿಶ್ವಾಸದ ಮಾತು ■ ಭಾರತದ ಏಳು ಪವಿತ್ರ ನದಿಗಳಲ್ಲಿ ಕಾವೇರಿಯೂ ಒಂದು ■ " ಗಂಗಾ ಆರತಿಗಿಂತ ಮಿಗಿಲಾಗಿ ಕಾವೇರಿ ಆರತಿ

• ಉದಯವಾಹಿನಿ, ಮಂಡ್ಯ

**ತುಂಬಿ ತುಳುಕುತ್ತಿರುವ ಜಲಾಶಯ**

ಸೋಮವಾರ ಕೃಷ್ಣರಾಜ ಸಾಗರ ಜಲಾಶಯಕ್ಕೆ ಬಂದಿದ್ದ ವೇಳೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಇದು ಒಂದು ಸಂಭ್ರಮದ ದಿನವಾಗಿದೆ. ಕನ್ನಂಬಾಡಿ ಕಟ್ಟೆ ನಮ್ಮೆಲ್ಲರ ಅನ್ನದ ತಟ್ಟೆಯಾಗಿದೆ.

ಎಲ್ಲಾರೂ ಕೂಡ ಈ ಕಟ್ಟೆಯಿಂದ ಅನ್ನದ ತಟ್ಟೆ ಇಟ್ಟುಕೊಂಡಿದ್ದಾರೆ. ನಾಡದೇವತೆ ಚಾಮುಂಡೇಶ್ವರಿ ಆಶೀರ್ವಾದ ಪಡೆದು ಮಳೆಯಾಗಲಿ ಎಂದು ಪ್ರಾರ್ಥನೆ ಮಾಡಿದ್ದೇವೆ. ಮೇಲಿರುವ ತಾಯಿಗೆ ಯಾರು ಅಧಿಕಾರದಲ್ಲಿ ಇದ್ದಾರೆ ಎಂದು ಗೊತ್ತಿಲ್ಲ. ಮನುಷ್ಯನ ಪ್ರಯತ್ನ ವಿಫಲ ಆಗಬಹುದು. ಪ್ರಾರ್ಥನೆಗೆ ಫಲ ಸಿಗುತ್ತದೆ. ಭಾರತದ ಏಳು ಪವಿತ್ರಾ ನದಿಗಳಲ್ಲಿ ಕಾವೇರಿ ಕೂಡ ಒಂದಾಗಿದೆ ಎಂದು ಹೇಳಿದರು.

''ಕನ್ನಂಬಾಡಿ ಕಟ್ಟೆ ನಮ್ಮೆಲ್ಲರ ಅನ್ನದ ತಟ್ಟೆ. ಮೈಸೂರು, ಚಾಮರಾಜನಗರ, ಹಾಸನ, ಮಂಡ್ಯ ಮತ್ತು ತಮಿಳುನಾಡಿನವರು ಈ ನದಿಯ ಮೂಲಕ ಅನ್ನ ಬೆಳೆಯುತ್ತಿದ್ದಾರೆ. ಎಲ್ಲಾರ ಪಾಲಿನ ಜೀವನದಿ ಕಾವೇರಿಗೆ 92 ವರ್ಷ ಕಳೆದರೂ ನಮನ ಸಲ್ಲಿಸುತ್ತಿದ್ದೇವೆ. ನಮ್ಮ ಸರ್ಕಾರ 82 ಲಕ್ಷ ಹೆಕ್ಟೇರ್ ಪ್ರದೇಶದ ಬಿತ್ತನೆಗೆ ಗುರಿ ಹೊಂದಲಾಗಿದೆ. ಕಳೆದ ವರ್ಷ ಬರಗಾಲವಿತ್ತು. ಈ ವರ್ಷ ರಾಜ್ಯಾದ್ಯಂತ ಉತ್ತಮ ಮಳೆಯಾಗಿದೆ. ಹಲವರು ನಮ್ಮ ಸರ್ಕಾರ ಬಗ್ಗೆ ಟೀಕೆ ಮಾಡಿದ್ದರು. ಕಾಂಗ್ರೆಸ್ ಬಂದರೆ ಬರಗಾಲ ಬರುತ್ತೆ ಅಂತೆ. ಟೀಕೆಗಳು ಸಾಯುತ್ತವೆ, ನಮ್ಮ ಕೆಲಸಗಳು ಉಳಿಯುತ್ತವೆ. ಹೊಸ ಕಾನೂನು ತಂದಿದ್ದೇವೆ. ಎಲ್ಲಾರ ಸಹಕಾರ ಬೇಕಿದೆ. ಕೊನೆ ಭಾಗದ ರೈತನಿಗೂ ನೀರು ತಲುಪಬೇಕಿದೆ. ರೈತರನ್ನು ಉಳಿಸಬೇಕು. ಟೀಕೆ ಟಿಪ್ಪಣಿಗೆ ನಾವು ಉತ್ತರ ಹೇಳಬೇಕಿದೆ ಎಂದು ಹೇಳಿದರು. ತಮಿಳುನಾಡಿಗೆ ನಾವು 40 ಟಿಸಿಎಂ ಬಿಡಬೇಕಿತ್ತು. ಈ ತಿಂಗಳ ಕೊನೆಗೂ ಈಗಾಗಲೇ 83 ಟಿಎಂಸಿ ನೀರು ತಮಿಳುನಾಡಿಗೆ ಹರಿದು ಹೋಗಿದೆ. ಮುಂದಿನ ದಿನಗಳಲ್ಲಿ ಇದೇ ರೀತಿ ಮಳೆ ಬಂದರೇ ರೈತರಿಗೆ ಅನುಕೂಲ ಆಗಲಿದೆ. ಇನ್ನು ಮೇಕೆದಾಟು ಯೋಜನೆ ಇದಕ್ಕೆಲ್ಲ ಪರಿಹಾರವಾಗಲಿದೆ. ಇದಕ್ಕಾಗಿ ನಾವು ಹೋರಾಟ ಮಾಡಿದ್ದೇವೆ. ಮೇಕೆದಾಟು ಪಾದಯಾತ್ರೆ ಮಾಡಿದ್ದೇವೆ. ನಮ್ಮ ಮೇಲೆ ಕೇಸ್ ಹಾಕಿದರು. ನಾವು ಜೈಲಿಗೆ ಹೋದರು ಚಿಂತೆ ಇಲ್ಲ. ಕೇಸ್ ಹಾಕಿದ್ರು ಪರವಾಗಿಲ್ಲ. ಎಂದು ಬೆಂಗಳೂರುವರೆಗೂ ನಡೆದಿದ್ದೇವೆ. ನೀವು ಈಗ ಕಾಂಗ್ರೆಸ್ ಶಾಸಕರನ್ನ ಆಯ್ಕೆ ಮಾಡಿದ್ದಾರೆ. ನಿಮ್ಮ ಋಣವನ್ನ ತೀರಿಸುತ್ತೇವೆ. ನನಗೆ ವಿಶ್ವಾಸವಿದೆ ಎಂದು ತಿಳಿಸಿದರು. ಮೇಕೆದಾಟು ಅಣೆಕಟ್ಟೆಯಿಂದ ನಮಗಿಂತ ತಮಿಳುನಾಡಿಗೆ ಅನುಕೂಲವಾಗಲಿದೆ. ತಮಿಳುನಾಡಿನ ಜನತೆಗೆ ಒಳ್ಳೆಯ ಬುದ್ದಿ ಕೊಡಲಿ. ನಮಗೆ ಅಣೆಕಟ್ಟು ಕಟ್ಟಲು ಅವಕಾಶ ಮಾಡಿಕೊಡಲಿ. ಅರ್ಚಕನ ಪ್ರಭಾವದಿಂದ ಶಿಲೆಯಲ್ಲೂ ರಂಗನನ್ನ ಕಾಣಬಹುದು. ನಮಗಲ್ಲ ಆರ್ಶಿವಾದ ರಾಜ್ಯದ ಸಮೃದ್ಧಿಗೆ. ಪಿಪಿಪಿ ಮಾದರಿಯಲ್ಲಿ ಕೆಆರ್ ಎಸ್ ಬೃಂದಾವನ ಅಭಿವೃದ್ಧಿಗೆ ಮುಂದಾಗಿದ್ದೇವೆ. ಯಾರ ಜಮೀನು ವಶಪಡಿಸಿಕೊಳ್ಳುವುದಿಲ್ಲ. ಕರ್ಾರದ ಜಮೀನು ಸಾಕು. ಜಲಾಶಯದ ಭದ್ರತೆ ಗಮನವನ್ನು ಇಟ್ಟುಕೊಂಡು ಅಭಿವೃದ್ಧಿ ಮಾಡುತ್ತೇವೆ. ಚಲುವರಾಯಸ್ವಾಮಿ ನೇತೃತ್ವದಲ್ಲಿ ಸಮಿತಿ ಮಾಡಿದ್ದೇವೆ ಎಂದು ಮಾಹಿತಿ ನೀಡಿದರು. ಕಾವೇರಿಗೆ ಆರತಿ ಮಾಡಲು ತೀರ್ಮಾನ ಮಾಡಿದ್ದೇವೆ. ಪ್ರವಾಸ ಮಾಡಿ ವರದಿ ಕೊಡಲು ಹೇಳಿದ್ದೇವೆ. ಐದು ಜನರಿಗೆ ಮುಂದಿನ ವರ್ಷದಿಂದ ಪ್ರಶಸ್ತಿ ಕೊಡಲು ತೀರ್ಮಾನ ಮಾಡಿದ್ದೇವೆ. ರೈತ, ಸವಡಿ (ನೀರುಗಂಟಿ), ಇಂಜಿನಿಯರ್ ಗೆ ಪ್ರಶಸ್ತಿ ಕೊಡುತ್ತೇವೆ. ಸತತ ಹತ್ತು ಬಾರಿ ಬಂದು ಬಾಗಿನ ಅರ್ಪಿಸಲು ತಾಯಿ ಚಾಮುಂಡೇಶ್ವರಿ ಅವಕಾಶ ಮಾಡಿಕೊಡಲಿ. ನಾವು ಯಾರ ಬಗ್ಗೆ ಟೀಕೆ ಮಾಡುವುದಿಲ್ಲ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

### ಸತ್ಯಶೋಧನಾ ವರದಿ ಬಗ್ಗೆಯೂ ಚರ್ಚೆ

ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ದೆಹಲಿ ಭೇಟಿಯ ಸಂದರ್ಭದಲ್ಲಿ ಸತ್ಯಶೋಧನಾ ಸಮಿತಿಯ ವರದಿಯ ಬಗ್ಗೆಯೂ ಹೈಕಮಾಂಡ್ ಜೊತೆ ಚರ್ಚೆ ನಡೆಸುವ ಸಾಧ್ಯತೆ ಇದೆ. ಮಧುಸೂಧನ್ ಮಿಸ್ತ್ರಿ ನೇತೃತ್ವದಲ್ಲಿ ಈಗಾಗಲೇ ಸತ್ಯಶೋಧನಾ ಸಮಿತಿ ರಾಜ್ಯಕ್ಕೆ ಆಗಮಿಸಿ ಎರಡು ದಿನಗಳ ಕಾಲ ಮುಖಂಡರ ಜೊತೆಗೆ ಒನ್ ಟು ಒನ್ ಮಾತುಕತೆ ನಡೆಸಿತ್ತು. ಲೋಕಸಭೆ ಚುನಾವಣೆಯಲ್ಲಿ ಪಕ್ಷದ ಸೋಲಿಗೆ ಕಾರಣ ಏನು ಎಂಬ ಅಂಶಗಳ ಬಗ್ಗೆ ಮಾಹಿತಿ ಸಂಗ್ರಹ ಮಾಡಲಾಗಿತ್ತು. ಕಾಂಗ್ರೇಸ್ ಕೆಲವು ನಾಯಕರು ಈ ವಿಚಾರವಾಗಿ ಸತ್ಯಶೋಧನಾ ಸಮಿತಿಯ ಮುಂದೆ ಹಲವು ಮಾಹಿತಿಗಳನ್ನು ನೀಡಿದ್ದರು. ಈ ಕುರಿತಾದ ಸುದೀರ್ಘ ವರದಿ ಸತ್ಯಶೋಧನಾ ಸಮಿತಿ ಹೈಕಮಾಂಡ್‌ಗೂ ನೀಡಿದೆ. ಆಧಾರವಾಗಿ ಸಿಎಂ ಮತ್ತು ಡಿಸಿಎಂ ಜೊತೆಗೆ ಹೈಕಮಾಂಡ್ ನಾಯಕರು ಚರ್ಚೆ ನಡೆಸಲಿರುವ ಸಾಧ್ಯತೆ ಇದೆ.

### ಸಿಎಂ, ಡಿಸಿಎಂ ದೆಹಲಿ ಭೇಟಿ

ದಿಢೀರನೆ ಸಿಎಂ ಮತ್ತು ಡಿಸಿಎಂ ದೆಹಲಿಗೆ ತೆರಳಲಿದ್ದಾರೆ. ಮಂಗಳವಾರ ಅವರು ದೆಹಲಿಗೆ ತೆರಳಲಿದ್ದು, ಹೈಕಮಾಂಡ್ ಭೇಟಿ ಮಾಡಿ ಮಾತುಕತೆ ನಡೆಸಲಿದ್ದಾರೆ. ದೆಹಲಿ ಭೇಟಿಯ ಸಂದರ್ಭದಲ್ಲಿ ರಾಜ್ಯದ ಬೆಳವಣಿಗೆಗಳು ಮತ್ತು ಹಗರಣಗಳ ಆರೋಪಗಳ ಬಗ್ಗೆಯೂ ಹೈಕಮಾಂಡ್ ಮಾಹಿತಿ ಅಥವಾ ವಿವರಣೆ ಕೇಳುವ ಸಾಧ್ಯತೆ ಇದೆ.

## ಸಿಎಂ ಹೇಳಿಕೆ ಖಂಡಿಸಿ ಬಿಜೆಪಿ ನಾಯಕರಿಂದ ಮೌನ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಂಸದ ಕೋಟಾ ಶ್ರೀನಿವಾಸ್ ಪೂಜಾರಿ ವಿರುದ್ಧ ಭ್ರಷ್ಟಾಚಾರ ಆರೋಪ ಮಾಡಿರುವುದನ್ನು ಖಂಡಿಸಿ, ಕೋಟಾ ಶ್ರೀನಿವಾಸ್ ಪೂಜಾರಿ ನೇತೃತ್ವದಲ್ಲಿ ಬಿಜೆಪಿ ನಾಯಕರು ಮೌನ ಪ್ರತಿಭಟನೆ ನಡೆಸಿದರು. ಕೋಟಾ ಶ್ರೀನಿವಾಸ್ ಪೂಜಾರಿ ಮೇಲೆ ಸುಳ್ಳು ಭ್ರಷ್ಟಾಚಾರ ಆರೋಪ ಮಾಡಿರುವುದನ್ನು ಖಂಡಿಸಿ, ಆರೋಪವನ್ನು ವಾಪಸ್ ಪಡೆಯಬೇಕು, ಸಿಬಿಐ ತನಿಖೆಗೆ ಆದೇಶಿಸಬೇಕೆಂದು ಆಗ್ರಹಿಸಿ ವಿಧಾನಸೌಧದ ಗಾಂಧಿಪ್ರತಿಮೆ ಬಳಿ ಬಿಜೆಪಿ ನಯಕರು ಮೌನ ಪ್ರತಿಭಟನೆ ನಡೆಸಿದರು. ಪ್ರತಿಭಟನೆಯಲ್ಲಿ ವಿಧಾನ ಪರಿಷತ್ ವಿರೋಧ ಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ, ಶಾಸಕ ಸುರೇಶ್ ಕುಮಾರ್, ಪರಿಷತ್ ಸದಸ್ಯರು ಭಾಗವಹಿಸಿದ್ದರು.ಪ್ರತಿಭಟನೆ ಬಳಿಕ ಮಾತನಾಡಿದ ಕೋಟಾ ಶ್ರೀನಿವಾಸ್ ಪೂಜಾರಿ, ನನ್ನ ಅವಧಿಯಲ್ಲಿ ಯಾವುದೇ ಭ್ರಷ್ಟಾಚಾರ ನಡೆದಿಲ್ಲ. ಸಿಎಂ ಸಿದ್ದರಾಮಯ್ಯನವರೇ, ತಮಗೆ ನನ್ನ ಮೇಲೆ ಅನುಮಾನವಿದ್ದರೇ ಸಿಬಿಐ ತನಿಖೆಗೆ ಶಿಫಾರಸ್ಸು ಮಾಡಿ ಇಲ್ಲವೇ ನೀವಾಡಿದ ಮಾತನ್ನು ವಾಪಸ್ ಪಡೆಯಿರಿ ಎಂದು ಆಗ್ರಹಿಸಿದರು.




### ಬಿಜೆಪಿ-ಜೆಡಿಎಸ್ ಪಾದಯಾತ್ರೆಗೆ ಅನುಮತಿ ಇಲ್ಲ

ಬಿಜೆಪಿ-ಜೆಡಿಎಸ್ ಪಾದಯಾತ್ರೆ, ವಿಚಾರವಾಗಿ ಪ್ರತಿಕ್ರಿಯಿಸಿರುವ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಪಾದಯಾತ್ರೆಗೆ ಅನುಮತಿ ನೀಡಲ್ಲ ಎಂದು ಖಡಕ್ ಆಗಿ ಹೇಳಿದ್ದಾರೆ. ಪಾದಯಾತ್ರೆಗೆ ನಾವು ಅವಕಾಶ ಕೊಡುವುದಿಲ್ಲ. ಅವರು ಮಾಡುವುದಿದ್ದರೆ ಮಾಡಿಕೊಳ್ಳಲಿ. ನಮ್ಮ ತಕರಾರಿಲ್ಲ. ಆದರೆ ಅಧಿಕೃತವಾಗಿ ಪೊಲೀಸ್ ಇಲಾಖೆಯಿಂದ ನಾವು ಅನುಮತಿ ನೀಡುವುದಿಲ್ಲ ಎಂದು ತಿಳಿಸಿದ್ದಾರೆ.

### ಬಿಜೆಪಿಯೇ ಕರಪತ್ರ ಹಂಚಿತ್ತು : ಸಚಿವ ಪ್ರಿಯಾಂಕ್ ಖರ್ಗೆ

ಹೆಚ್.ಡಿ ಕುಮಾರಸ್ವಾಮಿ ಮೂಡಾದಲ್ಲಿ ಭಾರಿ ಭೂಕಬಳಿಕೆ ಮಾಡಿದ್ದಾರೆ ಎಂದು ಬಿಜೆಪಿಯೇ ಕರಪತ್ರ ಹಂಚಿತ್ತು ಎಂದು ಸಚಿವ ಪ್ರಿಯಾಂಕ್ ಖರ್ಗೆ ಟ್ವೀಟ್ ಮಾಡಿದ್ದಾರೆ.ಜೆಡಿಎಸ್ ಬಿಜೆಪಿ, ಹಿಂದೆ ಕುಸ್ತಿ ಮಾಡಿದವರೇ ಇಂದು ದೋಸ್ತಿ ಮಾಡುತ್ತಿರುವವರು, ಆದರೆ ಕುಸ್ತಿ ಕಾಲದ ಸಾಕ್ಷಿಗಳು ಇಂದಿಗೂ ಹಾಗೆಯೇ ಇವೆ! ಎಂದರು.

## ಕೇಂದ್ರದ ಬಜೆಟ್‌ನಲ್ಲಿ ಕರ್ನಾಟಕಕ್ಕೆ ಅತಿ ಹೆಚ್ಚು ಅನ್ಯಾಯ ಆಗಿದೆ


### ಕೇಂದ್ರ ಸಚಿವರ ಕ್ಷೇತ್ರ ರಾಮನಗರಕ್ಕೂ ಏನಾದರೂ ಹೊಸದು ಯೋಜನೆ ಬಂದಿದೆಯೇ? ಕೈಗಾರಿಕಾ ಕಾರಿಡಾರ್ ಬಂದಿದೆಯೇ?

• ಉದಯವಾಹಿನಿ, ಮೈಸೂರು

**ನನ್ನ ವಿರುದ್ಧ ಹೊಟ್ಟೆ ಕಿಚ್ಚು**

ಕೇಂದ್ರದ ಬಜೆಟ್ ನಲ್ಲಿ ಕರ್ನಾಟಕಕ್ಕೆ ಅತಿ ಹೆಚ್ಚು ಅನ್ಯಾಯ ಆಗಿದೆ ಎಂದು ಸಿಎಂ ಸಿದ್ದರಾಮಯ್ಯ ಕಿಡಿಕಾರಿದ್ದಾರೆ. ಈ ಬಗ್ಗೆ ಟ್ವೀಟ್ ಮಾಡಿರುವ ಸಿಎಂ ಸಿದ್ದರಾಮಯ್ಯ ಕೇಂದ್ರ ಸಚಿವರಾದ ಕುಮಾರಸ್ವಾಮಿ ಮತ್ತು ನಿರ್ಮಲಾ ಸೀತಾರಾಮನ್ ಅವರು ಈ ಹಿಂದೆ ಘೋಷಣೆ ಮಾಡಿದ ಅನುದಾನವನ್ನು ನಾವು ಕೂಡಿಸುತ್ತೇವೆ ಎಂದು ಪತ್ರಿಕಾಗೋಷ್ಠಿಯಲ್ಲಿ ಪ್ರಸ್ತಾಪ ಮಾಡಬಹುದಿತ್ತು. ಕೇಂದ್ರ ಸಚಿವರ ಕ್ಷೇತ್ರ ರಾಮನಗರಕ್ಕೂ ಏನಾದರೂ ಹೊಸದು ಯೋಜನೆ ಬಂದಿದೆಯೇ? ಕೈಗಾರಿಕಾ ಕಾರಿಡಾರ್ ಬಂದಿದೆಯೇ? ಮೇಕೆದಾಟು, ಕೈಗಾರಿಕೆ ಹಾಗೂ ಕೇಳಿದ ಅನುದಾನ ಯಾವುದೂ ಕೊಟ್ಟಿಲ್ಲ. ರಾಯಚೂರಿನಲ್ಲಿ ಏಮ್ಸ್ ಸ್ಥಾಪಿಸುವಂತೆ ಕೋರಿದ್ದೆವು. ಆದರೆ ಈ ಬಾರಿಯ ಬಜೆಟ್ನಲ್ಲೂ ಯಾವುದೇ ಪ್ರಸ್ತಾಪವಿಲ್ಲ. ಮೈಸೂರು ಅಥವಾ ಹಾಸನಕ್ಕೆ ಐ ಐ ಟಿ ಮಂಜೂರು ಮಾಡಲು ಮನವಿ ಮಾಡಿದ್ದೆವು,ಅದೂ ಕೂಡ ಆಗಿಲ್ಲ. ಹೀಗಾಗಿ ಅನ್ಯಾಯವಾಗಿಲ್ಲ ಎಂದರೆ ಹೇಗೆ? ನಿರ್ಮಲಾ ಸೀತಾರಾಮನ್ ಅವರು ಹಿಂದೆಯೂ ಸುಳ್ಳು ಹೇಳಿದ್ದರು, ಈಗಲೂ ಸುಳ್ಳು ಹೇಳಿದ್ದಾರೆ. 15ನೇ ಹಣಕಾಸು ಆಯೋಗದ ಅವಧಿಯಲ್ಲಿ ಅತಿ ಹೆಚ್ಚು ಅನ್ಯಾಯವಾಗಿರುವ ರಾಜ್ಯ ಕರ್ನಾಟಕ. ರಾಜ್ಯದಿಂದ ರಾಜ್ಯ ಸಭಾ ಸದಸ್ಯರಾಗಿರುವ ಅವರು ಕೈಗಾರಿಕೆಗಳೆಲ್ಲಾ ಬೇರೆ ರಾಜ್ಯಕ್ಕೆ ಹೋಗುತ್ತಿವೆ ಎಂದೂ ಹೇಳಿದ್ದಾರೆ. ಆದರೆ ನಮ್ಮ ಕೇಂದ್ರ ಸರ್ಕಾರದ ಹಣಕಾಸು ಸಚಿವರ ನೀತಿ, ಕಾರ್ಯಕ್ರಮಗಳಿಂದ 31% ನಮ್ಮ ದೇಶಕ್ಕೆ ಬರುತ್ತಿರುವ ಎಫ್.ಡಿ.ಐ ಕಡಿಮೆಯಾಗಿದೆ. ಕೇಂದ್ರಕ್ಕೆ ತೆರಿಗೆ ನೀಡುವಲ್ಲಿ ಮಹಾರಾಷ್ಟ್ರ ಮೊದಲ ಸ್ಥಾನದಲ್ಲಿದ್ದು, ಕರ್ನಾಟಕ 2ನೇ ಸ್ಥಾನದಲ್ಲಿದೆ. ಇನ್ನೇನು ಕೊಡುಗೆ ಕೊಡಬೇಕು? ನಿರ್ಮಲಾ ಸೀತಾರಾಮನ್ ಅವರೇ 2023-24 ನೇ ಸಾಲಿನ ಬಜೆಟ್‌ನಲ್ಲಿ ಹೇಳಿದಂತೆ ಭದ್ರಾ ಮೇಲ್ದಂಡೆ ಯೋಜನೆಗೆ ಘೋಷಣೆ ಮಾಡಿದ್ದ ರೂ.5,300 ಕೋಟಿಗಳನ್ನು ಕೊಟ್ಟಿಲ್ಲ. ಅವರ ಘೋಷಣೆ ನೋಡಿ ಅಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಕೂಡ ಬಜೆಟ್ ನಲ್ಲಿ ಪುನರುಚ್ಚರಿಸಿದ್ದರು. ಎಲ್ಲಿದೆ ಈ ಅನುದಾನ? ಎಂದು ಸಿಎಂ ಸಿದ್ದರಾಮಯ್ಯ ಕಿಡಿಕಾರಿದ್ದಾರೆ.

ನಿರ್ಮಲಾ ಸೀತಾರಾಮನ್ ಅವರು ಪತ್ರಿಕಾಗೋಷ್ಠಿ ಕರೆದು ಕರ್ನಾಟಕ ರಾಜ್ಯಕ್ಕೆ ಅನ್ಯಾಯವಾಗಿಲ್ಲ ಎಂದಿದ್ದಾರೆ. ರಾಜ್ಯಕ್ಕೆ ಏನೂ ಕೊಡದೆ ಅನ್ಯಾಯವಾಗಿಲ್ಲ ಎಂದರೆ ಹೇಗೆ? ಬಜೆಟ್ ಮೀಟಿಂಗ್ ಕರೆದಾಗ ಭದ್ರಾ ಮೇಲ್ದಂಡೆ ಯೋಜನೆಗೆ 5,300 ಕೋಟಿ ರೂಪಾಯಿಗಳನ್ನೂ ನೀಡುವುದಾಗಿ ಘೋಷಣೆ ಮಾಡಿದ್ದು, ಅದನ್ನು ಕೊಡಿ ಎಂದು ಕೋರಿದ್ದೆವು. ಈ ಬಾರಿಯ ಬಜೆಟ್ ನಲ್ಲಿ ಈ ಬಗ್ಗೆ ಪ್ರಸ್ತಾಪವಿಲ್ಲ. 15ನೇ ಹಣಕಾಸು ಆಯೋಗವು ಶಿಫಾರಸ್ಸು ಮಾಡಿದ್ದ 5,495 ಕೋಟಿಗಳ ವಿಶೇಷ ಅನುದಾನವನ್ನೂ ಕೊಟ್ಟಿಲ್ಲ. ಪೇರಿಫೇರಲ್ ರಿಂಗ್ ರೋಡ್ ಗೆ ರೂ.3,000 ಕೋಟಿ ಕೊಡುವುದಾಗಿ ಹೇಳಿದ್ದರು. ಅದೂ ಇಲ್ಲ. 3,000 ಕೋಟಿ ಕೆರೆಗಳ ಅಭಿವೃದ್ಧಿಗೆ ಕೊಡುವುದಾಗಿ ಹೇಳಿದ್ದರು. ಅದೂ ಕೂಡ ಬಜೆಟ್ ನಲ್ಲಿ ಇಲ್ಲ. ಇದು ಅನ್ಯಾಯವಲ್ಲವೇ? ಆಂಧ್ರ ಪ್ರದೇಶ, ಬಿಹಾರ ರಾಜ್ಯಗಳಿಗೆ ಭರಪೂರ ಅನುದಾನ ಕೊಟ್ಟಿದ್ದಾರೆ. ಕರ್ನಾಟಕಕ್ಕೆ ಏನು ಕೊಟ್ಟಿದ್ದಾರೆ? ಎಂದು ಸಿಎಂ ಸಿದ್ದರಾಮಯ್ಯ ಕಿಡಿಕಾರಿದ್ದಾರೆ.



### ಆ.1ರಂದು ರಾಜ್ಯ ಸರ್ಕಾರದ ಮಹತ್ವದ 'ಸಚಿವ ಸಂಪುಟ ಸಭೆ' ನಿಗದಿ

ಆಗಸ್ಟ್ 1 ರಂದು ಕರ್ನಾಟಕದ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ 15 ನೇ ಮಹತ್ವದ ಸಚಿವ ಸಂಪುಟ ಸಭೆ ನಿಗದಿಯಾಗಿದೆ.ರಾಜ್ಯದಲ್ಲಿ ವಿವಿಧ ಹಗರಣದ ಬಗ್ಗೆ ವಿಪಕ್ಷಗಳ ಆರೋಪ, ವಿವಿಧ ಯೋಜನೆ, ಕಾಮಗಾರಿ, ಹಣ ಬಿಡುಗಡೆ, ಬಗ್ಗೆ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಚರ್ಚೆ ನಡೆಯಲಿದೆ.ಈ ಬಗ್ಗೆ ಆರ್. ಚಂದ್ರಶೇಖರ್, ಸರ್ಕಾರದ ಜಂಟಿ ಕಾರ್ಯದರ್ಶಿ ಇವರು ಸುತ್ತೋಲೆ ಹೊರಡಿಸಿದ್ದು, ದಿನಾಂಕ: 1.08.2024, ಗುರುವಾರ ಬೆಳಗ್ಗೆ 11 ಗಂಟೆಗೆ ಸಚಿವ ಸಂಪುಟದ 2024ನೇ ಸಾಲಿನ 15 ನೇ ಸಭೆಯನ್ನು ವಿಧಾನಸೌಧದ ಸಚಿವ ಸಂಪುಟ ಸಭಾಮಂದಿರದಲ್ಲಿ ಕರೆಯಲಾಗಿದೆ.ಸಭೆಯ ಕಾರ್ಯಸೂಚಿಯನ್ನು ಪ್ರತ್ಯೇಕವಾಗಿ ಕಳುಹಿಸಲಾಗುವುದು ಎಂದಿದ್ದಾರೆ.

### ಸಚಿವ ಸಂಪುಟಕ್ಕೆ ಮೇಜರ್ ಸರ್ಜರಿ?

ರಾಜ್ಯ ಸಚಿವ ಸಂಪುಟಕ್ಕೆ ಮೇಜರ್ ಸರ್ಜರಿ ನಡೆಯಲಿದೆಯೇ? ಹೀಗೊಂದು ಚರ್ಚೆಯನ್ನು ಹುಟ್ಟುಹಾಕಿದೆ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಅವರ ದೆಹಲಿ ಪ್ರವಾಸ. ಲೋಕಸಭಾ ಚುನಾವಣಾ ಫಲಿತಾಂಶ, ಹಗರಣಗಳ ಆರೋಪದ ಬಳಿಕ ಇದೀಗ ಸಚಿವ ಸಂಪುಟಕ್ಕೆ ಮೇಜರ್ ಸರ್ಜರಿ ಆಗುವ ಸಾಧ್ಯತೆ ಇದ್ದು, ಕೆಲ ಸಚಿವರ ಬದಲಾವಣೆಯಾಗಲಿದೆ ಎಂದು ಹೇಳಲಾಗುತ್ತಿದೆ. ದೆಹಲಿಗೆ ತೆರಳಲಿರುವ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಹೈಕಮಾಂಡ್ ಜೊತೆ ಈ ನಿಟ್ಟಿನಲ್ಲಿಯೂ ಚರ್ಚೆ ನಡೆಸಲಿದ್ದಾರೆ ಎಂದು ತಿಳಿದುಬಂದಿದೆ. ಕೆಲ ಸಚಿವರ ಖಾತೆಗಳನ್ನು ಅದಲು ಬದಲು ಮಾಡುವ ನಿಟ್ಟಿನಲ್ಲಿ ಚಿಂತನೆ ನಡೆದಿದೆ.

**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹6,916/Gram24ct ₹6,340/Gram22ct | ಬೆಳ್ಳಿ: ₹85.00/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

# ಚೇಷ್ಟಿಸುವ ಗುಣ ಅನಿಲನದು

ನಿಜಗುಣರ ಪರಮಾನುಭವ ಬೋಧೆಯ ಮಾತು. ಶರೀರ ಕರ್ಮೇಂದ್ರಿಯ ಜ್ಞಾನೇಂದ್ರಿಯ ಅಂತಃಕರಣಗಳನ್ನು ಪ್ರಚೋದಿಸುವ ಗುಣ ವಾಯುವಿನದು, ಹೊರತು ಆತ್ಮನದ್ದಲ್ಲ. ದೇಹದಲ್ಲಿ ವಾಯುದೋಷ ಉಂಟಾದಾಗ ಶರೀರ ಕಾಯಿಲೆಗೆ ಒಳಗಾಗುತ್ತದೆ. ಹೊರತು ಆತ್ಮ ಚೈತನ್ಯದ ಕರ್ಮ ಅಕರ್ಮಗಳಿಂದಾದುದಲ್ಲ. ವಾಯುವು ನಾಗ ಕೂರ್ಮ ಕೃಕರ ದೇವದತ್ತ ಧನಂಜಯ ಎಂದು ಐದು ವಿಧವೆನಿಸಿ ವಾಕ್ ಪಾಣಿ ಪಾದ ಪಾಯು ಉಪಸ್ಥ ಎಂಬ ಐದು ಕರ್ಮೇಂದ್ರಿಯಗಳನ್ನು ಪ್ರಚೋದಿಸುವುದು, ಹೊರತು ಆತ್ಮನಲ್ಲ. ಇನ್ನು ಪ್ರಾಣ ಅಪಾನ ವ್ಯಾನ ಉದಾನ ಸಮಾನ ಎಂಬ ಐದು ವಾಯು ಕಿವಿ ನಾಲಿಗೆ ಚರ್ಮ ಮೂಗು ಕಣ್ಣು ಎಂಬ ಐದು ಜ್ಞಾನೇಂದ್ರಿಯಗಳನ್ನು ಶಬ್ದಾದಿ ಐದು ವಿಷಯಗಳಲ್ಲಿ ಪ್ರಚೋದಿಸುವುದು, ಹೊರತು ಆತ್ಮನಲ್ಲ. ಇನ್ನು ವೈರಂಭ ಮುಖ್ಯ ಪ್ರಭಂಜನ ಅಂತರ್ಯಾಮಿ ಮಹಾಪ್ರಾಣ ಎಂಬ ಐದು ವಿಧ ವಾಯು ಮನಸ್ಸು ಬುದ್ಧಿ ಚಿತ್ತ ಅಹಂಕಾರ ಜ್ಞಾತೃ ಎಂಬ ಐದು ಅಂತಃಕರಣಗಳನ್ನು ಪ್ರಚೋದಿಸುವುದು, ಹೊರತು ಆತ್ಮನಲ್ಲ. ಹೀಗಿದ್ದಾಗ್ಯೂ ಈ ವಾಯುವಿನ ಗುಣಧರ್ಮವನ್ನು ತನ್ನಲ್ಲಿ ಆರೋಪಿಸಿಕೊಂಡು ನಾನು ಮಾಡುತ್ತೇನೆ ಇತ್ಯಾದಿಯಾಗಿ ವ್ಯವಹರಿಸುವುದು ವಾಸ್ತವವಲ್ಲ.

## ಭಾರತದಲ್ಲೇ ಕರ್ನಾಟಕವು 2ನೇ ಅತಿ ಹೆಚ್ಚು ಹುಲಿಗಳನ್ನು ಹೊಂದಿರುವ ರಾಜ್ಯ

• ಉದಯವಾಹಿನಿ, ಬೆಂಗಳೂರು

ಭಾರತದಲ್ಲೇ ಕರ್ನಾಟಕವು 2ನೇ ಅತಿ ಹೆಚ್ಚು ಹುಲಿಗಳನ್ನು ಹೊಂದಿರುವ ರಾಜ್ಯವಾಗಿದೆ ಎಂದು ಸಚಿವ ಎಂ.ಬಿ ಪಾಟೀಲ್ ಹೇಳಿದ್ದಾರೆ. ಅಳಿವಿನ ಅಂಚಿನಲ್ಲಿರುವ ಹುಲಿಗಳ ಬಗೆಗೆ ಅರಿವು ಮೂಡಿಸುವ, ಅವುಗಳ ಸಂತತಿ ಸಂರಕ್ಷಿಸುವ ಕುರಿತು ಜಾಗೃತಿ ಮೂಡಿಸಲು ಪ್ರತಿ ವರ್ಷ ಜುಲೈ 29ರಂದು ವಿಶ್ವ ಹುಲಿ ದಿನಾಚರಣೆ ಆಚರಿಸಲಾಗುತ್ತಿದೆ. ಹುಲಿ ನಮ್ಮ ರಾಷ್ಟ್ರೀಯ ಪ್ರಾಣಿಯಾಗಿದ್ದು, ವಿಶ್ವದ ಶೇ. 70ರಷ್ಟು ವ್ಯಾಘ್ರಗಳು ನಮ್ಮ ದೇಶದಲ್ಲೇ ಇವೆ. ಭಾರತದಲ್ಲೇ ಕರ್ನಾಟಕವು 2ನೇ ಅತಿ ಹೆಚ್ಚು ಹುಲಿಗಳನ್ನು ಹೊಂದಿರುವ ರಾಜ್ಯವಾಗಿರುವುದು ನಮಗೆಲ್ಲಾ ಹೆಮ್ಮೆಯ ಸಂಗತಿ ಎಂದು ಸಚಿವ ಎಂ.ಬಿ ಪಾಟೀಲ್ ಹೇಳಿದ್ದಾರೆ.

## ನಟ ದರ್ಶನ್ ಮನೆ ಊಟಕ್ಕೆ ಅನುಮತಿ ಕೋರಿ ಸಲ್ಲಿಸಿದ್ದ ಅರ್ಜಿ ವಾಪಸ್

• ಉದಯವಾಹಿನಿ, ಬೆಂಗಳೂರು

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ಜೈಲು ಪಾಲಾಗಿದ್ದಾರೆ. ಜೈಲಿನಲ್ಲಿ ಇರುವಂತ ಅವರು ಮನೆ ಊಟಕ್ಕೆ ಅನುಮತಿ ನೀಡುವಂತೆ ಕೋರಿ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಇಂತಹ ಅರ್ಜಿಯನ್ನು ವಾಪಾಸ್ ಪಡೆದಿದ್ದಾರೆ. ನಟ ದರ್ಶನ್ ಅವರು ಪರಪ್ಪನ ಅಗ್ರಹಾರ ಜೈಲಿನಲ್ಲಿ ಕೊಲೆ ಕೇಸಲ್ಲಿ ಇದ್ದಾರೆ. ತಮ್ಮ ಪರ ವಕೀಲರ ಮೂಲಕ ಜೈಲು ಊಟ ಬೇಡ, ಮನೆಯೂಟಕ್ಕೆ ಅವಕಾಶ ಮಾಡಿ ಕೊಡುವಂತೆ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಅರ್ಜಿಯನ್ನು ವಿಚಾರಣೆ ನಡೆಸಿದ್ದಂತ ಕೋರ್ಟ್ ಮನೆ ಊಟಕ್ಕೆ ಅನುಮತಿಸುವುದಕ್ಕೆ ನಿರಾಕರಿಸಿ, ಅರ್ಜಿ ವಜಾಗೊಳಿಸಿತ್ತು. ಹಿನ್ನಲೆಯಲ್ಲಿ ಮತ್ತೆ ಮೇಲ್ಮನವಿಯನ್ನು ಕೋರ್ಟ್‌ಗೆ ಸಲ್ಲಿಸಲಾಗಿತ್ತು. ಆದ್ರೇ ತಾಂತ್ರಿಕ ಕಾರಣದಿಂದಾಗಿ ನಟ ದರ್ಶನ್ ಪರ ವಕೀಲ ಅರುಣ್ ಅವರು ಮನೆ ಊಟ ಕೋರಿ ಸಲ್ಲಿಸಲಾಗಿದ್ದಂತ ಅರ್ಜಿಯನ್ನು ವಾಪಾಸ್ ಪಡೆದಿದ್ದಾರೆ. ಈ ಬಗ್ಗೆ ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ.

## ಕಣ್ಣು ಮುಚ್ಚಿ ತೆರೆಯೋ ಹೊತ್ತಿಗೆ ಮಾಯವಾಗುವ ವಾಹನ ಸವಾರರೇ ಎಚ್ಚರ!

• ಉದಯವಾಹಿನಿ, ಬೆಂಗಳೂರು

ರಸ್ತೆಯಲ್ಲಿ ವೇಗವಾಗಿ ವಾಹನ ಚಲಾಯಿಸುವ ಸವಾರರಿಗೆ ಬ್ರೇಕ್ ಹಾಕಲು ಪೊಲೀಸ್ ಇಲಾಖೆ ಮುಂದಾಗಿದೆ. ಅತಿ ವೇಗವಾಗಿ ಸಂಚಾರ ಮಾಡುವ ಸವಾರರು ತಮ್ಮ ವೇಗಕ್ಕೆ ಕಡಿವಾಣ ಹಾಕಿದೇ ಇದ್ದಲ್ಲಿ ಅಂಥವರ ವಿರುದ್ಧ ಎಫ್‌ಐಆರ್ ದಾಖಲಿಸಲು ನಿರ್ಧರಿಸಲಾಗಿದೆ. ಹೌದು.. ಇದೇ ಆಗಸ್ಟ್ 1 ರಿಂದ 130 ಕಿ.ಮೀ.ಗಿಂತ ಹೆಚ್ಚಿನ ವೇಗದಲ್ಲಿ ಸಂಚರಿಸುವ ವಾಹನಗಳ ವಿರುದ್ಧ ಎಫ್‌ಐ ಆರ್ ದಾಖಲಿಸಲು ಪೊಲೀಸ್ ಇಲಾಖೆ ನಿರ್ಧರಿಸಿದೆ. ಸ್ಥಳೀಯ ಸಿಸಿಟಿವಿ ಕ್ಯಾಮರಾ, ಸ್ಪಾಟ್ ಸ್ಪೀಡ್, ಸೆಕ್ಷನಲ್ ಸ್ಪೀಡ್ ಆಧಾರದಲ್ಲಿ ವಾಹನ ಚಾಲಕನ ವಿರುದ್ಧ ಪ್ರಕರಣ ದಾಖಲಿಸಲಾಗುತ್ತದೆ. ಆಗಸ್ಟ್ 1ರಿಂದ ವೇಗವಾಗಿ ಸಂಚಾರ ಮಾಡುವ ವಾಹನ ಸವಾರರ ಮೇಲೆ ನಿಗಾ ಇಡಲಾಗುವುದು. ಒಂದು ವೇಳೆ ಸವಾರರು 130 ಕಿ.ಮೀ.ಗಿಂತ ಹೆಚ್ಚಿನ ವೇಗದಲ್ಲಿ ವಾಹನ ಸಂಚಾರ ಮಾಡಿದರೆ ಅಂಥವರ ವಿರುದ್ಧ ಎಫ್‌ಐಆರ್ ದಾಖಲಿಸಲಾಗುವುದು ಎಂದು ಸಂಚಾರ, ರಸ್ತೆ ಸುರಕ್ಷತಾ ವಿಭಾಗ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಅಲೋಕ್ ಕುಮಾರ್ ತಿಳಿಸಿದ್ದಾರೆ. ವೇಗದ ಸಂಚಾರಕ್ಕೆ ಬ್ರೇಕ್ ಹಾಕಲು ಈ ಕ್ರಮ ಕೈಗೊಳ್ಳಲಾಗಿದೆ. ಒಂದು ವೇಳೆ ನಿಯಮ ಮೀರಿ ರಸ್ತೆಯಲ್ಲಿ ವಾಹನ ಸಂಚಾರ ಮಾಡಿದರೆ ಎರಡು ಸಾವಿರ ರೂಪಾಯಿ ದಂಡ ಅಥವಾ ಆರು ತಿಂಗಳು ಜೈಲು ಶಿಕ್ಷೆ ವಿಧಸಬಹುದು ಎಂದು ಅಲೋಕ್ ಕುಮಾರ್ ತಿಳಿಸಿದ್ದಾರೆ.

## ಬೆಂಗಳೂರು-ಮಂಗಳೂರು ರೈಲು ಸಂಚಾರ ಬಂದ್: ಟಿಕೆಟ್ ದರ ಏರಿಕೆ

• ಉದಯವಾಹಿನಿ, ಬೆಂಗಳೂರು

ಭಾರಿ ಮಳೆಯಿಂದಾಗಿ ಹಲವೆಡೆ ಗುಡ್ಡ ಕುಸಿತವುಂಟಾಗಿದ್ದು, ಈ ಹಿನ್ನೆಲೆಯಲ್ಲಿ ಮತ್ತೆ 14 ರೈಲುಗಳ ಸಂಚಾರವನ್ನು ರೈಲ್ವೆ ಇಲಾಖೆ ರದ್ದುಗೊಳಿಸಿದೆ. ಬೆಂಗಳೂರಿನಿಂದ ಮಂಗಳೂರಿಗೆ ತೆರಳುವ ರೈಲುಗಳು ರದ್ದಾಗಿದ್ದು, ಊರಿಗೆ ಹೋಗ ಬೇಕಾದ ಪ್ರಯಾಣಿಕರು ಬೆಲೆ ತೆರಬೇಕಾದ ಸ್ಥಿತಿ ಎದುರಾಗಿದೆ. ರೈಲುಗಳು ಸ್ಥಗಿತಗೊಂಡಿರುವ ಹಿನ್ನೆಲೆಯಲ್ಲಿ ಖಾಸಗಿ ಬಸ್‌ಗಳು ಇದನ್ನೇ ಬಂಡವಾಳ ಮಾಡಿಕೊಂಡಿದ್ದು, ಬಸ್ ಪ್ರಯಾಣ ದರ ಹೆಚ್ಚಿಸಿದ್ದಾರೆ. ಬೆಂಗಳೂರಿನಿಂದ ಮಂಗಳೂರಿಗೆ ತೆರಳುವ ಖಾಸಗಿ ಬಸ್‌ಗಳ ಟಿಕೆಟ್ ದರ ದುಪ್ಪಟ್ಟಾಗಿದೆ. 500 ರೂ, 600 ರೂ ಇದ್ದ ಟಿಕೆಟ್ ದರ ಏಕಾಏಕಿ 1000 ರೂ. ನಿಂದ 1200 ರೂ.ಗೆ ಏರಿಸಲಾಗಿದೆ. ಎಸಿ ಬಸ್ ಗಳ ಟಿಕೆಟ್ ದರವಂತು 2000ರೂ ನಿಂದ 4000 ರೂವರೆಗೂ ಏರಿಕೆಯಾಗಿದೆ. ಧರ್ಮಸ್ಥಳ, ಕುಕ್ಕೆ ಸುಬ್ರಹ್ಮಣ್ಯಕ್ಕೆ ಹೋಗುವ ಜನರಿಗೆ ಬಸ್ ಟಿಕೆಟ್ ದರ ಏರಿಕೆ ಶಾಕ್ ನೀಡಿದೆ.

## ನೆರೆಪೀಡಿತ ಪ್ರದೇಶಗಳಿಗೆ ಭೇಟಿ

• ಉದಯವಾಹಿನಿ, ಬೆಂಗಳೂರು

ಭಾರತದಲ್ಲಿ ಉಂಟಾಗಿರುವ ನೆರೆ ಹಾವಳಿಯನ್ನು ಪರಿಶೀಲಿಸಿ ಸ್ಪಂದಿಸುವ ನಿಟ್ಟಿನಲ್ಲಿ ಪ್ರತಿಪಕ್ಷ ಬಿಜೆಪಿ ನಾಯಕರ ತಂಡವನ್ನು ರಚಿಸಿದೆ. ಈಗಾಗಲೇ ಉತ್ತರಕರ್ನಾಟಕ ಮಲೆನಾಡು ಭಾಗದಲ್ಲಿ ಮಳೆಯಿಂದ ಅಪಾರ ಪ್ರಮಾಣದ ಬೆಳೆ ಹಾನಿ, ಆಸ್ತಿಪಾಸ್ತಿ ಹಾನಿಗೊಂಡಿದ್ದು, ಈ ಜನತೆಯ ಸಂಕಷ್ಟಕ್ಕೆ ಸ್ಪಂದಿಸುವ ನಿಟ್ಟಿನಲ್ಲಿ ಪ್ರತಿಪಕ್ಷದ ನಾಯಕ ಆರ್.ಅಶೋಕ್, ಮಾಜಿ ಸಚಿವರಾದ ಅಶ್ವಥನಾರಾಯಣ, ಜ್ಞಾನೇಂದ್ರ, ಶ್ರೀರಾಮುಲು, ಮಾಜಿ ಸಚಿವೆ ಶಶಿಕಲಾ ಜೊಲ್ಲೆ, ಮೇಲನೆ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ವಿಧಾನಸಭೆಯ ವಿರೋಧ ಪಕ್ಷದ ಉಪನಾಯಕ ಅರವಿಂದ್ ಬೆಲ್ಲದ್ ನೇತೃತ್ವದಲ್ಲಿ 6 ತಂಡಗಳನ್ನು ರಚಿಸಲಾಗಿದ್ದು, ಇದರಲ್ಲಿ ಶಾಸಕರು, ರಾಜ್ಯ ಮಟ್ಟದ ಮುಖಂಡರು ಇರಲಿದ್ದು, ರಾಜ್ಯಾದ್ಯಂತ ಸಂಚರಿಸಲಿದೆ.
ವಿಧಾನಪರಿಷತ್ ವಿಪಕ್ಷ ನಾಯಕ ನಾರಾಯಣಸ್ವಾಮಿ ನೇತೃತ್ವದ ತಂಡ ರಾಯಚೂರು, ಯಾದಗಿರಿ ಜಿಲ್ಲೆಗಳಲ್ಲಿ ಪರಿಶೀಲನೆ ನಡೆಸಿದರೆ ಅರವಿಂದ್ ಬೆಲ್ಲದ್ ನೇತೃತ್ವದ ತಂಡ ಬಾಗಲಕೋಟೆ, ಬಿಜಾಪುರ ಜಿಲ್ಲೆಗಳಲ್ಲಿ ಪರಿಶೀಲನೆ ನಡೆಸಲಿದೆ.

# ಪಾದಯಾತ್ರೆಯನ್ನು ಹತ್ತಿಕ್ಕಲು ಸಾಧ್ಯವಿಲ್ಲ: ಬಿವೈವಿ

■ ನಿಮ್ಮ ಗೊಡ್ಡು ಬೆದರಿಕೆಗೆ ನಮ್ಮ ಕಾರ್ಯಕರ್ತರು ಅಂಜುವುದಿಲ್ಲ ಎಚ್ಚರಿಕೆ ■ ಮುಡಾ ಬಡವರಿಗೆ ಹಂಚಿಕೆ ಆಗಲಿ

• ಉದಯವಾಹಿನಿ, ಬೆಂಗಳೂರು


ವಿಪಕ್ಷಗಳಿಗೆ ಗೊಡ್ಡು ಬೆದರಿಕೆ ಹಾಕುವ ಮೂಲಕ ನಮ್ಮ ಹೋರಾಟವನ್ನು, ಪಾದಯಾತ್ರೆಯನ್ನು ಹತ್ತಿಕ್ಕಲು ಸಾಧ್ಯವಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಸವಾಲು ಹಾಕಿದರು.

ಬಿ.ವೈ. ವಿಜಯೇಂದ್ರ ಸವಾಲು

ನಗರದಲ್ಲಿ ನಡೆದ ಮೈಸೂರು ಪಾದಯಾತ್ರೆಯ ಪೂರ್ವ ತಯಾರಿ ಸಭೆಯ ಸಂದರ್ಭದಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯನವರೇ, ಉಪ ಮುಖ್ಯಮಂತ್ರಿ ಶಿವಕುಮಾರರೇ ನಿಮ್ಮ ಗೊಡ್ಡು ಬೆದರಿಕೆಗೆ ನಮ್ಮ ಕಾರ್ಯಕರ್ತರು ಅಂಜುವುದಿಲ್ಲ ಎಂದು ಎಚ್ಚರಿಕೆ ನೀಡಿದರು.ಇಡೀ ರಾಜ್ಯದ ಪರಿಶಿಷ್ಟ ಜಾತಿ, ಪಂಗಡಗಳ ಪರವಾಗಿ ನಮ್ಮ ಹೋರಾಟ ನಿರಂತರವಾಗಿ ಇರಲಿದೆ. ಪರಿಶಿಷ್ಟರ ಸಮುದಾಯದ ಹಣಲೂಟಿ ಮಾಡಿದ್ದಾರೆ. ಸಾವಿರಾರು ಕೋಟಿಯ ಭ್ರಷ್ಟಾಚಾರ ನಡೆಸಿದ್ದಾರೆ. ಇವುಗಳ ವಿರುದ್ಧ ಹೋರಾಟ ನಡೆಸದೆ ಇದ್ದರೆ ಭಗವಂತನೂ ನಮ್ಮನ್ನು ಕ್ಷಮಿಸುವುದಿಲ್ಲ ಎಂದು ನುಡಿದರು.

ವಾಲ್ಮೀಕಿ ನಿಗಮದ ನೂರಾರು ಕೋಟಿ ಹಣವನ್ನು ಅಸ್ತಿತ್ವದಲ್ಲೇ ಇಲ್ಲದ ಕಂಪೆನಿಗಳ ಖಾತೆಗಳಿಗೆ ವರ್ಗಾಯಿಸಲಾಗಿತ್ತು. ಪರಿಶಿಷ್ಟ ಪಂಗಡಗಳಿಗೆ ಸೇರಿದ ಈ ಹಣವನ್ನು ಬಳಿಕ ಅದನ್ನು ಲೋಕಸಭಾ ಚುನಾವಣೆಯಲ್ಲಿ ದುರ್ಬಳಕೆ ಮಾಡಿದ್ದರು. ಹೆಂಡ ಖರೀದಿಯೂ ಮಾಡಿದ್ದನ್ನು ಇ.ಡಿ. ಉಲ್ಲೇಖಿಸಿದೆ ಎಂದು ಗಮನ ಸೆಳೆದರು. ಬಿಜೆಪಿ, ವಾಲ್ಮೀಕಿ ನಿಗಮದ ಹಗರಣ ಮತ್ತು ಮೂಡಾ ಹಗರಣ ವಿರುದ್ಧ ನಿರಂತರ ಹೋರಾಟ ಮಾಡುತ್ತ ಬಂದಿದೆ. ಮೂಡಾದಲ್ಲಿ ಸಿದ್ದರಾಮಯ್ಯನವರ ಕುಟುಂಬ ಪಡೆದ 14 ನಿವೇಶನಗಳು ಮೂಡಾಕ್ಕೆ ವಾಪಸ್ ಬಂದು ಬಡವರಿಗೆ ಹಂಚಿಕೆ ಆಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮೂರರಿಂದ ನಾಲ್ಕು ಸಾವಿರ ಕೋಟಿ ಬೆಲೆ ಬಾಳುವ ನಿವೇಶನಗಳನ್ನು ಮನಸೋ ಇಚ್ಛೆ ಕೊಡಲಾಗಿದೆ. ಸ್ವತಃ ಸಿದ್ದರಾಮಯ್ಯನವರೇ ನೇಮಿಸಿದ ಮೂಡಾ ಅಧ್ಯಕ್ಷ ಮರಿಗೌಡರೇ ಇದನ್ನು ಬಾಯಿ ಬಿಟ್ಟಿದ್ದಾರೆ ಎಂದು ಅವರು ವಿವರಿಸಿದರು. ಇನ್ನು ಮುಂದೆ ನಿವೇಶನ ಹಂಚದಿರಲು ಕಡತದಲ್ಲಿ ಮೂಡಾ ಅಧ್ಯಕ್ಷರೇ ಸೂಚಿಸಿದ್ದರು.ಜಿಲ್ಲಾಧಿಕಾರಿ ತನಿಖೆ ಯನ್ನೂ ಮಾಡಿಸಿದ್ದರು. ತನಿಖಾ ವರದಿಯನ್ನು ರಾಜ್ಯ ಸರಕಾರಕ್ಕೆ ಸಲ್ಲಿಸಿದ್ದು, ಅದು ಸರಿ ಇರುವುದಾಗಿ ಸರಕಾರವೂ ಹೇಳಿತ್ತು ಎಂದು ತಿಳಿಸಿದರು. ನಿವೇಶನ ನೀಡದಂತೆ ಸರಕಾರದ ಆದೇಶದ ನಂತರವೂ ಮೂಡಾ ಕಮೀಷನರ್ ಯಥೇಚ್ಛವಾಗಿ ನಿವೇಶನ ಹಂಚಿದ್ದರು ಎಂದು ಆಕ್ಷೇಪಿಸಿದರು. ವಿಧಾನಸಭೆ, ವಿಧಾನಪರಿಷತ್ತಿನಲ್ಲಿ ನಾವು ಈ ಕುರಿತು ಒತ್ತಡ ಹೇರಿ ಚರ್ಚೆಗೆ ಅವಕಾಶ ಪಡೆದಿದ್ದೇವೆ ಎಂದು ಹೇಳಿದರು. ರಾಜ್ಯದಲ್ಲಿ ಅಭಿವೃದ್ಧಿ ಸಂಪೂರ್ಣ ಸ್ಥಗಿತವಾಗಿದೆ. ಬಿಜೆಪಿ ಸರಕಾರ ಇದ್ದಾಗ ಕೊಟ್ಟಿದ್ದ ಅನುದಾವನ್ನು ಸ್ಥಗಿತಗೊಳಿಸಿದ್ದಾರೆ ಎಂದು ಟೀಕಿಸಿದರು.ವಾಲ್ಮೀಕಿ ನಿಗಮದಲ್ಲಿ 187 ಕೋಟಿ ಅವ್ಯವಹಾರ ನಡೆದಿದೆ ಎಂದು ಯೂನಿಯನ್ ಬ್ಯಾಂಕ್, ಸಿಬಿಐಗೆ ಪತ್ರ ಬರೆದಿದೆ. ಸಿಬಿಐ ತನಿಖೆ ಮಾಡಬೇಕೆಂದು ಅದು ಕೋರಿತ್ತು ಎಂದು ತಿಳಿಸಿದರು. ಕಾನೂನಿನಡಿಯೇ ಸಿಬಿಐ ತನಿಖೆ ನಡೆಯುತ್ತಿದೆ ಎಂದು ಹೇಳಿದರು.ಸರಕಾರ ರಚಿಸಿದ ಎಸ್‌ಐಟಿ ಎಂದರೆ ಅದು ಸಿದ್ದರಾಮಯ್ಯ ಇನ್‌ವೆಸ್ಟಿಗೇಶನ್ ಟೀಂ ಎಂದು ತಿಳಿಸಿದರು. ಅಹಿಂದ ಸಮುದಾಯಕ್ಕೆ ವಂಚಿಸುವ ಕೆಲಸವನ್ನು ಮುಖ್ಯಮಂತ್ರಿಗಳು ಮಾಡುತ್ತಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಪಕ್ಷದ ನಾಯಕರ ನೇತೃತ್ವದಲ್ಲಿ ನೆರೆ ಪ್ರದೇಶ ವೀಕ್ಷಣಾ ತಂಡಗಳನ್ನು ರಚಿಸಲಾಗಿದೆ ಎಂದು ಅವರು ಇದೇವೇಳೆ ಮಾಧ್ಯಮ ಪ್ರತಿನಿಧಿಗಳಿಗೆ ಪ್ರಶ್ನೆಗೆ ಉತ್ತರವಾಗಿ ತಿಳಿಸಿದರು. ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದಗೌಡ, ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಸುನೀಲ್‌ಕುಮಾರ್, ಪ್ರೀತಂ ಗೌಡ, ಕುಡಚಿ ರಾಜೀವ್, ನಂದೀಶ್ ರೆಡ್ಡಿ, ಮಾಜಿ ಸಚಿವ ಬೈರತಿ ಬಸವರಾಜ್, ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಮಾಜಿ ಸಂಸದರು, ಮಾಜಿ ಶಾಸಕರು, ವಿಧಾನಪರಿಷತ್ ಮಾಜಿ ಸದಸ್ಯರು, ಜಿಲ್ಲಾಧ್ಯಕ್ಷರು ಮತ್ತು ಪಕ್ಷದ ಪ್ರಮುಖರು ಉಪಸ್ಥಿತರಿದ್ದರು.



**ವಾಲ್ಮೀಕಿ ನಿಗಮದ ಹಣ ಅವ್ಯವಹಾರದಿಂದ ಪರಿಶಿಷ್ಟ ಸಮುದಾಯಗಳಿಗೆ ಅನ್ಯಾಯವಾಗಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಮೂಡಾದಲ್ಲೂ ಬಹುದೊಡ್ಡ ಹಗರಣ ಆಗಿದೆ. ಅಲ್ಲದೆ, ಪರಿಶಿಷ್ಟರಿಗೆ ಮೀಸಲಿಟ್ಟ 25 ಸಾವಿರ ಕೋಟಿ ಹಣವನ್ನು ಅನ್ಯ ಉದ್ದೇಶಕ್ಕೆ ಬಳಸಿಕೊಂಡು ಅನ್ಯಾಯ ಮಾಡಿದ್ದಾರೆ ಎಂದು ವಿವರಿಸಿದರು.**

-ವಿಧಾನಪರಿಷತ್ತಿನ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ

**ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ್ ಅವರು ಮಾತನಾಡಿ, ಸಿದ್ದರಾಮಯ್ಯನವರ ಬಾವಮೈದುನನವರು 3.16 ಎಕರೆ ಜಮೀನನ್ನು ಅತಿ ಕಡಿಮೆ ಬೆಲೆಗೆ ಪಡೆದಿದ್ದಾರೆ. ಇದೇನಾ ನಿಮ್ಮ ಜನಪರತೆ ಎಂದು ಕೇಳಿದರು. ಮೂಡಾವು ವಶಕ್ಕೆ ಪಡೆದಿದ್ದ ಜಾಗವನ್ನು ಖರೀದಿಸಲಾಗಿತ್ತು ಎಂದು ವಿವರಿಸಿದರು.**

## ಶೀಘ್ರದಲ್ಲೇ ಕೊನೆಗೊಳ್ಳಲಿದೆ ಬೆಂಗಳೂರು ಟ್ರಾಫಿಕ್ ಸಮಸ್ಯೆ!

• ಉದಯವಾಹಿನಿ, ಬೆಂಗಳೂರು

ಸಾಮಾನ್ಯವಾಗಿ ರಸ್ತೆಗಳಲ್ಲಿ ವಾಹನಗಳ ಉದ್ದನೆಯ ಸರತಿ ಸಾಲುಗಳು ಕಂಡುಬರುತ್ತಿದೆ ಎಂದರೆ ನಾವು ಸಿಲಿಕಾನ್ ಸಿಟಿಗೆ ಎಂಟ್ರಿ ಕೊಡುತ್ತಿದ್ದೇವೆ ಎಂದೆ ಅರ್ಥ. ಟ್ರಾಫಿಕ್ ಜಾಮ್ ಎಂದರೆ ಬೆಂಗಳೂರು ಎಂಬಂತೆ ಆಗಿದೆ. ಆದರೆ, ಶೀಘ್ರದಲ್ಲೇ ರಾಜಧಾನಿಯ ಟ್ರಾಫಿಕ್ ಜಾಮ್‌ಗೆ ಕಡಿವಾಣ ಬೀಳಲಿದೆ.



ಉದಯವಾಹಿನಿ ಚಿತ್ರ

ಹೌದು... ಬೆಂಗಳೂರು ನಗರದಲ್ಲಿ ಶೀಘ್ರದಲ್ಲೇ ಟ್ರಾಫಿಕ್ ಜಾಮ್ ಕಡಿಮೆ ಆಗಲಿದೆ. ಏಕೆಂದರೆ ಕರ್ನಾಟಕ ಸರ್ಕಾರವು ಬೆಂಗಳೂರಿನ 17 ಸ್ಥಳಗಳಲ್ಲಿ 100 ಕಿಲೋಮೀಟರ್ ಸಿಗ್ನಲ್ ಮುಕ್ತ ಕಾರಿಡಾರ್‌ಗಳನ್ನು ಅಭಿವೃದ್ಧಿಪಡಿಸುವ ಯೋಜನೆಯನ್ನು ಪ್ರಕಟಿಸಿದೆ. ರಾಜ್ಯ ಸರ್ಕಾರ ಮಹತ್ವಾಕಾಂಕ್ಷೆಯ ಯೋಜನೆಗೆ ಬರೋಬ್ಬರಿ 12,000 ಕೋಟಿ ರೂಪಾಯಿಗಳನ್ನು ಮೀಸಲಿಟ್ಟಿದೆ.

ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ಅಭಿವೃದ್ಧಿ ಸಚಿವ ಡಿ.ಕೆ. ಶಿವಕುಮಾರ್ ಅವರು, 100 ಕಿಲೋಮೀಟರ್ ಉದ್ದದ ರಸ್ತೆಗಳನ್ನು ಸಿಗ್ನಲ್ ಮುಕ್ತ ಕಾರಿಡಾರ್‌ಗಳಾಗಿ ಪರಿವರ್ತಿಸಲು ನಗರದ ಪ್ರಮುಖ ರಸ್ತೆಗಳಲ್ಲಿ 17 ಎಲಿವೇಟೆಡ್ ಕಾರಿಡಾರ್‌ಗಳನ್ನು ನಿರ್ಮಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ ಎಂದು ಘೋಷಿಸಿದ್ದಾರೆ. ಇದರಲ್ಲಿ ಬೆಂಗಳೂರಿನ ಸಂಚಾರ ದಟ್ಟಣೆಯನ್ನು ನಿವಾರಿಸಲು ಉದ್ದೇಶಿಸಿರುವ ಸುರಂಗ ರಸ್ತೆಯ ಹೊರತಾಗಿದೆ.ಯೋಜನೆ ಕುರಿತು ವಿವರ ನೀಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ನಗರದ ಮೂಲಸೌಕರ್ಯ ಅಭಿವೃದ್ಧಿ ಯೋಜನೆಗಳ ಕುರಿತು ಎಲ್ಲಾ ರಾಜಕೀಯ ಪಕ್ಷಗಳ ಶಾಸಕರೊಂದಿಗೆ ಚರ್ಚಿಸಲಾಗಿದೆ. ರಾಜ್ಯ ಸರ್ಕಾರವು ಸುಮಾರು 17 ಸ್ಥಳಗಳನ್ನು ಗುರುತಿಸಿದೆ ಎಂದು ಮಾಹಿತಿ ನೀಡಿದ್ದಾರೆ.

ಕರ್ನಾಟಕ ಸರ್ಕಾರವು ಬೆಂಗಳೂರಿನ 17 ಸ್ಥಳಗಳಲ್ಲಿ 100 ಕಿಲೋಮೀಟರ್ ಸಿಗ್ನಲ್ ಮುಕ್ತ ಕಾರಿಡಾರ್‌ಗಳನ್ನು ಅಭಿವೃದ್ಧಿಪಡಿಸುವುದಾಗಿ ಹೇಳಿದೆ. ಮಹತ್ವಾಕಾಂಕ್ಷೆಯ ಯೋಜನೆಗೆ 12,000 ಕೋಟಿ ರೂಪಾಯಿ ವೆಚ್ಚವಾಗಲಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಂಚಾರ ವಿಶ್ಲೇಷಣೆ ಮತ್ತು ಮುಂದಿನ ಕೆಲವು ವರ್ಷಗಳ ಯೋಜಿತ ಬೆಳವಣಿಗೆಯ ಮಾದರಿಗಳನ್ನು ಆಧರಿಸಿ ಈ ಸ್ಥಳಗಳನ್ನು ಆಯ್ಕೆ ಮಾಡಿದೆ.

ನಗರಕ್ಕೆ ಯೋಜಿಸಲಾದ ಪ್ರಮುಖ ಸಿಗ್ನಲ್-ಮುಕ್ತ ಕಾರಿಡಾರ್‌ಗಳು 23 ಕಿಲೋಮೀಟರ್ ವ್ಯಾಪ್ತಿಯನ್ನು ಒಳಗೊಂಡಿವೆ. ಕೆ.ಆರ್ ಪುರದಿಂದ ಯಶವಂತಪುರ-ಗೊರಗುಂಟೆಪಾಳ್ಯ, ಆನೆಪಾಳ್ಯದಿಂದ ಸಿಲ್ಕ್ ಬೋರ್ಡ್‌ವರೆಗೆ 5.5 ಕಿಲೋಮೀಟರ್, ಹೊಸೂರು ರಸ್ತೆ ಕಾರಿಡಾರ್ ಮತ್ತು ಮಾರೇನಹಳ್ಳಿಯಿಂದ ಕನಕಪುರ ರಸ್ತೆ-ತಲಘಟ್ಟಪುರ ನೈಸ್ ರಸ್ತೆವರೆಗೆ 10 ಕಿಲೋಮೀಟರ್ ಎಲಿವೇಟೆಡ್ ಕಾರಿಡಾರ್. ಹೆಚ್ಚುವರಿಯಾಗಿ, ಮಿನರ್ವ ದಿಂದ ಕಬ್ಬನ್ ಪಾರ್ಕ್‌ವರೆಗೆ 2.7 ಕಿಲೋಮೀಟರ್ ರಸ್ತೆಯನ್ನು ಪ್ರಸ್ತಾಪಿಸಲಾಗಿದೆ.

**ರಾಜ್ಯ ಸಚಿವ ಸಂಪುಟದಲ್ಲಿ ಯೋಜನೆ ಪ್ರಸ್ತಾಪವಾಗಿರುವುದರಿಂದ ಯೋಜನೆಯ ಗಡುವು ಇನ್ನೂ ನಿಗದಿಯಾಗಿಲ್ಲ. ಬಿಬಿಎಂಪಿ ಶೀಘ್ರದಲ್ಲೇ ಇತರೆ ವಿವರಗಳನ್ನು ಹಂಚಿಕೊಳ್ಳಲಿದೆ. ಹೆಚ್ಚಿನ ಸಂಚಾರ ದಟ್ಟಣೆ ಇರುವ ಸ್ಥಳಗಳನ್ನು ಯೋಜನೆಗೆ ಆಯ್ಕೆ ಮಾಡಿಕೊಳ್ಳಲಾಗಿದೆ. ಈ ಯೋಜನೆಗಾಗಿ ಟ್ರಾಫಿಕ್ ಪರಿಸ್ಥಿತಿಯನ್ನು ಎಚ್ಚರಿಕೆಯಿಂದ ಅಧ್ಯಯನ ಮಾಡಲಾಗಿದೆ ಎಂದು ಬಿಬಿಎಂಪಿ ಅಧಿಕಾರಿಯೊಬ್ಬರು ಮಾಧ್ಯಮಗಳಿಗೆ ತಿಳಿಸಿದ್ದಾರೆ.**

## ನಿರ್ಬಂಧದ ನಂತರ ಪೀಣ್ಯ ಫ್ಲೈಓವರ್ ಪ್ರಯಾಣಿಕರಿಗೆ ಸಂಚಾರ ಮುಕ್ತ

• ಉದಯವಾಹಿನಿ, ಬೆಂಗಳೂರು

ಭಾರೀ ವಾಹನಗಳಿಗೆ 2 ವರ್ಷಗಳಿಂದ ಮುಚ್ಚಲ್ಪಟ್ಟಿದ್ದ ಬೆಂಗಳೂರಿನ ಪಿಬಿ ರಸ್ತೆಯ ಪೀಣ್ಯ ಫ್ಲೈಓವರ್ ಎಲ್ಲಾ ರೀತಿಯ ವಾಹನಗಳಿಗೆ ಮತ್ತೆ ತೆರೆಯಲಿದೆ. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಮತ್ತು ಸ್ಥಳೀಯ ಸಂಚಾರ ಪೊಲೀಸರು ಫ್ಲೈಓವರ್ ಬಳಕೆಗೆ ಅನುಮೋದನೆ ನೀಡಿದ್ದಾರೆ.

ಈ ಹಿಂದೆ ಬಸ್, ಲಾರಿ, ಟ್ರಕ್‌ಗಳಂತಹ ಭಾರೀ ವಾಹನಗಳು ಫ್ಲೈಓವರ್ ಬಳಸುವುದನ್ನು ನಿಷೇಧಿಸಲಾಗಿತ್ತು, ಇದು ತುಮಕೂರು ರಸ್ತೆಯಲ್ಲಿ ತೀವ್ರ ಸಂಚಾರ ದಟ್ಟಣೆಗೆ ಕಾರಣವಾಯಿತು. ಈ ನಿರ್ಬಂಧದಿಂದಾಗಿ ಉತ್ತರ, ದಕ್ಷಿಣ ಮತ್ತು ಮಧ್ಯ ಕರ್ನಾಟಕದಿಂದ ಪ್ರಯಾಣಿಸುವ ವಾಹನಗಳು ಸಾಕಷ್ಟು ವಿಳಂಬವನ್ನು ಎದುರಿಸಿದವು. ಫ್ಲೈಓವರ್ ಈಗ ಭಾರಿ ವಾಹನಗಳಿಗೆ ಪ್ರವೇಶಿಸುವುದರಿಂದ, ಪ್ರಯಾಣಿಕರು ಟ್ರಾಫಿಕ್ ಜಾಮ್‌ನಲ್ಲಿ ಗಮನಾರ್ಹ ಕಡಿತವನ್ನು ನಿರೀಕ್ಷಿಸಬಹುದು. ಪುನರಾರಂಭವು ಅನೇಕರ, ವಿಶೇಷವಾಗಿ ದೂರದ ಮಾರ್ಗಗಳೊಂದಿಗೆ ವ್ಯವಹರಿಸುವವರ ಪ್ರಯಾಣದ ತೊಂದರೆಗಳನ್ನು ಸರಾಗಗೊಳಿಸುತ್ತದೆ ಎಂದು ನಿರೀಕ್ಷಿಸಲಾಗಿದೆ. ಆದಾಗ್ಯೂ, ಈ ಹೊಸ ನಿಯಮಕ್ಕೆ ಒಂದು ಅಪವಾದವಿದೆ. ಪ್ರತಿ ಶುಕ್ರವಾರ ಪೀಣ್ಯ ಮೇಲ್ಸೇತುವೆಯಲ್ಲಿ ಭಾರಿ ವಾಹನಗಳ ಸಂಚಾರವನ್ನು ನಿರ್ಬಂಧಿಸಲಾಗಿದೆ. ಈ ನಿರ್ಬಂಧವು ಶುಕ್ರವಾರ ಬೆಳಿಗ್ಗೆ 6:00 ರಿಂದ ಶನಿವಾರ ಬೆಳಿಗ್ಗೆ 6:00 ರವರೆಗೆ ಜಾರಿಯಲ್ಲಿರುತ್ತದೆ. ಫ್ಲೈಓವರ್ ನಿರ್ವಹಣೆ ಮತ್ತು ಮೇಲ್ದರ್ಜೆಗೇರಿಸಲು ಅಗತ್ಯವಿರುವ ವಿಶೇಷ ಕೆಲಸದಿಂದಾಗಿ ನಿಷೇಧ ಹೇರಲಾಗಿದೆ



ಉದಯವಾಹಿನಿ ಚಿತ್ರ

## ಕಸದ ಲಾರಿ ಡಿಕ್ಕಿ, ಇಬ್ಬರು ಟೆಕ್ಕಿಗಳು ಸಾವು

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ನಗರದಲ್ಲಿ ರಸ್ತೆ ಅಪಘಾತದಲ್ಲಿ ಇಬ್ಬರು ಟೆಕ್ಕಿಗಳು ಸಾವನ್ನಪ್ಪಿದ್ದಾರೆ. ಪ್ರಶಾಂತ್ ಎನ್ನುವ ಬೆಂಗಳೂರು ಮೂಲದ ಟೆಕ್ಕಿ, ತಾನು ಹುಟ್ಟಿದ ಆಸ್ಪತ್ರೆಯಲ್ಲಿಯೇ ಕೊನೆಯುಸಿರೆಳೆದಿದ್ದಾರೆ. ರಾತ್ರಿ 8.48ರ ಸುಮಾರಿಗೆ ನಗರದ ಕೆ.ಆರ್. ಸರ್ಕಲ್ ಸಮೀಪ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಕಸದ ಲಾರಿ ಬೈಕ್‌ಗೆ ಗುದ್ದಿದೆ. ಈ ಅಪಘಾತದಲ್ಲಿ ಗಾಯಗೊಂಡಿದ್ದ ಟೆಕ್ಕಿಗಳಾದ ಪ್ರಶಾಂತ್, ಬಯನ್ನ ಗಾರಿ ಶಿಲ್ಪಾ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾರೆ.

ಬೈಕ್‌ಗೆ ಲಾರಿ ಗುದ್ದಿದ ಬಳಿಕ ಪ್ರಶಾಂತ್, ಶಿಲ್ಪಾ ರಸ್ತೆ ಮೇಲೆ ಬಿದ್ದರು. ಅವರ ಮೇಲೆ ಕಸದ ಲಾರಿ ಹರಿದು ಗಂಭೀರವಾಗಿ ಗಾಯಗೊಂಡರು. ಅವರನ್ನು ಚಿಕಿತ್ಸೆಗಾಗಿ ಸೆಂಟ್ ಮಾರ್ಥಾಸ್ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ನಗರದ ಬಾಣಸವಾಡಿ ಮೂಲದ ಪ್ರಶಾಂತ್ ಇದೇ ಆಸ್ಪತ್ರೆಯಲ್ಲಿ ಜನಿಸಿದ್ದರು.

ಬೆಂಗಳೂರು ಮೂಲದ ಪ್ರಶಾಂತ್, ಆಂಧ್ರ ಪ್ರದೇಶ ಮೂಲದ ಬಯನ್ನ ಗಾರಿ ಶಿಲ್ಪಾ ಟಿಸಿಎಸ್ ಕಂಪನಿ ಉದ್ಯೋಗಿಗಳಾಗಿದ್ದರು.ಊಟಕ್ಕಾಗಿ ಹೊರಗೆ ಬಂದಿದ್ದರು. ಈ ವೇಳೆ ಕೆ. ಆರ್. ಸರ್ಕಲ್ ಬಳಿ ತೆರಳುವಾಗ ಅಪಘಾತ ಸಂಭವಿಸಿದೆ. ಬಯನ್ನ ಗಾರಿ ಶಿಲ್ಪಾ ಪಿಜಿಯೊಂದರಲ್ಲಿ ವಾಸವಾಗಿದ್ದರು. ಅಪಘಾತದ ಬಳಿಕ ವಿವರಗಳನ್ನು ಕಲೆ ಹಾಕಿ ಕುಟುಂಬದವರಿಗೆ ಮಾಹಿತಿ ನೀಡಲಾಗಿದೆ. ಶವಗಳ ಮರಣೋತ್ತರ ಪರೀಕ್ಷೆ ಇನ್ನೂ ಬಾಕಿ ಇದೆ, ಮಧ್ಯಾಹ್ನದ ವೇಳೆಗೆ ಶವಗಳನ್ನು ಕುಟುಂಬದವರಿಗೆ ಹಸ್ತಾಂತರ ಮಾಡಲಾಗುತ್ತದೆ.

ಅಪಘಾತದ ಬಳಿಕ ಬಿಬಿಎಂಪಿ ಕಸದ ಲಾರಿ ಚಾಲಕ ಸ್ಥಳದಿಂದ ಪರಾರಿಯಾಗಿದ್ದಾನೆ. ಪ್ರಕರಣದ ದಾಖಲು ಮಾಡಿಕೊಂಡು ತನಿಖೆ ಕೈಗೊಂಡಿರುವ ಪೊಲೀಸರು ಲಾರಿ ಚಾಲಕನಿಗಾಗಿ ಹುಡುಕಾಟ ನಡೆಸುತ್ತಿದ್ದಾರೆ.

ಮೃತಪಟ್ಟ ಟೆಕ್ಕಿ ಪ್ರಶಾಂತ್ ತಂದೆ ಲೋಕೇಶ್ ಆಸ್ಪತ್ರೆಯಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದರು, ನನ್ನ ಮಗ ಇದೇ ಸೆಂಟ್ ಮಾರ್ಥಾಸ್ ಆಸ್ಪತ್ರೆಯಲ್ಲಿ ಜನಿಸಿದ್ದ. ಕಸದ ಲಾರಿ ಡಿಕ್ಕಿ ಹೊಡೆದು ನನ್ನ ಮಗ, ಯುವತಿ ಮೃತಪಟ್ಟಿದ್ದಾರೆ. ಈ ಅಪಘಾತ ಮಾಡಿದ ಲಾರಿ ಚಾಲಕನನ್ನು ಕೂಡಲೇ ಬಂಧಿಸಬೇಕು. ನಮಗೆ ನ್ಯಾಯ ಒದಗಿಸಬೇಕು ಎಂದು ಕಣ್ಣೀರು ಹಾಕಿದರು. ಪ್ರಶಾಂತ್ ಸಾವಿನ ಸುದ್ದಿ ಕೇಳಿ ಅವರ ಅಜ್ಜಿ ಸಹ ಅಸ್ವಸ್ಥಗೊಂಡಿದ್ದಾರೆ. ಲಾರಿ ಚಾಲಕನನ್ನು ಬಂಧಿಸಿ ನಮಗೆ ನ್ಯಾಯ ಕೊಡಿಸಿ ಎಂದು ಪ್ರಶಾಂತ್ ಕುಟುಂಬದವರು ಪೊಲೀಸರನ್ನು ಆಗ್ರಹಿಸಿದ್ದಾರೆ.

ಪ್ರಶಾಂತ್ ಕುಟುಂಬ ದವರ ಆಕ್ರಂದನ ಮುಗಿಲು ಮುಟ್ಟಿದೆ.ಈ ಅಪಘಾತದ ಬಗ್ಗೆ ಉಪ್ಪಾರಪೇಟೆ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಸದ ಲಾರಿ ಚಕ್ರಕ್ಕೆ ಸಿಲುಕಿದ ಟೆಕ್ಕಿಗಳನ್ನು ಲಾರಿ ಸುಮಾರು 10 ಮೀಟರ್ ತನಕ ಎಳೆದುಕೊಂಡು ಹೋಗಿದೆ ಎಂದು ಪ್ರತ್ಯಕ್ಷದರ್ಶಿಗಳು ಹೇಳಿದ್ದಾರೆ.

## ರಕ್ತಸ್ರಾವದಿಂದ ಆಸ್ಪತ್ರೆಗೆ ದಾಖಲಾಗಿದ್ದ ಹೆಚ್ಡಿಕೆ ಡಿಸ್ಚಾರ್ಜ್

• ಉದಯವಾಹಿನಿ, ಬೆಂಗಳೂರು

ಮೂಗಿನಲ್ಲಿ ರಕ್ತಸ್ರಾವ ಉಂಟಾದ ಹಿನ್ನೆಲೆಯಲ್ಲಿ ಆಸ್ಪತ್ರೆಗೆ ದಾಖಲಾಗಿದ್ದ ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ಚಿಕಿತ್ಸೆ ಪಡೆದ ನಂತರ ಜೆಪಿ ನಗರದ ತಮ್ಮ ನಿವಾಸಕ್ಕೆ ವಾಪಸ್ಸಾದರು. ನಗರ ಖಾಸಗಿ ಹೋಟೆಲ್‌ನಲ್ಲಿ ಜೆಡಿಎಸ್ ಮತ್ತು ಜೆಡಿಎಸ್ ಸಮನ್ವಯ ಸಮಿತಿ ಸಭೆಯಲ್ಲಿ ಪಾಲ್ಗೊಂಡ ನಂತರ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರೊಂದಿಗೆ ಮಾಧ್ಯಮಗಳ ಜತೆ ಮಾತನಾಡುವ ಸಂದರ್ಭದಲ್ಲಿ ಸಚಿವರಿಗೆ ಮೂಗಿನಲ್ಲಿ ರಕ್ತಸ್ರಾವ ಉಂಟಾಯಿತು.

ಕೂಡಲೇ ಖಾಸಗಿ ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆದ ಸಚಿವರನ್ನು ವೈದ್ಯರು ಕೆಲ ಗಂಟೆಗಳ ಕಾಲ ನಿಗಾದಲ್ಲಿ ಇರಿಸಿ ಅವಲೋಕನ ಮಾಡಿದರು. ಬಳಿಕ ಸೂಕ್ತ ಚಿಕಿತ್ಸೆ ನೀಡಿ ಅವರನ್ನು ಮನೆಗೆ ಕಳಿಸಿಕೊಟ್ಟರು. ಯಾರಿಗೂ ಆತಂಕ ಬೇಡ:ಇನ್ನೂ ಹೆಚ್ ಡಿ ಕುಮಾರಸ್ವಾಮಿ ಅವರು ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿ ತಮ್ಮ ನಿವಾಸಕ್ಕೆ ಹೊರಡುವ ವೇಳೆ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ಯಾರು ಆತಂಕಕ್ಕೆ ಒಳಗಾಗುವುದು ಅವಶ್ಯಕತೆ ಇಲ್ಲ. ನಮ್ಮ ಕಾರ್ಯಕರ್ತರು ಅಭಿಮಾನಿಗಳಿಗೆ ಮನವಿ ಮಾಡೋದು ಇಷ್ಟೇ.. ನಿಮ್ಮಗಳ ಶುಭ ಹಾರೈಕೆ ಇರುವರೆಗೆ, ಭಗವಂತನ ಕೃಪೆ, ತಂದೆ ತಾಯಿ ಆಶೀರ್ವಾದ ಇರುವವರೆಗೆ ಯಾವುದೇ ಅಪಾಯವಿಲ್ಲ ಎಂದು ಹೇಳಿದರು.

ಮೂರು ಬಾರಿ ನನಗೆ ಹೃದಯ ಕವಾಟನ್ನು ಬದಲಾವಣೆ ಮಾಡಲಾಗಿದೆ.

ಬ್ಲಡ್ ತಿನ್ನರ್ ಮಾತ್ರೆ ತೆಗೆದುಕೊಳ್ಳುತ್ತೇನೆ. ರಕ್ತ ಗಟ್ಟಿ ಆಗಬಾರದು ಎನ್ನುವ ಕಾರಣಕ್ಕೆ ಮಾತ್ರೆ ತೆಗೆದುಕೊಳ್ಳುತ್ತೇನೆ.

ಒತ್ತಡ ಜಾಸ್ತಿಯಾದಾಗ, ವಿಶ್ರಾಂತಿ ಇಲ್ಲದೆ ಇದ್ದಾಗ ನನಗೆ ಮೂಗಿನಿಂದ ರಕ್ತಸ್ರಾವ ಆಗುವುದು ಸಹಜ. ಕೆಲಸದ ಒತ್ತಡ ಕಡಿಮೆ ಮಾಡಿಕೊಳ್ಳಿ ಎಂದು ವೈದ್ಯರು ಸಲಹೆ ನೀಡಿದ್ದಾರೆ. ನನಗೆ ಸಿಕ್ಕಿರುವ ಸಮಯ ಒಂದೊಂದು ಕ್ಷಣವು ಮುಖ್ಯ. ಜನರಿಗೆ ಏನಾದರೂ ಒಂದು ಸಹಾಯ ಮಾಡಬೇಕು. ಕೇಂದ್ರದಿಂದ ರಾಜ್ಯಕ್ಕೆ ಕೊಡುಗೆ ಕೊಡಬೇಕು ಎಂದು ತಿಳಿಸಿದರು. ರಾತ್ರಿ ನನ್ನ ದೇಹದಲ್ಲಿನ ಏರುಪೇರು ನೋಡಿಕೊಂಡು ದೆಹಲಿ ಪ್ರವಾಸ ನಿರ್ಧಾರ ಮಾಡುತ್ತೇನೆ. ವೈದ್ಯರಿಗೂ ಈ ಬಗ್ಗೆ ಮಾಹಿತಿ ನೀಡುತ್ತೇನೆ ಎಂದ ಅವರು; ಪಾದಯಾತ್ರೆ ಮಾಡದೇ ಇರುವುದಕ್ಕೆ ನನ್ನ ಆರೋಗ್ಯ ಸಂಪೂರ್ಣ ಕೆಟ್ಟಿಲ್ಲ.

ಅದಕ್ಕೆ ಇನ್ನೂ ಒಂದು ವಾರ ಸಮಯ ಇದೆ.



ಉದಯವಾಹಿನಿ ಚಿತ್ರ

**ಜನರು ನಂಬಿಕೆ ಇಟ್ಟು ದೆಹಲಿಗೆ ಕಳಿಸಿದ್ದಾರೆ. ಜನತೆ ವಿಶ್ವಾಸಕ್ಕೆ ಧಕ್ಕೆ ತರುವುದಿಲ್ಲ. ಇದೊಂದು ತಾತ್ಕಾಲಿಕ ಸಮಸ್ಯೆ ಅಷ್ಟೇ. ಯಾರು ಆತಂಕಪಡುವುದು ಬೇಡ. ವಿಶ್ರಾಂತಿ ತೆಗೆದುಕೊಳ್ಳಬೇಕು ಎಂದು ಅವರು ಸಲಹೆ ಮಾಡಿದ್ದಾರೆ. 92 ವರ್ಷಗಳ ದೇವೇಗೌಡರು ನಾಳೆಯ ದಿನ ಸಂಸತ್ತಿನಲ್ಲಿ ಕಾವೇರಿ ವಿಚಾರ ಪ್ರಸ್ತಾಪ ಮಾಡಲಿದ್ದಾರೆ. ಡಿಎಂಕೆ ಮತ್ತು ಇತರೆ ಸದಸ್ಯರು ಅಡ್ಡಿಪಡಿಸುವ ಕೆಲಸ ಮಾಡುತ್ತಾರೆ. ಆ ಸಂದರ್ಭದಲ್ಲಿ ನಾನು ಅವರ ಜೊತೆಗೆ ಇರಬೇಕು ಎಂದು ಕೇಂದ್ರ ಸಚಿವರು ಹೇಳಿದರು.**

ನಾನು ಇಲ್ಲದಿದ್ದರೆ ನಿಖಿಲ್ ಕುಮಾರಸ್ವಾಮಿ ನಮ್ಮ ಶಾಸಕರ ಜೊತೆ ಪಾದಯಾತ್ರೆ ಮಾಡುತ್ತಾರೆ. ಈ ಬಗ್ಗೆ ಕಾರ್ಯಕರ್ತರಿಗೆ ಆತಂಕ ಬೇಡ ಎಂದು ಕುಮಾರಸ್ವಾಮಿ ಅವರು ಹೇಳಿದರು. ಈ ಸಂದರ್ಭದಲ್ಲಿ ನಿಖಿಲ್ ಕುಮಾರಸ್ವಾಮಿ, ಪಕ್ಷದ ಶಾಸಕರು, ಮಾಜಿ ಶಾಸಕರು ಇದ್ದರು.

# ಬಿಪಿಎಲ್ ಕಾರ್ಡ್ ಪಡೆಯುವ ಮಾನದಂಡ ಶೀಘ್ರವೇ ಬದಲು?

■ ಸುಳ್ಳು ದಾಖಲೆ ನೀಡಿ ಬಿಪಿಎಲ್ ಕಾರ್ಡ್ ಪಡೆದಿದ್ದರೆ ತಾಲ್ಲೂಕಿನ ಕಚೇರಿಗೆ ತೆರಳಿ ಸ್ವಯಂ ಪ್ರೇರಿತವಾಗಿ ವಾಪಸ್ ನೀಡಿ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಬಿಪಿಎಲ್ ಕಾರ್ಡ್ ಹೊಂದಿರುವ ಅನರ್ಹ ಫಲಾನುಭವಿಗಳನ್ನು ಗುರುತಿಸುವ ಕೆಲಸ ಆಗುತ್ತಿದೆ. ಆದರೆ ಬಿಪಿಎಲ್ ಕಾರ್ಡ್ ಪಡೆಯಲು ಈ ಹಿಂದೆ ನಿಗದಿ ಮಾಡಿರುವ ಮಾನದಂಡಗಳನ್ನು ಬದಲಾವಣೆ ಮಾಡಬೇಕು ಎಂಬ ಒತ್ತಾಯವೂ ಕೇಳಿ ಬರುತ್ತಿದೆ. ಆದರೆ ಸರ್ಕಾರ ಇನ್ನೂ ಈ ಕುರಿತು ಯಾವುದೇ ತೀರ್ಮಾನ ಮಾಡಿಲ್ಲ.

ರಾಜ್ಯದಲ್ಲಿ 1,16,51,209 ಬಿಪಿಎಲ್, 10,83,977 ಅಂತ್ಯೋದಯ, 24,18,458 ಎಪಿಎಲ್ ಕಾರ್ಡ್‌ಗಳಿವೆ. ಅನರ್ಹರು ಬಿಪಿಎಲ್ ಕಾರ್ಡ್ ಹೊಂದಿದ್ದರೆ ಅದನ್ನು ರದ್ದುಗೊಳಿಸಿ, ಎಪಿಎಲ್ ವ್ಯಾಪ್ತಿಗೆ ಸೇರಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಈಗಾಗಲೇ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಈ ಹಿನ್ನಲೆಯಲ್ಲಿ ಲಕ್ಷಾಂತರ ಬಿಪಿಎಲ್ ಕಾರ್ಡ್ ಹೊಂದಿರುವ ಕುಟುಂಬಗಳಿಗೆ ಆತಂಕ ಎದುರಾಗಿದೆ. ಒಂದು ವೇಳೆ ಕಾರ್ಡ್ ರದ್ದುಗೊಂಡರೆ ಮತ್ತೆ ಅದನ್ನು ಮಾಡಿಸಿಕೊಳ್ಳಲು ದಾಖಲೆಗಳನ್ನು ಹಿಡಿದಲು ಅಲೆದಾಟ ನಡೆಸಬೇಕಾಗುತ್ತದೆ ಎಂಬುದು ಜನರ ಚಿಂತೆ. ಆದ್ದರಿಂದ ಕಾರ್ಡ್ ಪಡೆಯಲು ಇರುವ ಮಾನದಂಡವನ್ನು ಪರಿಷ್ಕರಣೆ ಮಾಡಿ ಎಂದು ಒತ್ತಾಯಿಸಲಾಗುತ್ತಿದೆ. ಈ ಹಿಂದೆಯೇ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಬಿಪಿಎಲ್ ಕಾರ್ಡ್ ಪಡೆಯಲು 14 ಮಾನದಂಡಗಳನ್ನು ನಿಗದಿ ಮಾಡಿದೆ. ಆದರೆ ಇವುಗಳನ್ನು ಹಲವು ವರ್ಷಗಳಿಂದ ಪರಿಷ್ಕರಣೆ ಮಾಡಿಲ್ಲ. ಸುಳ್ಳು ದಾಖಲೆ ನೀಡಿ ಬಿಪಿಎಲ್ ಕಾರ್ಡ್ ಪಡೆದರೆ ಕ್ರಿಮಿನಲ್ ಕೇಸ್ ದಾಖಲು ಮಾಡಲಾಗುತ್ತದೆ ಎಂದು ಈ ಹಿಂದೆ ಎಚ್ಚರಿಕೆ ನೀಡಲಾಗಿತ್ತು.

ಸದ್ಯ ಇರುವ ಮಾರ್ಗಸೂಚಿ ಅನ್ವಯ ಆದಾಯ ತೆರಿಗೆ ಪಾವತಿ ಮಾಡದ ಸದಸ್ಯರನ್ನು ಒಳಗೊಂಡ ಕುಟುಂಬಗಳು, ಎಲ್ಲಾ ವರ್ಗದ ಸರ್ಕಾರಿ ನೌಕರರು, ಸರ್ಕಾರಿ ಸ್ವಾಮ್ಯದ ಉದ್ಯಮ, ಮಂಡಳಿ, ಸಹಕಾರ ಸಂಘ, ನಿಗಮಗಳ ಖಾಯಂ ನೌಕರರು, ವೈದ್ಯರು, ಆಸ್ಪತ್ರೆಗಳ ನೌಕರರು, ವಕೀಲರು, ಲೆಕ್ಕಪರಿಶೋಧಕರು, ಏಳೂವರೆ ಎಕರೆ ಒಣ ಅಥವ ನೀರಾವರಿ ಭೂಮಿ ಹೊಂದಿರುವವರು ಬಿಪಿಎಲ್ ಕಾರ್ಡ್ ಪಡೆಯಲು ಅರ್ಹರಲ್ಲ. ಅಲ್ಲದೇ ಅನುದಾನಿತ/ ಅನುದಾನರಹಿತ ಶಾಲಾ-ಕಾಲೇಜು ನೌಕರರು, ನೋಂದಾಯಿತು ಗುತ್ತಿಗೆದಾರರು, ಎಪಿಎಂಸಿ ಟ್ರೇಡರ್ಸ್, ಕಮಿಷನ್ ಏಜೆಂಟ್ಸ್, ಬೀಜ ಮತ್ತು ಗೊಬ್ಬರ ಇತ್ಯಾದಿ ಡೀಲರ್ಸ್, ಮನೆ, ಮಳಿಗೆ ಬಾಡಿಗೆ ನೀಡಿ ವರಮಾನ ಪಡೆಯುವವರು, ಬಹುರಾಷ್ಟ್ರೀಯ ಕಂಪನಿ, ಕೈಗಾರಿಕೆಗಳಲ್ಲಿ ಕಾರ್ಯ ನಿರ್ವಹಣೆ ಮಾಡುವವರು ಕಾರ್ಡ್ ಪಡೆಯುವಂತಿಲ್ಲ. ಒಂದು ಆಟೋ ಹೊರತುಪಡಿಸಿ 100 ಸಿಸಿ ಮೇಲ್ಪಟ್ಟ ಇಂಧನ ಚಾಲಿತ ದ್ವಿಚಕ್ರ, ತ್ರಿಚಕ್ರ, ಕಾರು ಸೇರಿ ಇತ್ಯಾದಿ ವಾಹನ ಹೊಂದಿರುವ ಸದಸ್ಯರ ಕುಟುಂಬ, ಪ್ರತಿ ತಿಂಗಳು 450 ರೂ. ಗಿಂತ ಅಧಿಕ ವಿದ್ಯುತ್ ಬಿಲ್ ಪಾವತಿಸುವ ಕುಟುಂಬ ಬಿಪಿಎಲ್ ಕಾರ್ಡ್ ಪಡೆಯವಂತಿಲ್ಲ ಎಂದು ನಿಯಮವಿದೆ.



ಉದಯವಾಹಿನಿ ಚಿತ್ರ

ಕ್ರಿಮಿನಲ್ ಪ್ರಕರಣ :ಎಚ್ಚರಿಕೆ

**ಸುಳ್ಳು ದಾಖಲೆ ನೀಡಿ ಬಿಪಿಎಲ್ ಕಾರ್ಡ್ ಪಡೆದಿದ್ದರೆ ಅದನ್ನು ಆಯಾ ತಾಲೂಕಿನ ಕಚೇರಿಗೆ ತೆರಳಿ ಸ್ವಯಂ ಪ್ರೇರಿತವಾಗಿ ವಾಪಸ್ ನೀಡಿ, ಕಾರ್ಡ್ ವಾಪಸ್ ನೀಡದಿದ್ದಲ್ಲಿ ಸರ್ಕಾರ ಪತ್ತೆ ಹಚ್ಚಿ, ಎಷ್ಟು ಅಕ್ಕಿ ಪಡೆದಿದ್ದಾರೆ ಎಂಬುದು ಪತ್ತೆ ಹಚ್ಚಿ, ಕೆಜಿಗೆ 35 ರೂ.ನಂತೆ ಹಣ ವಸೂಲಿ ಮಾಡಲಾಗುತ್ತದೆ, ಅವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲಾಗುತ್ತದೆ ಎಂದು ಎಚ್ಚರಿಕೆ ಕೊಡಲಾಗಿದೆ.**

**ಈಗಾಗಲೇ ಸರ್ಕಾರ 2018ರಲ್ಲಿ 1,97,925, 2019ರಲ್ಲಿ 9,19,040, 2020ರಲ್ಲಿ 1,30,186 ಸೇರಿ 12,47,151 ಬಿಪಿಎಲ್ ಕಾರ್ಡ್‌ಗಳನ್ನು ರದ್ದುಗೊಳಿಸಿದೆ. ಬೆಂಗಳೂರು, ಬೆಳಗಾವಿ ಜಿಲ್ಲೆಗಳಲ್ಲಿ ಅತಿ ಹೆಚ್ಚು ಬಿಪಿಎಲ್ ಕಾರ್ಡ್‌ಗಳು ರದ್ದಾಗಿವೆ. ರಾಷ್ಟ್ರೀಯ ಆಹಾರ ಭದ್ರತಾ ಕಾಯಿದೆ ಪ್ರಕಾರ ಗ್ರಾಮೀಣ ಪ್ರದೇಶದಲ್ಲಿ ಶೇ 76.04, ನಗರದ ಪ್ರದೇಶದಲ್ಲಿ ಶೇ 49.36 ಕಾರ್ಡ್ ಹಂಚಿಕೆ ಮಾಡಲಾಗಿದೆ. ಆದರೆ ಕಾರು ಹೊಂದಿರುವವರು, ಅನೇಕ ಸರ್ಕಾರಿ ನೌಕರರು ಬಿಪಿಎಲ್ ಕಾರ್ಡ್ ಹೊಂದಿದ್ದಾರೆ ಎಂಬ ಆರೋಪವಿದೆ.**

ಅಂತರಾಳದಿಂದ.. EDITORIAL

# ಭಾರತೀಯ ವಿದ್ಯಾರ್ಥಿಗಳ ಮೇಲೆ ವಿದೇಶದಲ್ಲಿ ಹೆಚ್ಚುತ್ತಿರುವ ದೌರ್ಜನ್ಯ

ಕಳೆದ ಜನವರಿಯಲ್ಲಿ ಅಮೆರಿಕದ ಸಿಯಾಟಲ್‌ನಲ್ಲಿ ಭಾರತೀಯ ವಿದ್ಯಾರ್ಥಿನಿ ಜಾಹ್ನವಿ ಕಂಡುಲಾ ಎಂಬವರು ರಸ್ತೆ ದಾಟುತ್ತಿದ್ದಾಗ ವಾಹನವೊಂದು ಢಿಕ್ಕಿ ಹೊಡೆದು ಸ್ಥಳದಲ್ಲೇ ಮೃತಪಟ್ಟಿದ್ದರು. ಪೊಲೀಸ್ ಅಧಿಕಾರಿಯೊಬ್ಬ ಚಲಾಯಿಸುತ್ತಿದ್ದ ವಾಹನ ಈ ವಿದ್ಯಾರ್ಥಿನಿಗೆ ಢಿಕ್ಕಿ ಹೊಡೆದಿತ್ತು ಪ್ರಕರಣ ಗಂಭೀರತೆಯನ್ನು ಪಡೆದದ್ದು ಬೇರೆಯೇ ಕಾರಣಕ್ಕಾಗಿ ಪೊಲೀಸ್ ಅಧಿಕಾರಿ ಈ ಸಾವನ್ನು ಅತ್ಯಂತ ಹಗುರವಾಗಿ ಪರಿಗಣಿಸಿ, ವೀಡಿಯೊ ಚಿತ್ರೀಕರಣ ಮಾಡಿದ್ದ 'ಸತ್ತವಳು ಸಾಮಾನ್ಯ ವ್ಯಕ್ತಿ ಆಕೆಗೆ ಎನಿದ್ದರೂ 26 ವರ್ಷ. ನಗರಾಡಳಿತವು ಆಕೆಯ ಸಾವಿಗೆ 11 ಸಾವಿರ ಡಾಲರ್ ಪರಿಹಾರದ ಚೆಕ್ ಬರೆದುಕೊಟ್ಟರೆ ಸಾಕು ಎಂದು ವ್ಯಂಗ್ಯವಾಗಿ ನಕ್ಕಿದ್ದ ವೀಡಿಯೊ ಬಳಿಕ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿತ್ತು ಪೊಲೀಸ್ ಅಧಿಕಾರಿಯ ಈ ವರ್ತನೆ ತೀವ್ರ ಟೀಕೆಗೆ ಒಳಗಾಗಿತ್ತು ಪ್ರಕರಣವನ್ನು ಅಮೆರಿಕ ಸರಕಾರ ಗಂಭೀರವಾಗಿ ತೆಗೆದುಕೊಂಡಿತು. ವಾಹನ ಅವಘಡದಲ್ಲಿ ಸಾವಿಗೀಡಾದ ಭಾರತೀಯ ವಿದ್ಯಾರ್ಥಿನಿಯ ಬಗ್ಗೆ ವ್ಯಂಗ್ಯವಾಡಿದ ಹಾಗೂ ಸಂವೇದನಾ ರಹಿತ ಹೇಳಿಕೆಗಳನ್ನು ನೀಡಿದ ಸಿಯಾಟಲ್ ಪೊಲೀಸ್ ಅಧಿಕಾರಿಯನ್ನು ಕಳೆದ ಬುಧವಾರ ಸೇವೆಯಿಂದ ವಜಾಗೊಳಿಸಿತು. ಪೊಲೀಸ್ ಅಧಿಕಾರಿಯ ಬೇಜವಾಬ್ದಾರಿಯಷ್ಟೇ ಅವಘಡಕ್ಕೆ ಕಾರಣವಲ್ಲ ಆ ಅವಘಡಕ್ಕೆ ಆತ ಸ್ಪಂದಿಸಿದ ರೀತಿ, ವಿದೇಶಿ ವಿದ್ಯಾರ್ಥಿಗಳ ಅದರಲ್ಲೂ ಭಾರತೀಯ ವಿದ್ಯಾರ್ಥಿಗಳ ಕುರಿತಂತೆ ಆತನಿಗಿರುವ ಮನಸ್ಥಿತಿಯನ್ನು ಬಹಿರಂಗಪಡಿಸಿದೆ. ಇತ್ತೀಚಿನ ದಿನಗಳಲ್ಲಿ ಅಮೆರಿಕವೂ ಸೇರಿದಂತೆ ಯುರೋಪ್‌ನಲ್ಲಿ ಭಾರತೀಯ ವಿದ್ಯಾರ್ಥಿಗಳ ಮೇಲೆ ಹೆಚ್ಚುತ್ತಿರುವ ದೌರ್ಜನ್ಯ ಮತ್ತು ಅದನ್ನು ಸಂಭ್ರಮಿಸುತ್ತಿರುವ ರೀತಿ ನಿಜಕ್ಕೂ ಆತಂಕಕಾರಿಯಾಗಿದೆ. ಕಳೆದ ಐದು ವರ್ಷಗಳಲ್ಲಿ ವಿದೇಶಗಳಲ್ಲಿ ಕಲಿಯುವುದಕ್ಕೆ ತೆರಳಿದ್ದ 633 ಭಾರತೀಯ ವಿದ್ಯಾರ್ಥಿಗಳು ಮೃತಪಟ್ಟಿದ್ದಾರೆ ಎನ್ನುವುದನ್ನು ವಿದೇಶಾಂಗ ವ್ಯವಹಾರಗಳ ಸಚಿವಾಲಯವು ಸಂಸತ್ತಿನಲ್ಲಿ ತಿಳಿಸಿದೆ. ಕೆನಡಾದಲ್ಲಿ ಗರಿಷ್ಠ ವಿದ್ಯಾರ್ಥಿಗಳು ಅಂದರೆ, 172 ಮಂದಿ ಮೃತಪಟ್ಟಿದ್ದಾರೆ. ಅಮೆರಿಕದಲ್ಲಿ 108, ಬ್ರಿಟನ್‌ನಲ್ಲಿ 58, ಆಸ್ಟ್ರೇಲಿಯದಲ್ಲಿ 57, ರಶ್ಯದಲ್ಲಿ 37, ಜರ್ಮನಿಯಲ್ಲಿ 24 ಸಾವುಗಳು ಸಂಭವಿಸಿವೆ ಎಂದು ಅಂಕಿ ಅಂಶಗಳು ಹೇಳುತ್ತಿವೆ. ನೆರೆಯ ಪಾಕಿಸ್ತಾನದಲ್ಲಿ ಅತ್ಯಂತ ಕನಿಷ್ಠ ಅಂದರೆ ಒಬ್ಬ ವಿದ್ಯಾರ್ಥಿ ಮೃತಪಟ್ಟಿದ್ದಾನೆ. ಸಾಧಾರಣವಾಗಿ ಅವಘಡದಲ್ಲಿ ಸಂಭವಿಸುವ ಸಾವುಗಳ ಕುರಿತಂತೆ ಅಸಹಾಯಕರಾಗಬೇಕಾಗುತ್ತದೆ. ಕೆಲವೊಮ್ಮೆ ವಿದ್ಯಾರ್ಥಿಗಳ ಬೇಜವಾಬ್ದಾರಿಯಿಂದಲೂ ಸಾವುಗಳು ಸಂಭವಿಸುತ್ತವೆ. ಆಸ್ಟ್ರೇಲಿಯ, ಚೀನಾ, ಬ್ರಿಟನ್, ಕಿರ್ಗಿಸ್ಥಾನದಲ್ಲಿ ತಲಾ ಒಬ್ಬರು ಹಿಂಸಾಚಾರಕ್ಕೆ ಬಲಿಯಾಗಿದ್ದಾರೆ. ಅಮೆರಿಕವೂ ಸೇರಿದಂತೆ ಯುರೋಪ್ ದೇಶಗಳಲ್ಲಿ ವರ್ಷದಿಂದ ವರ್ಷಕ್ಕೆ ಭಾರತೀಯರ ಮೇಲೆ ಹಿಂಸಾಚಾರ, ದೌರ್ಜನ್ಯಗಳು ಹೆಚ್ಚುತ್ತಿವೆಯಾದರೂ, ಭಾರತದಿಂದ ವಿದೇಶಕ್ಕೆ ವಲಸೆ ಹೋಗುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಯೂ ವರ್ಷದಿಂದ ವರ್ಷಕ್ಕೆ ಹೆಚ್ಚಳವಾಗುತ್ತಿರುವುದು ವಿಶೇಷ. ಕಳೆದ ಜನವರಿ ಒಂದಕ್ಕೆ 101 ದೇಶಗಳಲ್ಲಿ 13 ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳು ಉನ್ನತ ವ್ಯಾಸಂಗ ಮಾಡುತ್ತಿದ್ದಾರೆ. 4.27 ಲಕ್ಷ ವಿದ್ಯಾರ್ಥಿಗಳೊಂದಿಗೆ ಕೆನಡಾ ಅಗ್ರಸ್ಥಾನದಲ್ಲಿದ್ದರೆ, ಅಮೆರಿಕದಲ್ಲಿ 337 ಲಕ್ಷ ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ ಬ್ರಿಟನ್‌ನಲ್ಲಿ 1.85 ಲಕ್ಷ ಭಾರತೀಯರು, ಆಸ್ಟ್ರೇಲಿಯದಲ್ಲಿ 1.22 ಲಕ್ಷ, ಜರ್ಮನಿಯಲ್ಲಿ 42,997, ಯುಎಇಯಲ್ಲಿ 25,000, ರಶ್ಯದಲ್ಲಿ 24,490 ವಿದ್ಯಾರ್ಥಿಗಳಿದ್ದಾರೆ. ಇನ್ನೊಂದು ವಿಪರ್ಯಾಸವೆಂದರೆ, ವಿದೇಶಗಳಿಗೆ ಕಲಿಯಲೆಂದು ಹೋಗುವ ಹೆಚ್ಚಿನ ವಿದ್ಯಾರ್ಥಿಗಳು ಭಾರತವನ್ನು ತೊರೆದು ಶಾಶ್ವತವಾಗಿ ವಿದೇಶದಲ್ಲಿ ನೆಲೆಸುವ ಬಗ್ಗೆ ಆಲೋಚಿಸುತ್ತಾರೆ ಮತ್ತು ಹೀಗೆ ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ಭಾರತವನ್ನು ತೊರೆದು ವಿದೇಶದಲ್ಲಿ ಶಾಶ್ವತವಾಗಿ ನೆಲೆಸುವ ವಿದ್ಯಾರ್ಥಿಗಳಲ್ಲಿ ಮೇಲ್ ಜಾತಿಯ ಸಮುದಾಯದ ಜನರೇ ಹೆಚ್ಚು ಎನ್ನುವುದು ಅಂಕಿಅಂಶಗಳಿಂದ ಬಹಿರಂಗವಾಗಿದೆ. ಸದ್ಯಕ್ಕೆ ವಿದೇಶದಲ್ಲಿ ಭಾರತೀಯರು ಎದುರಿಸುತ್ತಿರುವ ಸಮಸ್ಯೆಗಳನ್ನು ನಾವು 2 ನೆಲೆಗಳಿಂದ ನೋಡಬೇಕು ಒಂದು, ವಿದೇಶಗಳಲ್ಲಿ ಆತಂಕಗಳನ್ನು ಎದುರಿಸುತ್ತಿದ್ದರೂ, ಭಾರತದಿಂದ ವಿದೇಶಕ್ಕೆ ವಲಸೆ ಹೋಗುವ ವಿದ್ಯಾರ್ಥಿಗಳ ಸಂಖ್ಯೆ ಯಾಕೆ ಹೆಚ್ಚುತ್ತಿದೆ? ಎರಡನೆಯದು, ವಿದೇಶದಲ್ಲಿ ಭಾರತೀಯ ವಿದ್ಯಾರ್ಥಿಗಳ ಮೇಲೆ ಜನಾಂಗೀಯ ಹಲ್ಲೆಗಳು ಹೆಚ್ಚುತ್ತಿರುವುದಕ್ಕೆ ಕಾರಣಗಳೇನು ದೇಶದಲ್ಲಿ ಕಳೆದ ಒಂದು ದಶಕದಲ್ಲಿ ನಡೆದ ರಾಜಕೀಯ ಬೆಳವಣಿಗೆಗಳು ಇಲ್ಲಿನ ವಿದ್ಯಾರ್ಥಿಗಳ ಮೇಲೆ ತೀವ್ರ ಪರಿಣಾಮವನ್ನು ಬೀರಿದೆ. ದೇಶದಲ್ಲಿ ನಡೆಯುತ್ತಿರುವ ಹಿಂಸಾಚಾರ, ದೌರ್ಜನ್ಯಗಳು ಇಲ್ಲಿನ ಹೊಸ ತಲೆಮಾರಿನ ತಲೆಯಲ್ಲಿ ಭವಿಷ್ಯದ ಬಗ್ಗೆ ಆತಂಕವನ್ನು ಹುಟ್ಟಿಸಿದೆ. ತೀವ್ರ ಆರ್ಥಿಕ ಹಿಂಜರಿಕೆ, ಶೈಕ್ಷಣಿಕ ವಲಯದಲ್ಲಿ ಹೆಚ್ಚುತ್ತಿರುವ ರಾಜಕೀಯ ಹಸ್ತಕ್ಷೇಪ, ಪರಿಣಾಮವಾಗಿ ಇಳಿಕೆಯಾಗುತ್ತಿರುವ ಶಿಕ್ಷಣದ ಗುಣಮಟ್ಟ ಹೆಚ್ಚುತ್ತಿರುವ ನಿರುದ್ಯೋಗ, ಹೆಚ್ಚುತ್ತಿರುವ ಶೈಕ್ಷಣಿಕ ವೆಚ್ಚ ಇವೆಲ್ಲವೂ ವಿದ್ಯಾರ್ಥಿಗಳಲ್ಲಿ ಒಂದು ವರ್ಗವನ್ನು ವಿದೇಶಕ್ಕೆ ತೆರಳುವಂತೆ ಮಾಡುತ್ತಿವೆ. ಉಕ್ರೇನ್ ಮೇಲೆ ಯುದ್ಧ ಘೋಷಣೆಯಾದಾಗ ಉಕ್ರೇನ್‌ನಲ್ಲಿ ಕಲಿಯುತ್ತಿದ್ದ ಸಾವಿರಾರು ಭಾರತೀಯ ವಿದ್ಯಾರ್ಥಿಗಳು ಬೀದಿಗೆ ಬಿದ್ದರು. ಭಾರತದಲ್ಲಿ ಅತ್ಯುನ್ನತ ಶಿಕ್ಷಣಕ್ಕೆ ಸಕಲ ವ್ಯವಸ್ಥೆಯಿದ್ದರೂ, ಉಕ್ರೇನ್‌ನಂತಹ ಸಣ್ಣ ದೇಶಕ್ಕೆ ಯಾಕೆ ವಲಸೆ ಹೋಗುತ್ತಾರೆ ಎಂದು ಪ್ರಧಾನಿ ನರೇಂದ್ರ ಮೋದಿಯೇ ಅಚ್ಚರಿ ವ್ಯಕ್ತಪಡಿಸುವಂತಾಯಿತು. ಆದರೆ ಉಕ್ರೇನ್‌ನಂತಹ ಸಣ್ಣ ದೇಶಕ್ಕೆ ವಲಸೆ ಹೋಗುವ ವಿದ್ಯಾರ್ಥಿಗಳು ಹಿಂದುಳಿದ ವರ್ಗಕ್ಕೆ ಸೇರಿದ, ಮಧ್ಯಮ ವರ್ಗದ ವಿದ್ಯಾರ್ಥಿಗಳು, ಅಮೆರಿಕ, ಬ್ರಿಟನ್‌ನಂತಹ ದೇಶಗಳನ್ನು ಆರಿಸಿಕೊಳ್ಳುವವರು ಶ್ರೀಮಂತರು ಮತ್ತು ಮೇಲ್‌ಜಾತಿಗೆ ಸೇರಿದವರು, ಅಮೆರಿಕದಲ್ಲಿ ಜನಾಂಗೀಯ ದೌರ್ಜನ್ಯ ಹೆಚ್ಚಿದ್ದರೂ, ಭಾರತದಲ್ಲಿ ಹೆಚ್ಚುತ್ತಿರುವ ಕೋಮುಹಿಂಸಾಚಾರ, ಜನಾಂಗೀಯ ದೌರ್ಜನ್ಯಗಳು, ಜಾತಿ ಅಸಮಾನತೆ ಇತ್ಯಾದಿಗಳಿಗಿಂತ ಅಮೆರಿಕ ವಾಸಿ ಎಂದು ಹೊಸ ತಲೆಮಾರಿಗೆ ಅನ್ನಿಸುತ್ತಿದೆ.

> **ಒತ್ತಡಗಳ ಪರಿಣಾಮವಾಗಿ ಮಾನಸಿಕ ಖಿನ್ನತೆಯಂತಹ ಸಮಸ್ಯೆಗಳಿಂದ ಅತ್ಮಹತ್ಯೆ ಮಾಡಿಕೊಳ್ಳುವ ಪ್ರಕರಣಗಳೂ ಹೆಚ್ಚುತ್ತಿವೆ. ಇವೆಲ್ಲಕ್ಕಿಂತ ಹೆಚ್ಚಾಗಿ, ಭಾರತೀಯ ವಿದ್ಯಾರ್ಥಿಗಳು ಅಲ್ಲಿನ ಹಿಂಸಾಚಾರಕ್ಕೆ ಬಲಿಯಾಗುತ್ತಿದ್ದಾರೆ. ಕಳೆದ ಐದು ವರ್ಷಗಳಲ್ಲಿ ಭಾರತೀಯ ವಿದ್ಯಾರ್ಥಿಗಳ ಒಟ್ಟು ಸಾವುಗಳ ಪೈಕಿ 19 ಹಿಂಸಾಚಾರದಿಂದ ಸಂಭವಿಸಿವೆ. ಇಲ್ಲಿಯೂ ಕೆನಡಾವೇ ಅಗ್ರಸ್ಥಾನದಲ್ಲಿದೆ. ಕೆನಡಾದಲ್ಲಿ ಹಿಂಸಾಚಾರದಿಂದ ಒಂಭತ್ತು ಮಂದಿ ಮೃತಪಟ್ಟಿದ್ದರೆ, ಅಮೆರಿಕದಲ್ಲಿ ಅರು ಮಂದಿ ಮೃತಪಟ್ಟಿದ್ದಾರೆ.**



## ಮಹಾಭಾರತ
## ಶಾಂತಿಪರ್ವ

• ಹಿಂದಿನ ಸಂಚಿಕೆಯಿಂದ

ಶತ್ರುಗಳ ದೌರ್ಬಲ್ಯಗಳನ್ನು ಪ್ರಯತ್ನಪೂರ್ವಕವಾಗಿ ತಿಳಿದುಕೊಳ್ಳಬೇಕು ಹಾಗೂ ತನ್ನ ಯೋಜನೆಗಳ ರಹಸ್ಯವನ್ನು ಎಂದೂ ಬಿಟ್ಟುಕೊಡಬಾರದು. ರಾಜನು ನೇರ ನಡತೆಯವನಾಗಿರಬೇಕು. ಮೃದುವಾಗಿದ್ದರೆ ಅಪಾಯ ತಪ್ಪಿದ್ದಲ್ಲ. ತುಂಬ ಮೃದುವಾಗಿದ್ದರೆ, ಅವನನ್ನು ಪ್ರಜೆಗಳೇ ಲೆಕ್ಕಿಸುವುದಿಲ್ಲ. ತೀರ ಒರಟ ಹಾಗೂ ಕ್ರೂರಿಯಾಗಿದ್ದರೆ ಪ್ರಜೆಗಳು ಯಾವಾಗಲೂ ಭಯಗ್ರಸ್ತರಾಗಿರುವರು; ಇದು ಸುಖೀರಾಜ್ಯದ ಲಕ್ಷಣವಲ್ಲ.

''ಸೇವಕರನ್ನು ಆರಿಸಿಕೊಳ್ಳುವ ಕಲೆ ರಾಜನಿಗೆ ತಿಳಿದಿರಬೇಕು. ಆತನ ಮನಸ್ಸು ಸಹಜವಾಗಿಯೇ ದಯೆಯಿಂದ ಕೂಡಿರಬೇಕು; ಆದರೆ ಯಾವಾಗಲೂ ಕ್ಷಮಿಸುತ್ತಲೇ ಇದ್ದುಬಿಡಬಾರದು. ಆಗ ಜನರು ಅವನ ಮತ್ತು ಅವನ ಸ್ವಭಾವದ ದುರುಪಯೋಗ ಮಾಡಿಕೊಳ್ಳುವರು.

''ರಾಜನಾದವನು ಯಾವಾಗಲೂ ಎಚ್ಚರದಿಂದಿದ್ದು ಶತ್ರುಗಳನ್ನೂ ಮಿತ್ರರನ್ನೂ ಗಮನಿಸುತ್ತಲೇ ಇರಬೇಕು. ಶತ್ರುತ್ವ ಮಿತ್ರತ್ವಗಳು ಯಾವಾಗಲೂ ಏಕರೀತಿಯಾಗಿರುವುದಿಲ್ಲ.

''ರಾಜನ ಮುಖ್ಯವಾದ ಕರ್ತವ್ಯ ಪ್ರಜಾಪರಿಪಾಲನೆ. ತಾಯಿ ತನ್ನ ಮಗುವನ್ನು ಗರ್ಭದಲ್ಲಿಟ್ಟುಕೊಂಡು ಕಾಪಾಡುವಂತೆ, ರಾಜನು ಪ್ರಜೆಗಳನ್ನು ರಕ್ಷಿಸಬೇಕು. ಮಗುವನ್ನು ಹೊತ್ತಿರುವ ತಾಯಿಯು ತನ್ನ ಸುಖವನ್ನು ಬಯಸದೆ ಮಗುವಿನ ಯೋಗಕ್ಷೇಮದಲ್ಲಿಯೇ ಯಾವಾಗಲೂ ಆಸಕ್ತಳಾಗಿರುವಂತೆ, ರಾಜನು ತನ್ನ ಇಷ್ಟಾನಿಷ್ಟಗಳನ್ನು ಹದ್ದಿನಲ್ಲಿರಿಸಿಕೊಂಡು, ಪ್ರಜೆಗಳ ಯೋಗಕ್ಷೇಮಕ್ಕಾಗಿಯೇ ಯಾವಾಗಲೂ ಶ್ರಮಿಸುತ್ತಿರಬೇಕು. ರಾಜನಾದವನು ಯಾರನ್ನೂ ಪೂರ್ತಿಯಾಗಿ ನಂಬಿಬಿಡಬಾರದು. ತನ್ನ ಅಂತರಂಗದ ಅನಿಸಿಕೆಗಳನ್ನು ತೀರ ಹತ್ತಿರದವರಿಗೂ ಸಹ ಹೇಳದೆ ತನ್ನಲ್ಲಿಯೇ ಅಡಗಿಸಿಟ್ಟುಕೊಂಡಿರಬೇಕು. ರಾಜನು ಆರು ಸಮಸ್ಯೆಗಳನ್ನು ಪರಿಹರಿಸುವುದರಲ್ಲಿ ವಿವೇಕಿಯಾಗಿರಬೇಕು. ಬಲಶಾಲಿಯಾದ ಶತ್ರುವಿನೊಡನೆ ಸಂಧಿ ಮಾಡಿಕೊಳ್ಳುವುದು, ಸಮಾನಬಲನೊಂದಿಗೆ ಯುದ್ಧಮಾಡುವುದು, ದುರ್ಬಲನಾದವನ ರಾಜ್ಯವನ್ನು ಜಯಿಸುವುದು ಈ ಮೂವರಲ್ಲಿ ವಿವೇಚನಾಯುಕ್ತ ತೀರ್ಮಾನವನ್ನು ತೆಗೆದುಕೊಳ್ಳಬೇಕು. ತಾನು ದುರ್ಬಲನಾಗಿದ್ದರೆ. ಕೋಟೆಯಲ್ಲಿ ರಕ್ಷಣೆ ಪಡೆಯಲು ಸಿದ್ಧನಾಗಬೇಕು. ಶತ್ರುರಾಜ್ಯದ ಅಧಿಕಾರಿಗಳಲ್ಲಿ ಪರಸ್ಪರ ಅಭಿಪ್ರಾಯಭೇದವನ್ನು ಹುಟ್ಟುಹಾಕುವುದು ರಾಜನಾದವನ ಮುಖ್ಯವಾದ ಕೆಲಸ. ಚತುರರಾದ ಗೂಢಚಾರರ ಮೂಲಕ ಶತ್ರುರಹಸ್ಯಗಳನ್ನು ಯಾವಾಗಲೂ ಅನ್ವೇಷಣೆ ಮಾಡಿಸುತ್ತಿರಬೇಕು. ಶತ್ರುವಿನ ಕಡೆಯ ಮುಖ್ಯರನ್ನು ಧನದಾಸೆ ತೋರಿಸಿಯೋ ಇತರ ಪ್ರಲೋಭನೆಗಳಿಂದಲೋ ತನ್ನ ಕಡೆಗೆ ಸೆಳೆದುಕೊಳ್ಳಬೇಕು. ರಾಜನ ಭಾಷಣವು ಯಾವಾಗಲೂ ಪ್ರಿಯವಾದುದಾಗಿರಬೇಕು. ತನ್ನಂತೆಯೇ ಸ್ವಭಾವವುಳ್ಳ ಉತ್ತಮ ಗುಣಶೀಲರನ್ನು ಹತ್ತಿರವಿಟ್ಟುಕೊಂಡಿರಬೇಕು. ರಾಜನಿಗೂ ಇಂತಹ ಅಧಿಕಾರಿಗಳಿಗೂ ಇರುವ ವ್ಯತ್ಯಾಸವೆಂದರೆ ರಾಜನ ಶ್ವೇತಚ್ಛತ್ರ ಮಾತ್ರವೇ ಎನಿಸುವಂತಿರಬೇಕು.

ಮುಂದುವರಿಯುವುದು...



ಕಲಾ ಸಾಹಿತ್ಯ

**ಕೃಷ್ಣಪ್ಪ**
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

# ಮಕ್ಕಳಿಗೆ 10ನೇ ತರಗತಿಯವರೆಗೆ ಕಡ್ಡಾಯವಾಗಿ ಉಚಿತ ಶಿಕ್ಷಣ ಜಾರಿಗೆ ತನ್ನಿ

• ಉದಯವಾಹಿನಿ, ವಿಶೇಷ



ಉದಯವಾಹಿನಿ ಚಿತ್ರ

ಜಗತ್ತಿನ 880 ಕೋಟಿ ಜನಸಂಖ್ಯೆಯಲ್ಲಿ ಭಾರತ ಮೊದಲನೇ ಸ್ಥಾನದಲ್ಲಿದೆ. ಈಗ ಭಾರತ 144 ಕೋಟಿ ಜನಸಂಖ್ಯೆಯನ್ನು ಹೊತ್ತುಕೊಂಡಿದೆ.
ದೇಶವು ಆರ್ಥಿಕವಾಗಿ ಸಾಧಾರಣ ಸುಧಾರಣೆ ಆಗಿದ್ದರೂ ಸಹ ಇನ್ನೂ ಶೇಕಡ 40 ಭಾಗ ಬಡತನ ರೇಖೆಯಲ್ಲಿ ಗುರ್ತಿಸಿಕೊಂಡಿದೆ.

**ಆದರೆ ಎಲ್ಲರೂ ಕಷ್ಟ ಪಟ್ಟು ಸ್ವತಹ:** ದುಡಿಯುವ ಕೈಗಳಾದರೆ ಬಡತನ,ದಾರಿದ್ರ್ಯ ಓಡಿ ಹೋಗುತ್ತದೆ. ಆದರೇನು ಬಂತು ನಮ್ಮ ದೇಶ ಪರರನ್ನು ಅವಲಂಬಿಸುವ ಬಹು ತೇಕ ಸೋಮಾರಿಗಳು ಹಾಗೂ ಆಲಸ್ಯ ಇರುವ ದೇಶ. ಈ ದೇಶವು ಶ್ರೀಮಂತರು, ಅತಿ ಶ್ರೀಮಂತರಿಗೆ, ದೊಡ್ಡ ದೊಡ್ಡ ಬಂಡವಾಳಗಾರರಿಗೆ, ವಾಣಿಜ್ಯೋದ್ಯಮಿಗಳಿಗೆ, ಕೈಗಾರಿ ಕೋದ್ಯಮಿಗಳಿಗೆ, ಉನ್ನತ ಮಟ್ಟದ ಶಾಲಾ ಕಾಲೇಜಿನ ಮಾಲೀಕರಿಗೆ, ಕಂಪನಿ ಮಾಲೀಕರಿಗೆ, ರಾಜಕಾರಣಿಗಳಿಗೆ, ಚಿತ್ರೋದ್ಯಮಿಗಳಿಗೆ, ಸೆಲೆಬ್ರೆಟಿಗಳಿಗೆ ಇನ್ನೂ ಇತರೆ ಸಂಬಂಧಪಟ್ಟ ಶ್ರೀಮಂತರಿಗೆ ಈ ದೇಶ ಅತ್ಯಂತ ಸುರಕ್ಷಿತ ಹಾಗೂ ಆಶ್ರಯಸ್ಥಾನವಾದ ದೇಶ.

ಆದಿನಿಂದ ಇಲ್ಲಿಯವರೆಗೂ ಶ್ರೀಮಂತರು ಶ್ರೀಮಂತರಾಗುತ್ತಾ ಇದ್ದಾರೆ,ಬಡವರು ಬಡವರಾಗಿಯೇ ಉಳಿದಿದ್ದಾರೆ ಹಾಗೂ ಮಧ್ಯಮ ವರ್ಗದವರು ಮಧ್ಯಮ ವರ್ಗದವರಾಗಿಯೇ ಬದುಕುತ್ತಿದ್ದಾರೆ. ಇಲ್ಲಿ ಸಮ ಬಾಳು, ಸಮಪಾಲು, ಸಮಾನತೆ, ಸ್ವತಂತ್ರ, ಭ್ರಾತೃತ್ವ ಕೇವಲ ಮರೀಚಿಕೆ. ಈ ಬಗ್ಗೆ ಹೇಳಲು ಬಹಳ ಚಂದ ಆದರೆ ಕಾರ್ಯರೂಪ ಬರೀ ಶೂನ್ಯ. ಜನಸಂಖ್ಯಾ ಸ್ಫೋಟಕ್ಕೆ ಯಾವುದೇ ನಿಯಂತ್ರಣ ಇಲ್ಲ ಇದು ಸರ್ಕಾರದ ಹೊಣೆ ಹಾಗೂ ಜವಾಬ್ದಾರಿ ಆದರೆ ಮರಣದ ಪ್ರಮಾಣ ನಿಯಂತ್ರಣದಲ್ಲಿದೆ ಆದರೆ ಇದು ಜನರ ನಿಯಂತ್ರಣದಲ್ಲಿದೆ. ಆದರೆ ಈ ದೇಶದಲ್ಲಿ ಎಲ್ಲಾ ವಿಭಾಗದಲ್ಲೂ ಹಾಗೂ ಎಲ್ಲಾ ಕ್ಷೇತ್ರದಲ್ಲೂ ಕಟ್ಟುನಿಟ್ಟಿನ ಕಾನೂನು ಕಾಯಿದೆಗಳನ್ನು ಜಾರಿಗೆ ತಂದು ನಿಯಂತ್ರಣದಲ್ಲಿ ಇಡಲು ದೇಶಕ್ಕೆ ಸ್ವತಂತ್ರ ಬಂದಾಗಿನಿಂದಲೂ ಎಲ್ಲಾ ಸರ್ಕಾರಗಳು ವಿಫಲವಾಗಿವೆ.

> **ಸಮ ಬಾಳು, ಸಮಪಾಲು**

ಕೆಲವರಿಗಂತೂ ಈ ದೇಶ ಅತ್ಯಂತ ಸುರಕ್ಷಿತವಾದ ದೇಶ ಎಂದು ಎಲ್ಲಾ ಕೋನದಿಂದಲೂ ಪರೀಕ್ಷೆ ಮಾಡಿ ಈ ನೆಲದಲ್ಲಿಯೇ ಶಾಶ್ವತವಾಗಿ ಎಲ್ಲಾ ಧರ್ಮದವರು ವಾಸಿಸಲು ಈ ನೆಲದ ಬಹುಪಾಲು ವಾಸಿಗಳು ಅರ್ಥೈಸಿಕೊಂಡಿದ್ದಾರೆ. ಹಾಗೂ ಮಕ್ಕಳಿಗೆ ಹಂತ ಹಂತವಾಗಿ ವೈಚಾರಿಕ, ವೈಜ್ಞಾನಿಕ, ಹಾಗೂ ಸೈದ್ಧಾಂತಿಕ ನೆಲಗಟ್ಟಿನಲ್ಲಿ ಉಜ್ವಲ ಭವಿಷ್ಯವನ್ನು ರೂಪಿಸಿಕೊಳ್ಳಲು ಆ ರೀತಿಯ ಶಿಕ್ಷಣವನ್ನು ಒದಗಿಸಿಕೊಡಬೇಕು. ಗೊಡ್ಡು ಸಂಪ್ರದಾಯಗಳನ್ನ ಮೂಡಿಸಬಾರದು. ಹಣ,ಆಸ್ತಿ,ಅಂತಸ್ತು, ಕಾರು,ಬಂಗಲೆ, ರಿಸಾರ್ಟ್,ವಿಲ್ಲಾ, ಕಾಂಪ್ಲೆಕ್ಸ್ ಇರುವವರು ಶ್ರೀಮಂತರಲ್ಲ.

ಶಿಕ್ಷಣ,ಸಂಸ್ಕಾರ, ಮಾನವೀಯತೆ ಮತ್ತು ಶಿಸ್ತು ಇರುವವರು ಮಾತ್ರ ಸಂಸ್ಕಾರದಲ್ಲಿ ಶ್ರೀಮಂತರು. ಶಿಕ್ಷಣದಲ್ಲಿ ಶ್ರೀಮಂತರು ಹಾಗೂ ಹೃದಯ ಶ್ರೀಮಂತರು. ಆಗ ರಾಷ್ಟ್ರಕ್ಕೆ ಶಕ್ತಿವಂತರಾಗಿ ಮತ್ತು ಆಸ್ತಿವಂತರಾಗಿ ಪರಿಣಮಿಸುತ್ತಾರೆ. ಮೊದಲು ಮಕ್ಕಳು ಭಾರತ ಕಟ್ಟುವ,ರಕ್ಷಿಸುವ, ಪ್ರೀತಿಸುವ, ಗೌರವಿಸುವ, ದೇಶಪ್ರೇಮ, ದೇಶಾಭಿಮಾನ ಬೆಳಗುವ ತಳಹದಿಯ ಶಿಕ್ಷಣವಾಗಬೇಕು. ಎಲ್ಲಾ ಜಾತಿ,ಧರ್ಮ, ಭಾಷೆಯುಳ್ಳ ಜನಾಂಗದವರನ್ನ ಪ್ರೀತಿಸಿ, ಗೌರವಿಸಿ ಒಟ್ಟಿಗೆ ಬಾಳುವ ಮನೋಧರ್ಮವನ್ನು ಬೆಳೆಸುವ ಶಿಕ್ಷಣವಾಗಬೇಕು. ಭಾರತ ದೇಶ ಶಿಕ್ಷಣ ನೀತಿ ನಿಯಮಗಳಲ್ಲಿ ಕೆಲವೊಂದು ಬದಲಾವಣೆಗಳನ್ನು ಮಾಡಿಕೊಳ್ಳಬೇಕಾಗಿದೆ. ಭಾರತ ದೇಶದ ಎಲ್ಲಾ ಧರ್ಮಕ್ಕೆ ಅನ್ವಯಿಸುವ ಏಕ ನೀತಿಯ ಶಿಕ್ಷಣ ಪದ್ಧತಿಯನ್ನು ಜಾರಿಗೆ ತರುವುದು ಸರ್ವ ದೃಷ್ಟಿಯಲ್ಲೂ ಒಳ್ಳೆಯದು. ಭಾರತ ದೇಶದಲ್ಲಿ ಶೇಕಡ ನೂರಕ್ಕೆ 70 ರಷ್ಟು ಸಾಕ್ಷರತೆಯನ್ನು ಹೊಂದಿ ಶಿಕ್ಷಣವನ್ನ ಪಡೆದಿರುತ್ತಾರೆ. ಆದರೆ ಮಾನವೀಯತೆ, ಸಂಸ್ಕಾರ,ಗುಣಮಟ್ಟದ ಶಿಕ್ಷಣ ಹಾಗೂ ಶಿಸ್ತಿನಲ್ಲಿ ಶೇಕಡ 10 ಭಾಗ ಇರಬಹುದು.

ಆದರೆ ಶಿಕ್ಷಣ ಪಡೆದಿದ್ದರೂ ಸಹ ಈ ಗುಣಗಳು ಇಲ್ಲದಿದ್ದರೆ ಶಿಕ್ಷಣ ಪಡೆದದ್ದೂ ವ್ಯರ್ಥ ಇನ್ನು ಉಳಿದ 30 ರಷ್ಟು ಸಾಕ್ಷರತೆಯನ್ನು ಹೊಂದಿಲ್ಲ, ಅಂಥವರಿಗೆ ಗುಣಮಟ್ಟದ ಶಿಕ್ಷಣ, ಸಂಸ್ಕಾರದ ಕೊರತೆ ಹಾಗೂ ಇತರೆ ಮೂಲಭೂತ ಸೌಕರ್ಯಗಳ ಕೊರತೆ ಎದ್ದು ಕಾಣುತ್ತದೆ.

> **ಪ್ರಸ್ತುತ ಸಂಸ್ಕಾರ ಜೊತೆಗೆ ಮಾನವೀಯ ಮೌಲ್ಯಗಳು, ನೀತಿ ಪಾಠಗಳು, ಸಮಯವನ್ನು ಪಾಲಿಸುವುದು ಮತ್ತು ಶಿಸ್ತು ಈ ಐದು ಭಾಗಗಳು ಕಡ್ಡಾಯವಾಗಿ ಮಕ್ಕಳಿಗೆ ಪ್ರಥಮ ವರ್ಷದ ಶಿಕ್ಷಣ ಪಾಠವಾಗಬೇಕು. ಜೊತೆಗೆ ಮಕ್ಕಳು ಆರೋಗ್ಯವಾಗಿದ್ದು ಸದಾ ಲವಲವಿಕೆಯಿಂದ ಹಾಗೂ ಕೂಡಿ ಬಾಳ್ವಿಕೆಯ ಗುಣಗಳನ್ನು ಕಲಿಯಬೇಕಾದರೆ ಶಿಕ್ಷಣದ ಜೊತೆಗೆ ಕಡ್ಡಾಯವಾಗಿ ದೈಹಿಕ ಶಿಕ್ಷಣ ಅಗತ್ಯ.**

ಮಾನವ ಮತ್ತು ಮಾನವ ನಡುವೆ ಅವಿನಾಭಾವ ಸಂಬಂಧ ಇಟ್ಟುಕೊಂಡು ಪ್ರಕೃತಿ ಅಡಿಯಲ್ಲಿ ಬದುಕನ್ನು ಕಟ್ಟಿಕೊಂಡು ಜೀವಿಸಬೇಕಾದರೆ ಕಡ್ಡಾಯವಾಗಿ ಹತ್ತನೇ ತರಗತಿಯವರೆಗೆ ಪ್ರತಿಯೊಬ್ಬ ಭಾರತೀಯ ಪ್ರಜೆಗೂ ಸಹ ಗುಣಮಟ್ಟದ ಶಿಕ್ಷಣ ಜೊತೆಗೆ ಸಂಸ್ಕಾರ ಒದಗಿಸಿಕೊಡಬೇಕು. ಇದರ ಕೊರತೆ ಇದ್ದಾಗ ಆತ ಅಥವಾ ಆಕೆ ವಿಧ್ವಂಶಕ ಕೃತ್ಯ ಹಾಗೂ ಇತರೆ ಕೃತ್ಯಗಳಲ್ಲಿ ತೊಡಗಿ ಸಮಾಜಘಾತಕ ಶಕ್ತಿಗಳಾಗಿ ಹೊರಹೊಮ್ಮುತ್ತಾರೆ. ಅಂಥವರು ದುಶ್ಚಟ, ದುರ್ಬುದ್ಧಿ, ದುರ್ಮಾರ್ಗ, ಅಶಿಸ್ತು, ಅಪ್ರಮಾಣಿಕತೆ, ಅಧರ್ಮ, ಹಿಂಸೆ ಇನ್ನೂ ಇತರೆ ದುಷ್ಟರ ಕೂಟ ಒಳಗೊಂಡ ಸಂಘಗಳನ್ನು ಮಾಡಿಕೊಂಡು ದೇಶಕ್ಕೆ ಮಾರಕವಾಗಿ ಪರಿಣಿಸುತ್ತಾರೆ. ಅಂಥವರೇ ಈ ರಾಷ್ಟ್ರದ ನಿಜವಾದ ಮೊದಲನೆಯ ಶತ್ರುಗಳು. ದಾರಿ ತಪ್ಪಿದ ಮಕ್ಕಳಾಗಿ ಪರಿಣಿಸಬೇಕಾದರೆ ನೇರವಾಗಿ ಹೆತ್ತವರು, ಶಿಕ್ಷಣ ತಜ್ಞರು (ಗುರುಗಳು)ಸರ್ಕಾರ ಹೊಣೆಗಾರರಾಗುತ್ತಾರೆ.

ಇದರಲ್ಲಿ ಎಲ್ಲರದೂ ಒಂದು ಪಾತ್ರ ಇದೆ ಎಂಬುದನ್ನು ಮರೆಯಬಾರದು. ಜೀವನದ ನಿರ್ವಹಣೆಗೆ ಆತ ಅಥವಾ ಆಕೆ ಇಷ್ಟಪಟ್ಟಿರುವ ಯಾವುದೇ ಕೆಲಸ ನಿರ್ವಹಿಸಲಿ ಕಡ್ಡಾಯವಾಗಿ 10ನೇ ತರಗತಿಯವರವೆಗೆ ಮೇಲೆ ಹೇಳಿದ ಗುಣಮಟ್ಟದ ಶಿಕ್ಷಣವೇ ಮಾನದಂಡವಾಗಬೇಕು. ಮೇಲೆ ವಿವರಿಸಿದ ಗುಣಮಟ್ಟದ ಶಿಕ್ಷಣವನ್ನ ಒದಗಿಸಿಕೊಡಲು ಸರ್ಕಾರ ಈ ಬಗ್ಗೆ ಎಲ್ಲಾ ಧರ್ಮದ ಮಕ್ಕಳಿಗೆ ಕಡ್ಡಾಯವಾಗಿ ಗುರ್ತಿಸಿ ಕಟ್ಟುನಿಟ್ಟಿನ ಜವಾಬ್ದಾರಿ ತೆಗೆದುಕೊಂಡು ನೋಡಿಕೊಳ್ಳಬೇಕು.

ಆಗ ಕನಿಷ್ಠಪಕ್ಷ ಸಾಧಾರಣ ಸುಧಾರಣೆಯಾಗ ಬಹುದು ಒಟ್ಟಾರೆ ರಾಷ್ಟ್ರದಲ್ಲಿರುವ ಎಲ್ಲಾ ಧರ್ಮದ ಮಕ್ಕಳಿಗೆ ಹತ್ತನೇ ತರಗತಿಯವರಿಗೆ ಕಡ್ಡಾಯವಾಗಿ ಉಚಿತ ಶಿಕ್ಷಣವನ್ನು ಜಾರಿಗೆ ತರುವುದರ ಮೂಲಕ ಭವಿಷ್ಯದ ಮುಂದಿನ ಪೀಳಿಗೆಗೆ ಈ ರಾಷ್ಟ್ರವನ್ನ ರಕ್ಷಿಸುವುದರ ಜೊತೆಗೆ ಸುಧಾರಣೆಯನ್ನು ತರಬಹುದು ಎಂಬುದು ನನ್ನ ದೂರದೃಷ್ಟಿಯ ವೈಯಕ್ತಿಕ ಅಭಿಪ್ರಾಯವಾಗಿದೆ.

## ದಾನಿಗಳ ಸಹಕಾರದಿಂದ ಉತ್ತಮ ಕಾರ್ಯ ಸಾಧ್ಯ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಯಾವುದೇ ರೀತಿಯ ಕಾರ್ಯಕ್ರಮಗಳನ್ನು ಮಾಡಲು ದಾನಿಗಳ ಸಹಕಾರದಿಂದ ಅವರು ನೀಡುವ ನೆರವಿನಿಂದ ಉತ್ತಮವಾದ ಕಾರ್ಯ ಮಾಡಲು ಸಾಧ್ಯ ಎಂದು ಅಕ್ಷಯ ವಿಪ್ರ ಮಹಾಸಭಾದ ಪ್ರಧಾನ ಕಾರ್ಯದರ್ಶಿ ಎನ್.ಎಸ್.ಸುಧೀಂದ್ರರಾವ್ ಹೇಳಿದರು.

ಅಕ್ಷಯ ವಿಪ್ರ ಮಹಾಸಭಾದ 17ನೇ ಸಮಾವೇಶದಲ್ಲಿ ವಾರ್ಷಿಕ ವರದಿಯನ್ನು ವಾಚಿಸಿದ ಅವರು ಸಂಘವು ಸಮಾಜ ಮುಖಿಯಾಗಿ ಕಾರ್ಯ ನಿರ್ವಹಿಸುತ್ತಿದ್ದು ವಿಪ್ರ ಸಮುದಾಯದ ಸಂಘಟನೆ ಜತೆಗೆ ಹಿರಿಯ ದಂಪತಿಗಳಿಗೆ ಸನ್ಮಾನ, ತೊಂಬತ್ತು ದಾಟಿದ ಹಿರಿಯರನ್ನು ಗುರುತಿಸಿ ಅವರ ಮನೆಗೆ ತೆರಳಿ ಸನ್ಮಾನಿಸಿ ಆಶೀರ್ವಾದ ಪಡೆದು ಅವರ ಜೀವನದ ಸಾರ್ಥಕ ಬದುಕಿನ ಮಾರ್ಗದರ್ಶನವನ್ನು ಪಡೆದು ಇನ್ನು ಹೆಚ್ಚಿನ ಚಟುವಟಿಕೆ ನೆಡಸಲು ಸಹಕಾರಿಯಾಗಿದೆ ಎಂದರು, ಸಂಘದ ವತಿಯಿಂದ ವಿದ್ಯಾರ್ಥಿಗಳಿಗೆ ಮತ್ತು ಕೆಲಸಕ್ಕೆ ಹೋಗುವ ಪರ ಊರಿನವರಿಗಾಗಿ ಹಾಸ್ಟೆಲ್ ಸವಲತ್ತು ಮಾಡಿದ್ದು 26ಕ್ಕೂ ಹೆಚ್ಚು ಜನರಿಗೆ ಅನಕೂಲವಾಗಿದೆ, ಪ್ರತಿ ವರ್ಷ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರದ ಜತೆಗೆ ಆರ್ಥಿಕವಾಗಿ ಹಿಂದುಳಿದವರಿಗೆ ನೆರವುನ್ನು ನೀಡಲಾಗುತ್ತಿದೆ, ವಧು ವರನೇಶ್ವನೇ, ಸಾಂಸ್ಕೃತಿಕ ಕಾರ್ಯಕ್ರಮ ಸೇರಿದಂತೆ ಮತ್ತಿತರ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ಸುಧೀಂದ್ರ ರಾವ್ ತಿಳಿಸಿದರು.

> **ಎನ್.ಎಸ್. ಸುಧೀಂದ್ರರಾವ್ ಹೇಳಿಕೆ**

ಸಂಸದ ತೇಜಸ್ವಿ ಸೂರ್ಯ ರವರು ಸಮಾವೇಶದಲ್ಲಿ ಪಾಲ್ಗೊಂಡು ಶುಭ ಹಾರೈಸಿ ತಮ್ಮ ಕಡೆಯಿಂದ ಸಾಧ್ಯವಾಗುವ ಎಲ್ಲಾ ರೀತಿಯ ನೇರವನ್ನು ನೀಡುವುದಾಗಿ ತಿಳಿಸಿದರು, ಸಮಾರಂಭದಲ್ಲಿ ಟ್ರಸ್ಟ್ ವೆಲ್ ಹಾಸ್ಪಿಟಲ್ ಸಹಯೋಗದಲ್ಲಿ ಉಚಿತವಾಗಿ ಅರೋಗ್ಯ ತಪಾಸಣೆಯನ್ನು ಡಾ, ಕಿರಣ್ ಎಸ್ ಮೂರ್ತಿ ಯವರ ನೇತೃತ್ವದಲ್ಲಿ ನೆರವೇರಿಸಲಾಯಿತು, ಸಾಧಕರಿಗೆ ಸನ್ಮಾನವನ್ನು ಖ್ಯಾತ ಹಿನ್ನಲೆ ಗಾಯಕ ಶಶಿಧರ್ ಕೋಟೆ ಮಾಡಿ ಭಕ್ತಿ ಗೀತೆಗಳನ್ನು ಹಾಡಿ ರಂಜಿಸಿದರು,

ಸಮಾರಂಭದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಕೆ, ರಾಘವೇಂದ್ರ ರಾವ್ ವಹಿಸಿದ್ದರು, ಉಪಾಧ್ಯಕ್ಷರಾದ ಡಾ, ಕಿರಣ್ ಎಸ್ ಮೂರ್ತಿ, ಪ್ರಕಾಶ್, ಜಂಟಿ ಕಾರ್ಯದರ್ಶಿಗಳಾದ ಪ್ರಾಣೇಶ್ ರಾವ್, ಲಕ್ಷ್ಮೀಶ ಎಸ್, ಎಸ್. ಮಹೇಶ್ ಕುಮಾರ್, ಖಜಾಂಚಿ ಎನ್ ರಾಘವೇಂದ್ರ ರಾವ್, ಹಿರಿಯ ಸದಸ್ಯರಾದ ಡಾ, ರಘುನಾಥ್ ರಾವ್, ಎನ್.ಕೆ. ರಾಮಚಂದ್ರ ರಾವ್, ಟಿ. ಎನ್. ಶಾಂತ ಕುಮಾರ್ ಸೇರಿದಂತೆ ಐನೂರ್ ಕ್ಕೂ ಹೆಚ್ಚು ಜನ ಪಾಲ್ಗೊಂಡಿದ್ದರು.

## ಶ್ರೀ ರಾಮಾನುಜಾಚಾರ್ಯರ ವಿಚಾರ ಸಂಕಿರಣ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ನಗರದ ಮಲ್ಲೇಶ್ವರದ ಸಂಪಿಗೆ ರಸ್ತೆಯ ಶ್ರೀ ಯದುಗಿರಿ ಯತಿರಾಜ ಮಠದಲ್ಲಿ ಶ್ರೀಮಠದ ಯತಿರಾಜ ಜೀಯರ್ ಸ್ವಾಮಿಗಳ ಹತ್ತನೇ ಚಾತುರ್ಮಾಸ್ಯ ಹಾಗೂ 75ನೇ ವರ್ಧಂತಿಯ ಅಂಗವಾಗಿ ಡಾ ಬಾಬು ಕೃಷ್ಣಮೂರ್ತಿ ವಿರಚಿತ ಶ್ರೀ ರಾಮಾನುಜಾಚಾರ್ಯರ ಜೀವನಾಧಾರಿತ ಕಾದಂಬರಿಯ ಕುರಿತು ವಿಚಾರ ಸಂಕಿರಣವನ್ನು ಶ್ರೀಮಠದ ಆವರಣದಲ್ಲಿರುವ ರಾಮಾನುಜ ಸಂಸ್ಕೃತಿ ಭವನದಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಮಾಜಿ ಅಡ್ವಕೇಟ್ ಜನರಲ್ ಹಾಗೂ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ಅಶೋಕ ಹಾರನಹಳ್ಳಿ ಉದ್ಘಾಟಿಸಿ ಮಾತನಾಡುತ್ತಾ ಸಹಸ್ರ ವರ್ಷಗಳ ಹಿಂದೆಯೇ ಸಾಮಾಜಿಕ ಕ್ರಾಂತಿಯನ್ನು ಉಂಟು ಮಾಡಿ ಸಮಾನತೆಯ ತತ್ವವನ್ನು ಪ್ರತಿಪಾದಿಸಿದವರು ಆಚಾರ್ಯ ರಾಮಾನುಜರು ಎಂದು ಅಭಿಪ್ರಾಯಪಟ್ಟರು.

ಉಪನ್ಯಾಸಕ ಡಾ ಎನ್ಕೆ ರಾಮ ಶೇಷನ್, ಇತಿಹಾಸಕಾರ ಡಾ ಜಿ ಬಿ ಹರೀಶ, ಚಿಂತಕ ಡಾ ಬೆಳವಾಡಿ ಮಂಜುನಾಥ್ ಕಾದಂಬರಿಯ ವಿವಿಧ ಮಜಲುಗಳನ್ನು ಕುರಿತು ಮಾತನಾಡಿದರು. ಖ್ಯಾತ ವಾಗ್ಮಿ ವಿದ್ಯಾ ವಾಚಸ್ಪತಿ ಡಾ ಅರಳುಮಲ್ಲಿಗೆ ಪಾರ್ಥಸಾರಥಿ ಸಮಾರೋಪ ನುಡಿಗಳನ್ನಾಡಿದರು. ಡಾ ಗಣಪತಿ ಹೆಗಡೆ ಪ್ರಾಸ್ತಾವಿಕ ನುಡಿಗಳನ್ನು ಆಡಿದರು. ಡಾ ನಂಜುಂಡ ರಾವ್ ಕಾರ್ಯಕ್ರಮ ನಿರೂಪಿಸಿದರು. ಶ್ರೀಮಠದ ಪಿ ಆರ್ ಓ ರಾಮಪ್ರಸಾದ್ ಸ್ವಾಗತಿಸಿದರು.

> **ವಿಚಾರ ಸಂಕಿರಣದಲ್ಲಿ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊ. ಮಲ್ಲೇಪುರಂ ಜಿ ವೆಂಕಟೇಶ್ ಮಾತನಾಡಿ ಆಚಾರ್ಯ ತ್ರಯರ ಕುರಿತು ಅನೇಕ ಶಾಸ್ತ್ರ ಗ್ರಂಥಗಳು ಬಂದಿರುತ್ತದೆ, ಸಾಹಿತ್ಯಕ ದೃಷ್ಟಿಯಿಂದ ದಾರ್ಶನಿಕರ ಒಬ್ಬರ ಕುರಿತಾದ ಕಾದಂಬರಿ ಬಂದಿರುವುದು ಇದೆ ಮೊದಲು, ಆಚಾರ್ಯರ ಭವ್ಯ ವ್ಯಕ್ತಿತ್ವವನ್ನು ಕಟ್ಟುಕೊಡುವಲ್ಲಿ ಲೇಖಕ ಬಾಬು ಕೃಷ್ಣಮೂರ್ತಿ ರವರ ಬರವಣಿಗೆಯಲ್ಲಿ ಬಹಳ ಸೊಗಸಾಗಿ ನಿರೂಪಿಸಿದ್ದಾರೆ ಎಂದು ತಿಳಿಸಿದರು.**

## ಸರ್ಕಾರದಿಂದ ನೆರೆ ಪರಿಹಾರಕ್ಕೆ 777 ಕೋಟಿ ರೂ. ಬಿಡುಗಡೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ನೆರೆ ಪರಿಹಾರ ಹಾಗೂ ಇತರೆ ಕಾರ್ಯಕ್ರಮಗಳಿಗೆ ಒಟ್ಟು 777 ಕೋಟಿ ಬಿಡುಗಡೆ ಮಾಡಲಾಗಿದೆ. ಹಾಸನ ಜಿಲ್ಲೆಗೆ 23 ಕೋಟಿ ನೀಡಲಾಗಿದೆ ಅಂತ ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

ರಾಜ್ಯದಲ್ಲಿ ಕಳೆದ ಕೆಲ ದಿನಗಳಿಂದ ಸುರಿದಂತ ಭಾರೀ ಮಳೆಯಿಂದಾಗಿ ಹಲವೆಡೆ ಮನೆಗಳು ಬಿದ್ದು ಹೋಗಿದ್ದಾವೆ.

ನೀರು ಬೆಳೆಯ ಮೇಲೆ ನುಗ್ಗಿದ್ದ ಪರಿಣಾಮ, ಬೆಳೆಹಾನಿ ಕೂಡ ಆಗಿದೆ. ಈ ರೈತರಿಗೆ ನೆರವಾಗುವ ಸಲುವಾಗಿ ನೆರೆ ಪರಿಹಾರವಾಗಿ ರಾಜ್ಯ ಸರ್ಕಾರದಿಂದ 777 ಕೋಟಿಯನ್ನು ಬಿಡುಗಡೆ ಮಾಡಲಾಗಿದೆ. ನದಿಯ ಬದಿಗಳಲ್ಲಿ ಹಾಗೂ ಜಲಾಶಯದ ಹಿನ್ನೀರು ಬದಿಯಲ್ಲಿ ನೆರೆ ಇಲ್ಲದ ಸಂದರ್ಭದಲ್ಲಿ ರೈತರು ಬೆಳೆಯನ್ನು ಬೆಳೆಯುವುದು ಹಾಗೂ ನೆರೆ ಬಂದ ಸಂದರ್ಭದಲ್ಲಿ ಹಿಂದಕ್ಕೆ ಸರಿಯುವುದು ವಾಡಿಕೆಯಾಗಿದೆ. ಇದು ಕಾನೂನಾತ್ಮಕ ವಾಗಿ ತಪ್ಪು ನೆರೆ ಬಂದ ಸಂದರ್ಭದಲ್ಲಿ ಪ್ರಾಣ ಹಾನಿಯಾಗಬಹುದು ಹಾಗೂ ಇಲ್ಲಿ ಬೆಳೆಯುವ ಬೆಳೆಗಳಿಗೆ ಬೆಳೆ ಹಾನಿ ಪರಿಹಾರ ಒದಗಿಸುವುದು ಸಾಧ್ಯವಿಲ್ಲ ಎಂದರು. ವಿಪತ್ತು ನಿರ್ವಹಣೆಗಾಗಿ ರಾಜ್ಯದಲ್ಲಿ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಖಾತೆಗೆ ಒಟ್ಟು 770 ಕೋಟಿ ಹಣವನ್ನು ಮೀಸಲಿರಿಸಲಾಗಿದೆ. ಮಂಡ್ಯ ಜಿಲ್ಲೆಗೂ ಸಹ 20 ಕೋಟಿ ಹಣ ನೀಡಲಾಗಿದೆ. ಎಲ್ಲಾ ತಾಲ್ಲೂಕುಗಳಿಗೆ 25 ಲಕ್ಷ ರೂ ನೀಡಲಾಗಿದೆ ಎಂದರು. ಸಣ್ಣ ಪುಟ್ಟ ತೊಂದರೆಯಾದಾಗ ರಾಜ್ಯ ಸರ್ಕಾರ ನಿಭಾಯಿಸುತ್ತದೆ. ರಾಜ್ಯದಲ್ಲಿ ದೊಡ್ಡ ಮಟ್ಟದಲ್ಲಿ ಹಾನಿ ಆದಾಗ ಮಾತ್ರ ಎನ್ ಡಿ ಆರ್ ಎಫ್ ತಂಡಕ್ಕೆ ಆಹ್ವಾನ ನೀಡಬೇಕಿದೆ ಎಂದರು. ರಾಜ್ಯದಲ್ಲಿ ನೆರೆ ಪರಿಹಾರ ಹಾಗೂ ಇತರೆ ಕಾರ್ಯಕ್ರಮಗಳಿಗೆ ಒಟ್ಟು ರೂ.777 ಕೋಟಿ ಬಿಡುಗಡೆ ಮಾಡಲಾಗಿದೆ. ಹಾಸನ ಜಿಲ್ಲೆಗೆ ರೂ. 23 ಕೋಟಿ ನೀಡಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

## ಬಿಬಿಎಂಪಿ ವ್ಯಾಪ್ತಿಯಲ್ಲಿ ಅನಧಿಕೃತ ಫ್ಲೆಕ್ಸ್/ಬ್ಯಾನರ್ ಅಳವಡಿಸುವವರ ಮೇಲೆ ಕಟ್ಟುನಿಟ್ಟಿನ ಕ್ರಮ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಬಿಬಿಎಂಪಿ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಫ್ಲೆಕ್ಸ್/ಬ್ಯಾನರ್ ಅಳವಡಿಸುವವರ ಮೇಲೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಮುಖ್ಯ ಆಯುಕ್ತರಾದ ಶ್ರೀ ತುಷಾರ್ ಗಿರಿ ನಾಥ್ ರವರು ಎಲ್ಲಾ ವಲಯ ಆಯುಕ್ತರಿಗೆ ಸೂಚನೆ ನೀಡಿದರು.

ಬಿಬಿಎಂಪಿ ವ್ಯಾಪ್ತಿಯ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಪಾಲಿಕೆ ಕೇಂದ್ರ ಕಛೇರಿಯಲ್ಲಿ ಇಂದು ನಡೆದ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಪಾಲಿಕೆ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಫ್ಲೆಕ್ಸ್/ಬ್ಯಾನರ್‌ಗಳನ್ನು ಅಳವಡಿಸುತ್ತಿದ್ದು, ಅದನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಬೇಕಿದೆ. ಈ ನಿಟ್ಟಿನಲ್ಲಿ ಆಯಾ ವಲಯ ವ್ಯಾಪ್ತಿಯಲ್ಲಿ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡು ಎಲ್ಲಿಯೂ ಅನಧಿಕೃತ ಜಾಹೀರಾತುಗಳನ್ನು ಅಳವಡಿಸದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು.

ಅನಧಿಕೃತವಾಗಿ ಅಳವಡಿಸುತ್ತಿರುವ ಫ್ಲೆಕ್ಸ್/ಬ್ಯಾನರ್‌ಗಳನ್ನು ಪಾಲಿಕೆಯಿಂದ ತೆರವುಗೊಳಿಸಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿ ಎಫ್.ಐ.ಆರ್ ದಾಖಲಿಸಲಾಗುತ್ತಿದೆ. ಆದರೂ ಸಾರ್ವಜನಿಕ ಸ್ಥಳ, ರಸ್ತೆ ಬದಿ ಫ್ಲೆಕ್ಸ್ ಅಳವಡಿಸುವುದು ಮಾತ್ರ ನಿಯಂತ್ರಣವಾಗುತ್ತಿಲ್ಲ. ಆದ್ದರಿಂದ ಪಾಲಿಕೆ ಹಾಗೂ ಪೊಲೀಸ್ ಇಲಾಖೆ ಜಂಟಿ ಕಾರ್ಯಾಚರಣೆ ನಡೆಸಿ ಅನಧಿಕೃತ ಜಾಹೀರಾತು ಅಳವಡಿಕೆಗೆ ನಿಯಂತ್ರಣ ತರಬೇಕೆಂದು ಅಧಿಕಾರಿಗಳಿಗೆ ತಿಳಿಸಿದರು. ವಲಯವಾರು ಬರುವ ಪ್ರಿಂಟಿಂಗ್ ಯುನಿಟ್ಸ್ ಗಳ ಮೇಲೆ ಆಗಿಂದಾಗ್ಗೆ ಪಾಲಿಕೆ ಅಧಿಕಾರಿಗಳು ಭೇಟಿ ನೀಡಿ ಫ್ಲೆಕ್ಸ್/ಬ್ಯಾನರ್ ಗಳನ್ನು ಅಳವಡಿಸದಂತೆ ಎಚ್ಚರಿಕೆ ನೀಡಬೇಕು. ಜೊತೆಗೆ ಅನಧಿಕೃತ ಜಾಹೀರಾತುಗಳನ್ನು ಅಳವಡಿಸಿದಂತೆ ನಾಗರೀಕರಲ್ಲಿ ಹೆಚ್ಚು-ಹೆಚ್ಚು ಅರಿವು ಮೂಡಿಸುವ ಕೆಲಸವಾಗಬೇಕು ಎಂದು ಹೇಳಿದರು.

> **ಫ್ಲೆಕ್ಸ್/ಬ್ಯಾನರ್ ಗಳನ್ನು ಅಳವಡಿಸದಂತೆ ಎಚ್ಚರಿಕೆ**

**ರಾತ್ರಿ ವೇಳೆ ಪ್ರಹರಿ ವಾಹನಗಳ ಮೂಲಕ ಗಸ್ತು ತಿರುಗಬೇಕು:** ಪಾಲಿಕೆ ವ್ಯಾಪ್ತಿಯಲ್ಲಿ ಅನಧಿಕೃತ ಜಾಹೀರಾತುಗಳನ್ನು ರಾತ್ರಿ ವೇಳೆ ಹೆಚ್ಚಾಗಿ ಅಳವಡಿಸುತ್ತಾರೆ. ಈ ನಿಟ್ಟಿನಲ್ಲಿ ಆಯಾ ವಲಯ ವ್ಯಾಪ್ತಿಯಲ್ಲಿ ಒಂದು ಪ್ರಹರಿ ವಾಹನವನ್ನು ನಿಯೋಜಿಸಿ ಪ್ರಮುಖ ರಸ್ತೆಗಳಲ್ಲಿ ಗಸ್ತು ತಿರುಗುವ ಮೂಲಕ ಪರಿಶೀಲನೆ ಹಾಗೂ ಅನಧಿಕೃತ ಫ್ಲೆಕ್ಸ್/ಬ್ಯಾನರ್ ಅಳವಡಿಸುವುದರ ಮೇಲೆ ನಿಗಾವಹಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.


**ರಸ್ತೆ ಗುಂಡಿ ಗಮನ ತಂತ್ರಾಂಶದಲ್ಲಿ ಬರುವ ದೂರುಗಳಿಗೆ ಕೂಡಲೆ ಸ್ಪಂದಿಸಿ:** ನಗರದಲ್ಲಿ ಕಾಲಮಿತಿಯೊಳಗಾಗಿ ಹಾಗೂ ತ್ವರಿತವಾಗಿ ರಸ್ತೆ ಗುಂಡಿಗಳನ್ನು ಮುಚ್ಚುವ ಸಲುವಾಗಿ ''ರಸ್ತೆ ಗುಂಡಿ ಗಮನ'' ಮೊಬೈಲ್ ಅಪ್ಲಿಕೇಷನ್ ಅನ್ನು ಅನಾವರಣಗೊಳಿಸಿದ್ದು, ಅದರ ಬಗ್ಗೆ ಅಧಿಕಾರಿಗಳಿಗೆ ತರಬೇತಿ ನೀಡಲಾಗಿದೆ. ತಂತ್ರಾಂಶದ ಮೂಲಕ ನಾಗರೀಕರಿಂದ ಬರುವ ದೂರಗಳನ್ನು ತ್ವರಿತವಾಗಿ ಮುಚ್ಚಬೇಕು. ಜೊತೆಗೆ ನಗರದ ಪ್ರಮುಖ ರಸ್ತೆಗಳಲ್ಲಿರುವ ಗುಂಡಿಗಳನ್ನು ಆದ್ಯತೆ ಮೇರೆಗೆ ಮುಚ್ಚಲು ಕ್ರಮ ಕೈಗೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು, ಈ ವೇಳೆ ವಿಶೇಷ ಆಯುಕ್ತರಾದ ಮುನೀಶ್ ಮೌದ್ಗಿಲ್, ಡಾ. ಕೆ. ಹರೀಶ್ ಕುಮಾರ್, ಸುರಳ್ಕರ್ ವಿಕಾಸ್ ಕಿಶೋರ್, ಅವಿನಾಶ್ ಮೆನನ್ ರಾಜೇಂದ್ರನ್, ಶಿವಾನಂದ್ ಕಲ್ಕೆರೆ, ವಲಯ ಆಯುಕ್ತರಾದ ಡಾ. ಆರ್.ಎಲ್ ದೀಪಕ್, ಶಿವಾನಂದ್ ಕಪಾಶಿ, ರಮೇಶ್, ಕರೀಗೌಡ, ಪ್ರೀತಿ ಗೆಹ್ಲೋಟ್, ಸ್ನೇಹಲ್, ವಿನೋತ್ ಪ್ರಿಯಾ, ರಮ್ಯಾ, ಪ್ರಧಾನ ಅಭಿಯಂತರರಾದ ಡಾ. ಪ್ರಹ್ಲಾದ್, ಮುಖ್ಯ ಅಭಿಯಂತರರು ಸೇರಿದಂತೆ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

### ಡೆಂಘೀ ನಿಯಂತ್ರಣಕ್ಕೆ ಸೂಕ್ತ ಕ್ರಮ ವಹಿಸಿ

**ನಗರದಲ್ಲಿ ಸರಾಸರಿ 200 ಡೆಂಘೀ ಪ್ರಕರಣಗಳು ಕಂಡುಬರುತ್ತಿವೆ ಪ್ರತಿ ವಾರ್ಡ್‌ನಲ್ಲಿ ಔಷಧಿ ಸಿಂಪಡಣೆಗಾಗಿ ಸ್ಪ್ರೇಯರ್ ಹಾಗೂ ಸಿಬ್ಬಂದಿ ನಿಯೋಜನೆ ಮಾಡಿಕೊಳ್ಳಲು ಸೂಚನೆ ನೀಡಲಾಗಿದ್ದು, ಈ ಪೈಕಿ ಅಗತ್ಯ ಸಿಬ್ಬಂದಿಯನ್ನು ನಿಯೋಜನೆ ಮಾಡಿಕೊಳ್ಳಲು ಸೂಚಿಸಲಾಯಿತು. ಪಾಲಿಕೆ ವ್ಯಾಪ್ತಿಯಲ್ಲಿ ಸದ್ಯ 30 ಆಕ್ಟೀವ್ ಹಾಟ್ ಸ್ಪಾಟ್ ಗಳಿದ್ದು, ಕೊಳಗೇರಿ ಹಾಗೂ ಬಡ ವರ್ಗದ ಪ್ರದೇಶದಲ್ಲಿ ನೀಮ್ ಆಯಿಲ್ ಹಾಗು ಡೀಟ್ ಕ್ರೀಮ್ ಅನ್ನು ಹಂಚಿಕೆ ಮಾಡಲಾಗುತ್ತಿದೆ. ಡೆಂಘೀ ಪ್ರಕರಣಗಳನ್ನು ನಿಯಂತ್ರಿಸಸುವ ಸಲುವಾಗಿ ಸೊಳ್ಳೆ ಉತ್ಪತ್ತಿ ತಾಣಗಳಲ್ಲಿ ಹೆಚ್ಚಾಗಿ ಫಾಗಿಂಗ್, ಔಷಧಿ ಸಿಂಪಡಣೆ ಮಾಡಬೇಕು. ಜೊತೆಗೆ ಹಾಟ್‌ಸ್ಪಾಟ್ ಸ್ಥಳಗಳಲ್ಲಿ ಡೆಂಘೀ ನಿಯಂತ್ರಣಕ್ಕೆ ಬೇಕಾದ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಸೂಚಿಸಿದರು.**

# ಕೆಟ್ಟ ವಾಸನೆಯಿಂದ ಸಿಬ್ಬಂದಿಯಲ್ಲಿ ವಾಂತಿ, ಪ್ರಯಾಣಿಕರ ಪರದಾಟ

## ಬೋಸ್ಟನ್‌ಗೆ ಹೊರಟಿದ್ದ ಯುನೈಟೆಡ್ ಏರ್‌ಲೈನ್ಸ್ ಯುಎ2477 ವಿಮಾನ, ರಕ್ಷಣೆಗಾಗಿ ಮಾಸ್ಕ್‌ಗೆ ಬೇಡಿಕೆ ಇರಿಸಿದ ಪ್ರಯಾಣಿಕರು



ಅಮೆರಿಕ ವಿಮಾನದಲ್ಲಿ ಜೈವಿಕ ಅಪಾಯ

**ನ್ಯೂಯಾರ್ಕ್:** ಅಮೆರಿಕದಲ್ಲಿ ಹ್ಯೂಸ್ಟನ್‌ನಿಂದ ಬೋಸ್ಟನ್‌ಗೆ ಹೊರಟಿದ್ದ ವಿಮಾನ ವೊಂದರಲ್ಲಿ ಬಯೋ ಹಜಾರ್ಡ್‌ನ ವಿಚಿತ್ರ ಸನ್ನಿವೇಶ ಸೃಷ್ಟಿಯಾಗಿ, ಅನಿವಾರ್ಯವಾಗಿ ವಾಷಿಂಗ್ಟನ್ ಡಿಸಿಯತ್ತ ದಿಕ್ಕು ಬದಲಿಸಬೇಕಾದ ಘಟನೆ ನಡೆದಿದೆ. ಪ್ರಯಾಣಿಕರೊಬ್ಬರಲ್ಲಿ ವೈದ್ಯಕೀಯ ಸಮಸ್ಯೆ ಉಂಟಾದ ಹಿನ್ನೆಲೆಯಲ್ಲಿ ಯುನೈಟೆಡ್ ಏರ್‌ಲೈನ್ಸ್ ವಿಮಾನದೊಳಗೆ 'ಜೈವಿಕ ಅಪಾಯ'ದ ಸಂಕಷ್ಟ ಎದುರಾಗಿತ್ತು. ಇದರಿಂದ ವಿಮಾನದೊಳಗೆ ಕೆಟ್ಟ ವಾಸನೆ ಹರಡಿ ವಿಮಾನದ ಸಿಬ್ಬಂದಿ ವಾಂತಿ ಮಾಡಿಕೊಂಡರು. ಇತರೆ ಪ್ರಯಾಣಿಕರೂ ಆತಂಕಕ್ಕೆ ಒಳಗಾದರು.

ಯುನೈಟೆಡ್ ಏರ್‌ಲೈನ್ಸ್ ಯುಎ2477 ವಿಮಾನ (ಬೋಯಿಂಗ್ 737–800) ಹ್ಯೂಸ್ಟನ್ ಜಾರ್ಜ್ ಬುಷ್ ಖಂಡಾಂತರ ವಿಮಾನ ನಿಲ್ದಾಣದಿಂದ ಬಾಸ್ಟನ್‌ಗೆ ಜುಲೈ 28ರ ಬೆಳಗ್ಗೆ 9.30ಕ್ಕೆ ಹೊರಟಿತ್ತು. ಅದನ್ನು ವಾಷಿಂಗ್ಟನ್ ಡಿಸಿಯಲ್ಲಿನ ಡುಲ್ಲೆಸ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ತಿರುಗಿಸಲಾಯಿತು ಎಂದು ನ್ಯೂಯಾರ್ಕ್ ಪೋಸ್ಟ್ ವರದಿ ಮಾಡಿದೆ. ಸಂಪೂರ್ಣ ಸ್ವಚ್ಛತೆ ಕಾರ್ಯಕ್ಕಾಗಿ ವಾಷಿಂಗ್ಟನ್ ಡಿಸಿಯ ಡುಲ್ಲೆಸ್ ವಿಮಾನ ನಿಲ್ದಾಣದಲ್ಲಿ ಮಧ್ಯಾಹ್ನ 1.30ರ ವೇಳೆಗೆ ವಿಮಾನ ಲ್ಯಾಂಡ್ ಮಾಡುವ ಅನಿವಾರ್ಯತೆ ಎದುರಾಯಿತು ಎಂದು ವಿಮಾನಯಾನ ಸಂಸ್ಥೆ ಹೇಳಿದೆ.

ಕ್ಯಾಪ್ಟನ್ ಮತ್ತು ವಾಯು ಸಂಚಾರ ನಿಯಂತ್ರಣ ವಿಭಾಗದ ನಡುವಿನ ಸಂಭಾಷಣೆಯ ಆಡಿಯೋ ಬಹಿರಂಗವಾಗಿದ್ದು, ನಡು ಆಕಾಶದಲ್ಲಿ ಸಂಕಷ್ಟದ ಪರಿಸ್ಥಿತಿ ನಿರ್ಮಾಣವಾಗಿದ್ದರ ಬಗ್ಗೆ ತಿಳಿಸಿದೆ.

### ಮುನ್ನೆಚ್ಚರಿಕೆ ಅಗತ್ಯ

**2023ರ ಸೆಪ್ಟೆಂಬರ್‌ನಲ್ಲಿ ತೀವ್ರ ಅತಿಸಾರದಿಂದ ಬಳಲುತ್ತಿದ್ದ ಪ್ರಯಾಣಿಕರೊಬ್ಬರಿಂದಾಗಿ ಡೆಲ್ಟಾ ಏರ್‌ಲೈನ್ಸ್ ವಿಮಾನದಲ್ಲಿ ಇದೇ ರೀತಿಯ 'ಜೈವಿಕ ಅಪಾಯ' ಸನ್ನಿವೇಶ ಸೃಷ್ಟಿಯಾಗಿತ್ತು. ಹೀಗಾಗಿ ಪೈಲಟ್ ತುರ್ತು ಲ್ಯಾಂಡ್ ಮಾಡಿದ್ದರು. ವಿಮಾನದಲ್ಲಿ ಪ್ರಯಾಣಿಸುವಾಗ ಯಾವಾಗಲೂ ನಿಮಗೆ ಇಷ್ಟವಾದ ಸುವಾಸನೆ ಬೀರುವ ಹಾಗೂ ಇತರೆ ಬಾಹ್ಯ ದುರ್ಗಂಧವನ್ನು ತಡೆಯುವಂತಹ ವಸ್ತುವನ್ನು ಜತೆಯಲ್ಲಿ ಕೊಂಡೊಯ್ಯಿರಿ. ಜತೆಗೆ ವಾಂತಿ ಚೀಲ ಸಹ ನಿಮ್ಮ ಜತೆಯಲ್ಲಿ ಇರಲಿ ಎಂದು ಕೆಲವರು ಸಲಹೆ ನೀಡಿದ್ದಾರೆ.**

**ವಿಮಾನದಲ್ಲಿ 'ಜೈವಿಕ ಅಪಾಯ' ಸನ್ನಿವೇಶ ಉಂಟಾಗಿದ್ದರಿಂದ ಸಿಬ್ಬಂದಿ ವಾಂತಿ ಮಾಡಿಕೊಂಡು, ಪ್ರಯಾಣಿಕರು ಮಾಸ್ಕ್‌ಗಾಗಿ ಬೇಡಿಕೆ ಇರಿಸಿದ ಅಪರೂಪದ ಘಟನೆ ಅಮೆರಿಕದಲ್ಲಿ ನಡೆದಿದೆ. ಹ್ಯೂಸ್ಟನ್‌ನಿಂದ ಬಾಸ್ಟನ್‌ಗೆ ತೆರಳುತ್ತಿದ್ದ ವಿಮಾನದಲ್ಲಿ ಪ್ರಯಾಣಿಕರೊಬ್ಬರಲ್ಲಿ ವೈದ್ಯಕೀಯ ಸಮಸ್ಯೆ ಉಂಟಾಗಿದ್ದರಿಂದ ಕೆಟ್ಟ ವಾಸನೆ ಹರಡಿತ್ತು ಎಂದು ವರದಿ ತಿಳಿಸಿದೆ.**

ನಾನು ಸಿಬ್ಬಂದಿ ಜತೆ ಮಾತನಾಡಿದ್ದೇನೆ. ಅಲ್ಲಿ ಪರಿಸ್ಥಿತಿ ಬಹಳ ಕೆಟ್ಟದಾಗಿರುವಂತೆ ಕಾಣಿಸುತ್ತಿದೆ. ಸಿಬ್ಬಂದಿ ವಾಂತಿ ಮಾಡಿಕೊಳ್ಳುತ್ತಿದ್ದಾರೆ. ಸುತ್ತಮುತ್ತಲಿನ ಪ್ರಯಾಣಿಕರು ಮಾಸ್ಕ್ ನೀಡುವಂತೆ ಕೇಳುತ್ತಿದ್ದಾರೆ ಎಂದು ವಿಮಾನದಲ್ಲಿನ ಸಂಭಾಷಣೆಯ ಆಡಿಯೋವನ್ನು ನ್ಯೂಯಾರ್ಕ್ ಪೋಸ್ಟ್ ಉಲ್ಲೇಖಿಸಿದೆ. ವಿಮಾನ ಪ್ರಯಾಣದ ವೇಳೆ ಪ್ರಯಾಣಿಕರಲ್ಲಿ ಅತಿಸಾರದಂತಹ ಆರೋಗ್ಯ ಸಮಸ್ಯೆ ಉಂಟಾಗುವುದರಿಂದ ಇತರರಿಗೂ ತೊಂದರೆ ಉಂಟಾಗುವ ಸನ್ನಿವೇಶವನ್ನು ಜೈವಿಕ ಅಪಾಯ ಎಂದು ಕರೆಯಲಾಗುತ್ತದೆ.

ವಿಮಾನವನ್ನು ವಾಷಿಂಗ್ಟನ್ ಡುಲ್ಲೆಸ್ ವಿಮಾನ ನಿಲ್ದಾಣದಲ್ಲಿ ಸುರಕ್ಷಿತವಾಗಿ ಇಳಿಸಲಾಯಿತು. 155 ಪ್ರಯಾಣಿಕರು ಅಥವಾ ಆರು ಮಂದಿ ಸಿಬ್ಬಂದಿಯಲ್ಲಿ ಯಾರಿಗೂ ವೈದ್ಯಕೀಯ ನೆರವಿನ ಅಗತ್ಯ ಬೀಳಲಿಲ್ಲ. ವಿಮಾನವನ್ನು ಸಂಪೂರ್ಣ ಸ್ವಚ್ಛಗೊಳಿಸುವ ಕಾರ್ಯ ನಡೆಯುತ್ತಿದೆ. ಪ್ರಯಾಣಿಕರು ಬಾಸ್ಟನ್ ತಲುಪಲು ಬೇರೆ ವ್ಯವಸ್ಥೆ ಮಾಡಲಾಗಿದೆ ಎಂದು ವಿಮಾನಯಾನ ಸಂಸ್ಥೆ ಹೇಳಿದೆ. ವಿಮಾನವನ್ನು ಕೆಟ್ಟ ವಾಸನೆ ಆವರಿಸಿತ್ತು.

ಸಿಬ್ಬಂದಿ ಅಸ್ವಸ್ಥರಾಗಿ ವಾಂತಿ ಮಾಡಿಕೊಂಡರು. ಪ್ರಯಾಣಿಕರೂ ಉಸಿರಾಡಲು ಪರದಾಡಿದರು. ವಿಮಾನದಲ್ಲಿದ್ದ ವೈದ್ಯರೊಬ್ಬರು ಇದು 'ಜೈವಿಕ ಅಪಾಯದ ಸನ್ನಿವೇಶ, ಆದಷ್ಟು ಬೇಗನೆ ವಿಮಾನವನ್ನು ಲ್ಯಾಂಡ್ ಮಾಡಬೇಕು ಎಂದು ಪೈಲಟ್‌ಗಳಿಗೆ ಮನವಿ ಮಾಡಿದರು ಎಂದು ವರದಿ ತಿಳಿಸಿದೆ.

# ಇಂಡೋ ಪೆಸಿಫಿಕ್ ಸುರಕ್ಷತೆಯೇ ಕ್ವಾಡ್ ಗುರಿ: ಜೈಶಂಕರ್

**ಟೋಕಿಯೊ:** ನಿಯಮಾಧಾರಿತ ಆದೇಶವನ್ನು ಎತ್ತಿಹಿಡಿಯುವ ಹೆಚ್ಚುವರಿ ಜವಾಬ್ದಾರಿಗಳನ್ನು ಕ್ವಾಡ್ ಹೊಂದಿದೆ ಮತ್ತು ಗುಂಪಿನ ಅಡಿಯಲ್ಲಿ ಸಹಯೋಗವು ಇಂಡೋ–ಪೆಸಿಫಿಕ್ ಮುಕ್ತ ಮತ್ತು ಸುರಕ್ಷಿತವಾಗಿರುವುದನ್ನು ಖಚಿತಪಡಿಸುತ್ತದೆ ಎಂದು ವಿದೇಶಾಂಗ ಸಚಿವ ಎಸ್ ಜೈಶಂಕರ್ ಹೇಳಿದ್ದಾರೆ.

ಇಂಡೋ–ಪೆಸಿಫಿಕ್ ಮುಕ್ತವಾಗಿ ಉಳಿಯುತ್ತದೆ, ಮುಕ್ತ, ಸ್ಥಿರ, ಸುರಕ್ಷಿತ ಮತ್ತು ಸಮದ್ಧವಾಗಿದೆ ಎಂದು ಖಚಿತಪಡಿಸಿಕೊಳ್ಳುವುದು ನಮ ಸಹಯೋಗದಿಂದ ಮಾತ್ರ. ನಾವೆಲ್ಲರೂ ಕೈಗೊಂಡಿರುವ ಜಾಗತಿಕ ಒಳಿತನ್ನು ಮಾಡುವ ಬದ್ಧತೆಯು ಈ ಪ್ರದೇಶವನ್ನು ಮೀರಿದ ಅನುರಣನವನ್ನು ಹೊಂದಿದೆ ಎಂದು ಅವರು ಹೇಳಿದರು.

ಆದ್ದರಿಂದ ನಮ ರಾಜಕೀಯ ತಿಳುವಳಿಕೆಯನ್ನು ಬಲಪಡಿಸುವುದು, ನಮ ಆರ್ಥಿಕ ಪಾಲುದಾರಿಕೆಗಳು ಬೆಳೆಯುವುದು, ನಮ ತಂತ್ರಜ್ಞಾನದ ಸಹಯೋಗಗಳು ವಿಸ್ತರಿಸುವುದು, ನಮ ಜನರಿಂದ ಜನರ ಸೌಕರ್ಯವನ್ನು ತೀವ್ರಗೊಳಿಸುವುದು ಅತ್ಯಗತ್ಯ ಎಂದು ವಿದೇಶಾಂಗ ವ್ಯವಹಾರಗಳ ಸಚಿವರು ಹೇಳಿದರು. ಜೈಶಂಕರ್ ಅವರಲ್ಲದೆ, ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಆಂಟೋನಿ ಬ್ಲಿಂಕೆನ್, ಜಪಾನ್ ವಿದೇಶಾಂಗ ಸಚಿವ ಯೊಕೊ ಕಾಮಿಕಾವಾ, ಆಸ್ಟ್ರೇಲಿಯಾದ ಪೆನ್ನಿ ವಾಂಗ್ ಸಭೆಯಲ್ಲಿ ಭಾಗವಹಿಸಿದ್ದರು.

**ಕ್ವಾಡ್‌ನ ವಿದೇಶಾಂಗ ಸಚಿವರ ಸಮಾವೇಶದಲ್ಲಿ ತಮ್ಮ ಆರಂಭಿಕ ಹೇಳಿಕೆಯಲ್ಲಿ ಜೈಶಂಕರ್ ಅವರು ಕ್ವಾಡ್ ಇಲ್ಲಿ ಉಳಿಯಲು, ಇಲ್ಲಿ ಮಾಡಲು ಮತ್ತು ಇಲ್ಲಿಗೆ ಹೋಗಲು ಎಂಬ ಸ್ಪಷ್ಟ ಸಂದೇಶವನ್ನು ಕಳುಹಿಸಬೇಕು, ರಾಜಕೀಯ ಪ್ರಜಾಪ್ರಭುತ್ವಗಳು, ಬಹುತ್ವದ ಸಮಾಜಗಳು ಮತ್ತು ಮಾರುಕಟ್ಟೆ ಆರ್ಥಿಕತೆಗಳಾಗಿ, ನಿಯಮಾಧಾರಿತ ಆದೇಶವನ್ನು ಎತ್ತಿಹಿಡಿಯುವ ಪ್ರಮುಖ ಪ್ರಶ್ನೆಯಿದೆ**

**– ಎಸ್. ಜೈಶಂಕರ್**
**ವಿದೇಶಾಂಗ ಸಚಿವ**



ತನ್ನ ಕಾಮೆಂಟ್‌ಗಳಲ್ಲಿ, ಆಸ್ಟ್ರೇಲಿಯಾದ ವಿದೇಶಾಂಗ ಸಚಿವ ವಾಂಗ್ ಅವರು ಚೀನಾವನ್ನು ನೇರವಾಗಿ ಹೆಸರಿಸದೆ, ಸಾರ್ವಭೌಮತ್ವವನ್ನು ಗೌರವಿಸಲಾಗುತ್ತದೆ, ಸ್ಪರ್ಧೆಯನ್ನು ಜವಾಬ್ದಾರಿಯುತವಾಗಿ ನಿರ್ವಹಿಸಲಾಗುತ್ತದೆ ಎಂದು ಖಚಿತಪಡಿಸಿಕೊಳ್ಳುವ ಅಗತ್ಯವನ್ನು ಎತ್ತಿ ತೋರಿಸಿದರು. ಗಾತ್ರ ಅಥವಾ ಶಕ್ತಿಯು ದೇಶದ ಭವಿಷ್ಯವನ್ನು ನಿರ್ಧರಿಸದ ಪ್ರದೇಶವನ್ನು ನಿರ್ಮಿಸಲು ಸಾಮೂಹಿಕವಾಗಿ ಕೆಲಸ ಮಾಡಲು ಅವರು ಕರೆ ನೀಡಿದರು. ಅಲ್ಲಿ ಯಾವುದೇ ದೇಶವು ಪ್ರಾಬಲ್ಯ ಸಾಧಿಸುವುದಿಲ್ಲ ಮತ್ತು ಯಾವುದೇ ದೇಶವು ಪ್ರಾಬಲ್ಯ ಹೊಂದಿಲ್ಲ. ಅಲ್ಲಿ ನಾವೆಲ್ಲರೂ ನಮ ಆಕಾಂಕ್ಷೆಗಳಲ್ಲಿ ಪಾಲ್ಗೊಳ್ಳುತ್ತೇವೆ.

ಮತ್ತು ಆ ಆಕಾಂಕ್ಷೆಗಳನ್ನು ಸಾಕಾರಗೊಳಿಸಲು ಆಯ್ಕೆಗಳು ಲಭ್ಯವಿವೆ. ಕಳೆದ ಎರಡು ವರ್ಷಗಳಲ್ಲಿ ಇಂಡೋ–ಪೆಸಿಫಿಕ್‌ನ ಈ ದಿಷ್ಟಿಗೆ ಕ್ವಾಡ್‌ನ ಬದ್ಧತೆಯನ್ನು ನಾನು ನೋಡಿದ್ದೇನೆ ಎಂದು ಅವರು ಹೇಳಿದರು. ಜೈಶಂಕರ್ ಅವರು ತಮ ಹೇಳಿಕೆಯಲ್ಲಿ ಕೆಲಸ ಮಾಡುವ ಅಗತ್ಯತೆಯ ಬಗ್ಗೆಯೂ ಮಾತನಾಡಿದರು.

## 1000 ಕೋಟಿ ಮೌಲ್ಯದ ಜಮೀನು ಕಬಳಿಕೆ

# ಆರೋಪದಲ್ಲಿ ಪತ್ರಕರ್ತ ಸೇರಿ 14 ಮಂದಿ ಬಂಧನ

**ಕಾನ್ಪುರ:** ಒಂದು ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಮಾರುಕಟ್ಟೆ ಮೌಲ್ಯದ ಸರ್ಕಾರಿ ಭೂಮಿಯನ್ನು ಕಬಳಿಸಿದ ಆರೋಪದ ಮೇಲೆ ಟಿವಿ ಪತ್ರಕರ್ತ ಸೇರಿದಂತೆ 14 ಜನರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಕಂದಾಯ ಅಧಿಕಾರಿ ಮತ್ತು ಜಮೀನನ್ನು ಗುತ್ತಿಗೆ ಪಡೆದಿರುವ ಸ್ಯಾಮ್ಯುಯೆಲ್ ಗುರುದೇವ್ ಸಿಂಗ್ ಅವರು ನೀಡಿದ ದೂರಿನ ಮೇರೆಗೆ ಪತ್ರಕರ್ತ ಅವನೀಶ್ ದೀಕ್ಷಿತ್ ಮತ್ತು ಇತರರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ದೀಕ್ಷಿತ್ ಅವರನ್ನು ಬಂಧಿಸಲಾಗಿದೆ ಮತ್ತು ಈ ಸಂಬಂಧ ಕೊತ್ವಾಲಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಹೆಚ್ಚುವರಿ ಪೊಲೀಸ್ ಆಯುಕ್ತ (ಕಾನೂನು ಮತ್ತು ಸುವ್ಯವಸ್ಥೆ) ಹರೀಶ್ ಚಂದ್ರ ಹೇಳಿದ್ದಾರೆ. ಇತರ ಆರೋಪಿಗಳ ಪತ್ತೆಗೆ ಪ್ರಯತ್ನ ನಡೆಸಲಾಗುತ್ತಿದೆ.

ಎಫ್‌ಐಆರ್‌ಗಳನ್ನು ಸೆಕ್ಷನ್‌ಗಳು 61(2) (ಅಪರಾಧದ ಪಿತೂರಿ), 74 (ಯಾವುದೇ ಮಹಿಳೆಗೆ ನಮ್ರತೆಯನ್ನು ಅತಿರೇಕಗೊಳಿಸುವ ಉದ್ದೇಶದಿಂದ ಕ್ರಿಮಿನಲ್ ಫೋರ್ಸ್), 127(2) (ತಪ್ಪಾದ ಬಂಧನ), 191(2) (ಗಲಭೆ), 308(5) ಅಡಿಯಲ್ಲಿ ದಾಖಲಿಸಲಾಗಿದೆ. (ಸುಲಿಗೆ), 310(2) (ದರೋಡೆ), 324 (4) (ಕಿಡಿಗೇಡಿತನವು ನಷ್ಟಕ್ಕೆ ಕಾರಣವಾಗುತ್ತದೆ), 329 (4) (ಮನೆ ಅತಿಕ್ರಮಣ), 351 (2) (ಅಪರಾಧ ಬೆದರಿಕೆ), 352 (ಉದ್ದೇಶಪೂರ್ವಕ ಅವಮಾನ) ಭಾರತೀಯ ನ್ಯಾಯ ಸಂಹಿತೆಯ ಮತ್ತು ಸಾರ್ವಜನಿಕ ಆಸ್ತಿ ಹಾನಿ ತಡೆ ಕಾಯಿದೆ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ದೀಕ್ಷಿತ್ ಅವರನ್ನು ಹಗಲಿನಲ್ಲಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ. ದೂರವಾಣಿ ಮೂಲಕ ಪಿಟಿಐ ಜೊತೆ ಮಾತನಾಡಿದ ಜಿಲ್ಲಾ ಮ್ಯಾಜಿಸ್ಟ್ರೇಟ್ (ಡಿಎಂ) ರಾಕೇಶ್ ಕುಮಾರ್ ಸಿಂಗ್, ದೀಕ್ಷಿತ್ ಇತರ ಮೂರು ಡಜನ್‌ಗಳೊಂದಿಗೆ ಮಾರುಕಟ್ಟೆ ಹೊಂದಿರುವ ಐಷಾರಾಮಿ ಸಿವಿಲ್ ಲೈನ್ಸ್ ಪಾಕೆಟ್‌ನಲ್ಲಿರುವ ಸುಮಾರು 7,500 ಚದರ ಮೀಟರ್ ಸರ್ಕಾರಿ ಭೂಮಿಯನ್ನು ಅತಿಕ್ರಮಿಸಿದ್ದಾರೆ ಎಂಬ ಮಾಹಿತಿ ಬಂದ ನಂತರ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು. ದೀಕ್ಷಿತ್ ಮತ್ತು ಅವರ ಜನರು ಬೀಗಗಳನ್ನು ಮುರಿದು ತಮ ಸ್ವಂತ ಕೊಠಡಿಗಳನ್ನು ಹಾಕಿದರು ಎಂದು ಸಿಂಗ್ ಹೇಳಿದರು. ಹೆಚ್ಚುವರಿ ಡಿಎಂ ನೇತೃತ್ವದ ಕಂದಾಯ ತಂಡವು ಜಮೀನು ಸರ್ಕಾರಿ ಭೂಮಿ (ನಾಜುಲ್) ಮತ್ತು ಗುತ್ತಿಗೆ ಅವಧಿ ಈಗಾಗಲೇ ಮುಗಿದಿದೆ ಎಂದು ಕಂಡುಹಿಡಿದಿದೆ ಎಂದರು.

## ಇಸ್ರೇಲ್ ಸ್ಪರ್ಧಿಗಳಿಗೆ ಬೆದರಿಕೆ: ತನಿಖೆ ಆರಂಭಿಸಿದ ಫ್ರಾನ್ಸ್

**ಪ್ಯಾರಿಸ್:** ಒಲಿಂಪಿಕ್ ಕ್ರೀಡಾಕೂಟದಲ್ಲಿ ಪಾಲ್ಗೊಂಡಿರುವ ಇಸ್ರೇಲ್‌ನ ಮೂವರು ಅಥ್ಲೀಟ್‌ಗಳಿಗೆ ಬೆದರಿಕೆ ಎದುರಾಗಿರುವುದಕ್ಕೆ ಸಂಬಂಧಿಸಿದಂತೆ ಪೊಲೀಸರು ತನಿಖೆ ಆರಂಭಿಸಿದ್ದಾರೆ ಎಂದು ಪ್ಯಾರಿಸ್ ಪ್ರಾಸಿಕ್ಯೂಟರ್ ಕಚೇರಿ ತಿಳಿಸಿದೆ. ಅಥ್ಲೀಟ್‌ಗಳ ವೈಯಕ್ತಿಕ ಮಾಹಿತಿಯನ್ನು ಸಾಮಾಜಿಕ ಜಾಲತಾಣಗಳಲ್ಲಿ ಶುಕ್ರವಾರ ಬಿಡುಗಡೆ ಮಾಡಿರುವುದರ ಬಗ್ಗೆ ಸೈಬರ್ ಅಪರಾಧ ತಡೆ ಅಧಿಕಾರಿಗಳೂ ತನಿಖೆ ನಡೆಸುತ್ತಿದ್ದಾರೆ. ಮಾಹಿತಿಯನ್ನು ಡಿಲೀಟ್ ಮಾಡಲು ಪ್ರಯತ್ನಿಸಲಾಗುತ್ತಿದೆ ಎಂದೂ ಕಚೇರಿ ಹೇಳಿಕೆ ಬಿಡುಗಡೆ ಮಾಡಿದೆ.

ಇರಾನ್ ಮೂಲದ ಹ್ಯಾಕರ್‌ಗಳು ಇಸ್ರೇಲ್ ಸದಸ್ಯರ ಮಾಹಿತಿಗಳನ್ನು ಬಿಡುಗಡೆ ಮಾಡಲು ಹಾಗೂ ಬೆದರಿಕೆ ಒಡ್ಡಲು ಸಾಮಾಜಿಕ ಮಾಧ್ಯಮಗಳಲ್ಲಿ ಚಾನೆಲ್‌ಗಳನ್ನು ರಚಿಸಿದ್ದಾರೆ ಎಂಬುದು ತನಿಖೆಯಿಂದ ತಿಳಿದುಬಂದಿದೆ ಎಂದು ಇಸ್ರೇಲ್‌ನ ರಾಷ್ಟ್ರೀಯ ಸೈಬರ್ ನಿರ್ದೇಶನಾಲಯ ಗುರುವಾರ ಹೇಳಿಕೆ ಬಿಡುಗಡೆ ಮಾಡಿತ್ತು. ಒಲಿಂಪಿಕ್ ಕ್ರೀಡಾಕೂಟದ ವೇಳೆ ತಮ್ಮ ದೇಶದ ಅಥ್ಲೀಟ್‌ಗಳು, ಪ್ರವಾಸಿಗರನ್ನು ಗುರಿಯಾಗಿಸಿ ಇರಾನ್ ಬೆಂಬಲಿತ ಸಂಚು ನಡೆಯುವ ಸಾಧ್ಯತೆ ಇದೆ ಎಂದು ಇಸ್ರೇಲ್ ವಿದೇಶಾಂಗ ಸಚಿವರು ಅದೇ ದಿನ ಫ್ರಾನ್ಸ್‌ಗೆ ಎಚ್ಚರಿಕೆ ನೀಡಿದ್ದರು.

ಒಲಿಂಪಿಕ್‌ನಲ್ಲಿ ಪಾಲ್ಗೊಂಡಿರುವ ಇಸ್ರೇಲ್ ಅಥ್ಲೀಟ್‌ಗಳ ಭದ್ರತೆಯನ್ನು ಹೆಚ್ಚಿಸಲಾಗಿದೆ. ಕ್ರೀಡಾಕೂಟದುದ್ದಕ್ಕೂ 24 ಗಂಟೆ ರಕ್ಷಣೆ ನೀಡಲಾಗುವುದು ಎಂದು ಪ್ಯಾರಿಸ್ ಅಧಿಕಾರಿಗಳು ತಿಳಿಸಿದ್ದಾರೆ. ಇಸ್ರೇಲ್ ಆಂತರಿಕ ಭದ್ರತಾ ಏಜೆನ್ಸಿ 'ಶಿನ್ ಬೆಟ್' ಕೂಡ ನೆರವಾಗುತ್ತಿದೆ. 'ಫ್ರೆಂಚ್ ಆಡಳಿತ ಎಲ್ಲ ರೀತಿಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದೆ. ಆ ಮೂಲಕ, ಅಥ್ಲೀಟ್‌ಗಳನ್ನು ಬೆದರಿಸುವ ಯತ್ನ ಮಾಡುತ್ತಿರುವ ವ್ಯಕ್ತಿಗಳಿಗೆ ಮತ್ತು ಸಂಘಟನೆಗಳಿಗೆ ಸ್ಪಷ್ಟ ಸಂದೇಶ ರವಾನಿಸಿದೆ' ಎಂದು ಇಸ್ರೇಲ್ ರಾಜತಾಂತ್ರಿಕ ಮೂಲಗಳು ಹೇಳಿವೆ.

# ಅಧ್ಯಕ್ಷೀಯ ಚುನಾವಣೆಯಲ್ಲಿ ನಿಕೋಲಸ್ ಮಡುರೊ ಜಯ

**ಕ್ಯಾರಕಾಸ್:** ವೆನೆಜುವೆಲಾದ ಅಧ್ಯಕ್ಷೀಯ ಚುನಾವಣೆಯಲ್ಲಿ ನಿಕೋಲಸ್ ಮಡುರೊ ಅವರು ಜಯಗಳಿಸಿದ್ದಾರೆ ಎಂದು ರಾಷ್ಟ್ರೀಯ ಚುನಾವಣಾ ಮಂಡಳಿ ಘೋಷಿಸಿದೆ. ನಿನ್ನೆ ನಡೆದಿದ್ದ ಚುನಾವಣೆ ಮತ ಎಣಿಕೆ ರಾತ್ರಿಯೇ ಶುರುವಾಗಿ ಶೇಕಡಾ 51 ರಷ್ಟು ಮತಗಳನ್ನು ಪಡೆದು ನಿಕೋಲಸ್ ಮಡುರೊ ವಿಜಯ ಸಾಧಿಸಿದ್ದಾರೆ ಎಂದು ಮಂಡಳಿಯ ಮುಖ್ಯಸ್ಥ ಎಲ್ವಿಸ್ ಅಮೊರೊಸೊ ತಿಳಿಸಿದ್ದಾರೆ.

ಪ್ರತಿಸ್ಪರ್ಧಿ ಅಭ್ಯರ್ಥಿ ಎಡಂಡೊ ಗೊನ್ಸಾಲೆಜ್ ಅವರು ಶೇಕಡಾ 44 ರಷ್ಟು ಗಳಿಸಿ ಪರಾಭವಗೊಂಡಿದ್ದಾರೆ. ದಕ್ಷಿಣ ಅಮೆರಿಕಾದ ರಾಷ್ಟ್ರ ವೆನೆಜುವೆಲಾ ಕಂಡರಿಯದ ಆರ್ಥಿಕತೆ ಅತಪತನಗೊಂಡು ಸದ್ಯ ಚೇತರಿಕೆ ಕಂಡಿದೆ. ಫಲಿತಾಂಶಗಳು ಶೇಕಡಾ 80 ರಷ್ಟು ಮತದಾನ ಕೇಂದ್ರಗಳನ್ನು ಆಧರಿಸಿವೆ ಎಂದು ಎಲ್ವಿಸ್ ಅಮೊರೊಸೊ ಅವರು ಹೇಳಿದ್ದು ಇನ್ನು 30,000 ಮತಗಟ್ಟೆ ಕೇಂದ್ರಗಳಿಂದ ಅಧಿಕೃತ ಮತದಾನದ ಲೆಕ್ಕಾಚಾರಗಳನ್ನು ಇನ್ನೂ ಬಿಡುಗಡೆ ಮಾಡಿಲ್ಲ ಎಂದು ಎಡಂಡೊ ಗೊನ್ಸಾಲೆಜ್ ಬೆಂಬಲಿಗರು ಹೇಳುತ್ತಿದ್ದಾರೆ.



ವೆನೆಜುವೆಲಾದವರು ಅಧ್ಯಕ್ಷೀಯ ಚುನಾವಣೆಯ ಫಲಿತಾಂಶಗಳಿಗಾಗಿ ಕಾತರದಿಂದ ಕಾಯುತ್ತಿದ್ದರು, ಇದು 25 ವರ್ಷಗಳ ಏಕಪಕ್ಷೀಯ ಆಡಳಿತವನ್ನು ಕೊನೆಗೊಳಿಸಲು ದಾರಿ ಮಾಡಿಕೊಡುತ್ತದೆ ಎಂದು ಕೆಲವು ಸಮೀಕ್ಷೆಗಳು ಹೇಳಿದ್ದವು ಹಾಲಿ ಅಧ್ಯಕ್ಷ ನಿಕೋಲಸ್ ಮಡುರೊ, ಮೂರನೇ ಅವಧಿ ಅಧಿಕಾರಕ್ಕೆ ಪ್ರಯತ್ನಿಸುತ್ತಿರುವಾಗ ಕಠಿಣ ಸವಾಲನ್ನು ಎದುರಿಸಿದರು. ನಿವೃತ್ತ ರಾಜತಾಂತ್ರಿಕರಾಗಿದ್ದ ಎಡಂಡೊ ಗೊನ್ಸಾಲೆಜ್ ಕಳೆದ ಏಪ್ರಿಲ್‌ನಲ್ಲಿ ಕೊನೆಯ ವಿರೋಧ ಪಕ್ಷದಲ್ಲಿ ನಾಯಕರಾಗಿ ಗುರುತಿಸಿಕೊಂಡಿದ್ದರು. ಈಗಾಗಲೇ ಆನ್‌ಲೈನ್ ಮತ್ತು ಕೆಲವು ಮತದಾನ ಕೇಂದ್ರಗಳ ಹೊರಗೆ ಸಂಭ್ರ ಕಾಣುತ್ತಿದೆ ಇದು ನಾನು ತುಂಬಾ ಸಂತೋಷವಾಗಿದ್ದೇನೆ ಎಂದು 31 ವರ್ಷದ ಬ್ಯಾಂಕ್ ಉದ್ಯೋಗಿ ಮೆರ್ಲಿಂಗ್ ಫರ್ನಾಂಡಿಸ್ ಹೇಳಿದ್ದಾರೆ.

**ಇದಕ್ಕೂ ಮುನ್ನ ಅಮೆರಿಕದ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಬೆಂಬಲ ಸೂಚಿಸಿದ್ದರು. ಇಂದಿನ ಐತಿಹಾಸಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ತಮ ಧ್ವನಿಯನ್ನು ವ್ಯಕ್ತಪಡಿಸಿದ ವೆನೆಜುವೆಲಾದ ಜನರೊಂದಿಗೆ ಯುನೈಟೆಡ್ ಸ್ಟೇಟ್ಸ್ ನಿಂತಿದೆ ಎಂದು ಹ್ಯಾರಿಸ್ ಎಕ್ಸ್ ನಲ್ಲಿ ಬರೆದಿದ್ದಾರೆ. ವೆನೆಜುವೆಲಾದ ಜನರ ಇಚ್ಛೆಯನ್ನು ಗೌರವಿಸಬೇಕು**

**–ಮೆರ್ಲಿಂಗ್ ಫರ್ನಾಂಡಿಸ್**

# ಭಾರತಕ್ಕೆ ಕೃತಜ್ಞತೆ ತಿಳಿಸಿ ಬಾಂಧವ್ಯ ವೃದ್ಧಿಗೆ ಮುಂದಾದ ಮಾಲ್ಡೀವ್ಸ್



**ಮಾಲೆ:** ಮಾಲ್ಡೀವ್ಸ್ ಅಧ್ಯಕ್ಷ ಮೊಹಮದ್ ಮುಯಿಝು, ತನ್ನ ಸಾಲ ಮರುಪಾವತಿಯನ್ನು ಸರಾಗಗೊಳಿಸುವಲ್ಲಿ ದ್ವೀಪ ರಾಷ್ಟ್ರದ ಬೆಂಬಲಕ್ಕಾಗಿ ಭಾರತಕ್ಕೆ ಧನ್ಯವಾದ ಅರ್ಪಿಸಿದರು ಮತ್ತು ನವದೆಹಲಿ ಮತ್ತು ಮಾಲೆ ಬಲವಾದ ಬಾಂಧವ್ಯವನ್ನು ರೂಪಿಸುತ್ತವೆ ಮತ್ತು ಮುಕ್ತ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕುತ್ತವೆ ಎಂಬ ಭರವಸೆಯನ್ನು ವ್ಯಕ್ತಪಡಿಸಿದ್ದಾರೆ. ಮುಯಿಝು ಮಾಲ್ಡೀವ್ಸ್‌ನಲ್ಲಿ ಅಧಿಕತ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡುತ್ತಿದ್ದರು. ಅವರ ಭಾಷಣದ ಸಮಯದಲ್ಲಿ, ಅವರು ಭಾರತ ಆಡಳಿತದ ವಿದೇಶಾಂಗ ನೀತಿಯನ್ನು ಶ್ಲಾಘಿಸಿದರು.

ಅಧ್ಯಕ್ಷ ಮುಯಿಝು ಅವರು ಮಾಲ್ಡೀವ್ಸ್‌ನ ಸಾಲ ಮರುಪಾವತಿಯನ್ನು ಸರಾಗ ಗೊಳಿಸುವಲ್ಲಿ ಭಾರತ, ಚೀನಾ ನೀಡಿದ ಬೆಂಬಲಕ್ಕಾಗಿ ಕತಜ್ಞತೆಯನ್ನು ವ್ಯಕ್ತಪಡಿಸಿದರು, ಆ ಮೂಲಕ ದೇಶವು ಆರ್ಥಿಕ ಸಾರ್ವಭೌಮತ್ವವನ್ನು ಖಚಿತಪಡಿಸಿಕೊಳ್ಳಲು ಅನುವು ಮಾಡಿಕೊಡುತ್ತದೆ ಎಂದಿದ್ದಾರೆ.

ಯುಎಸ್ ಡಾಲರ್‌ಗಳ ಸ್ಥಳೀಯ ಕೊರತೆಯನ್ನು ನಿವಾರಿಸುವ ಅಗತ್ಯವನ್ನು ಒತ್ತಿ ಹೇಳಿದ ಅವರು, ಮಾಲ್ಡೀವ್ಸ್ ಸರ್ಕಾರವು ನವದೆಹಲಿ ಮತ್ತು ಬೀಜಿಂಗ್ ಎರಡರೊಂದಿಗೂ ಕರೆನ್ಸಿ ವಿನಿಮಯ ಒಪ್ಪಂದಗಳನ್ನು ಮಾತುಕತೆ ನಡೆಸುತ್ತಿದೆ ಎಂದು ಹೇಳಿದರು.

ಮಾಲ್ಡೀವ್ಸ್ ಅಧ್ಯಕ್ಷರು ತಮ ಆಡಳಿತವು ಯುನೈಟೆಡ್ ಕಿಂಗ್‌ಡಮ್‌ನೊಂದಿಗೆ ಮುಕ್ತ ವ್ಯಾಪಾರ ಒಪ್ಪಂದವನ್ನು (ಎಫ್‌ಟಿಎ) ಮಾತುಕತೆ ನಡೆಸುತ್ತಿದೆ ಎಂದು ಘೋಷಿಸಿದರು ಮತ್ತು ಭಾರತದೊಂದಿಗೆ ಇದೇ ರೀತಿಯ ಒಪ್ಪಂದವನ್ನು ತಲುಪುವ ಭರವಸೆಯನ್ನು ವ್ಯಕ್ತಪಡಿಸಿದರು.

ಗಮನಾರ್ಹವಾಗಿ, ಮಾಲ್ಡೀವ್ಸ್ ನಲ್ಲಿನ ಮೊಹಮದ್ ಮುಯಿಝು ಸರ್ಕಾರವು ಎರಡು ರಾಷ್ಟ್ರಗಳ ನಡುವಿನ ಸಂಬಂಧಗಳು ಹದಗೆಟ್ಟ ನಂತರ ರಾಜತಾಂತ್ರಿಕ ಗದ್ದಲಕ್ಕೆ ಕಾರಣವಾದ ನಂತರ ಸಾಮರಸ್ಯದ ಧ್ವನಿಯನ್ನು ತೆಗೆದುಕೊಂಡಿತು.

ಕಳೆದ ತಿಂಗಳು, ಪ್ರಧಾನಿ ನರೇಂದ್ರ ಮೋದಿ ಅವರು ಸತತ ಮೂರನೇ ಅವಧಿಗೆ ಅಧಿಕಾರ ವಹಿಸಿಕೊಂಡ ನಂತರ ಅಧ್ಯಕ್ಷ ಮುಯಿಝು ಅವರ ಪ್ರಮಾಣವಚನ ಸಮಾರಂಭದಲ್ಲಿ ಭಾಗವಹಿಸಿದ್ದರು.

**ಈ ವರ್ಷದ ಆರಂಭದಲ್ಲಿ, ಸತತ ಸರ್ಕಾರಗಳ ಮೇಲೆ ದೇಶದಿಂದ ಪಡೆದ ಭಾರಿ ಸಾಲಗಳ ಮರುಪಾವತಿಯಲ್ಲಿ ಸಾಲ ಪರಿಹಾರ ಕ್ರಮಗಳನ್ನು ಕೋರಿದರು, ಭಾರತವು ಮಾಲ್ಡೀವ್ಸ್‌ನ ಹತ್ತಿರದ ಮಿತ್ರವಾಗಿ ಮುಂದುವರಿಯುತ್ತದೆ ಎಂದು ಅವರು ಹೇಳಿದರು ಮತ್ತು ಅದರ ಬಗ್ಗೆ ಯಾವುದೇ ಪ್ರಶ್ನೆಯಿಲ್ಲ**

**– ಮೊಹಮದ್ ಮುಯಿಝು**

# 13 ಐಎಎಸ್ ಕೋಚಿಂಗ್ ಸೆಂಟರ್‌ಗಳಿಗೆ ಬೀಗ


**ನವದೆಹಲಿ:** ಕೋಚಿಂಗ್ ಇನ್‌ಸ್ಟಿಟ್ಯೂಟ್‌ನ ನೆಲಮಾಳಿಗೆಯ ಪ್ರವಾಹದಲ್ಲಿ ಮೂವರು ನಾಗರಿಕ ಸೇವಾ ಆಕಾಂಕ್ಷಿಗಳು ಸಾವನ್ನಪ್ಪಿದ ನಂತರ ದೆಹಲಿಯ ಹಳೆಯ ರಾಜಿಂದರ್ ನಗರದಲ್ಲಿನ ಕನಿಷ್ಠ 13 ಅಕ್ರಮ ಕೋಚಿಂಗ್ ಸೆಂಟರ್‌ಗಳನ್ನು ದೆಹಲಿ ಮುನ್ಸಿಪಲ್ ಕಾರ್ಪೊರೇಶನ್ (ಎಂಸಿಡಿ) ಸೀಲ್ ಮಾಡಿದೆ. ಶನಿವಾರ ಸಂಜೆ ರಾವ್ಸ್ ಅವರ ಐಎಎಸ್ ಸ್ಟಡಿ ಸರ್ಕಲ್‌ನ ನೆಲಮಾಳಿಗೆಯಲ್ಲಿ ಇದ್ದಕ್ಕಿದ್ದಂತೆ ನೀರು ನುಗ್ಗಿ ಮೂವರು ವಿದ್ಯಾರ್ಥಿಗಳಾದ ತಾನಿಯಾ ಸೋನಿ, ಶ್ರೇಯಾ ಯಾದವ್ ಮತ್ತು ನವೀನ್ ಡೆಲ್ವಿನ್ ಸಾವನ್ನಪ್ಪಿದ ನಂತರ ನಾಗರಿಕ ಮಂಡಳಿಯ ಕ್ರಮವು ತಡರಾತ್ರಿಯವರೆಗೆ ಮುಂದುವರೆಯಿತು.

ಸೀಲ್ ಮಾಡಲಾದ ಕೋಚಿಂಗ್ ಸೆಂಟರ್‌ಗಳಲ್ಲಿ ಐಎಎಸ್ ಗುರುಕುಲ, ಚಾಹಲ್ ಅಕಾಡೆಮಿ, ಪ್ಲುಟಸ್ ಅಕಾಡೆಮಿ, ಸಾಯಿ ಟ್ರೇಡಿಂಗ್, ಐಎಎಸ್ ಸೇತು, ಟಾಪರ್ಸ್ ಅಕಾಡೆಮಿ, ದೈನಿಕ್ ಸಂವಾದ್, ಸಿವಿಲ್ಸ್ ಡೈಲಿ ಐಎಎಸ್, ಕೆರಿಯರ್ ಪರ್ವ, 99 ಟಿಪ್ಪಣಿಗಳು, ವಿದ್ಯಾ ಗುರು, ಗೈಡೆನ್?ಸ ಐಎಎಸ್ ಕೇಂದ್ರಗಳಿಗೆ ಬೀಗ ಜಡಿಯಲಾಗಿದೆ. ಈ ಕೋಚಿಂಗ್ ಸೆಂಟರ್‌ಗಳು ನಿಯಮಗಳನ್ನು ಉಲ್ಲಂಘಿಸಿ ನೆಲಮಾಳಿಗೆಯಲ್ಲಿ ಕಾರ್ಯನಿರ್ವಹಿಸುತ್ತಿರುವುದು ಕಂಡುಬಂದಿದೆ ಮತ್ತು ಅವುಗಳನ್ನು ಸ್ಥಳದಲ್ಲೇ ಸೀಲ್ ಮಾಡಲಾಗಿದೆ ಮತ್ತು ನೋಟಿಸ್‌ಗಳನ್ನು ಅಂಟಿಸಲಾಗಿದೆ ಎಂದು ಎಂಸಿಡಿ ಮೇಯರ್ ಶೈಲಿ ಒಬೆರಾಯ್ ಆದೇಶದಲ್ಲಿ ತಿಳಿಸಿದ್ದಾರೆ.

ರಾವ್ ಅವರ ಐಎಎಸ್ ಸ್ಟಡಿ ಸರ್ಕಲ್ ಅನ್ನು ಈಗಾಗಲೇ ಪೊಲೀಸರು ಸೀಲ್ ಮಾಡಿದ್ದಾರೆ ಮತ್ತು ಅದರ ಮಾಲೀಕರು ಮತ್ತು ಸಂಯೋಜಕರನ್ನು ಬಂಧಿಸಿ ಅಪರಾಧಿ ನರಹತ್ಯೆಯ ಆರೋಪ ಹೊರಿಸಲಾಗಿದೆ. ಇನ್ನೂ ಹಲವಾರು ವಿದ್ಯಾರ್ಥಿಗಳು ಜಲಾವತಗೊಂಡ ನೆಲಮಾಳಿಗೆಯಲ್ಲಿ ಸಿಲುಕಿಕೊಂಡಿದ್ದರು ಮತ್ತು ಏಳು ಗಂಟೆಗಳ ಕಾರ್ಯಾಚರಣೆಯ ನಂತರ ಅವರನ್ನು ರಕ್ಷಿಸಲಾಯಿತು. ತೆಲಂಗಾಣದಿಂದ ಬಂದಿರುವ ತಾನ್ಯಾ ಅವರು ಬಿಹಾರದ ಔರಂಗಾಬಾದ್‌ನವರು ಮತ್ತು ದೆಹಲಿ ವಿಶ್ವವಿದ್ಯಾಲಯದ ವಿದ್ಯಾರ್ಥಿನಿ ಎಂದು ವರದಿಗಳು ತಿಳಿಸಿವೆ.

# ಫ್ರಾನ್ಸ್‌ನಲ್ಲಿ ರೈಲ್ವೆ ಬಳಿಕ ಮೊಬೈಲ್ ನೆಟ್‌ವರ್ಕ್ ಮೇಲೆ ದಾಳಿ

## ಫ್ರಾನ್ಸ್ ದೇಶಾದ್ಯಂತ ಹಲವು ನಗರಗಳಲ್ಲಿ ಮೊಬೈಲ್ ನೆಟ್‌ವರ್ಕ್ ಕಡಿತ, ಹೈಸ್ಪೀಡ್ ಇಂಟರ್‌ನೆಟ್ ಸೇವೆ ಕೂಡಾ ಹಲವೆಡೆ ಸ್ಥಗಿತ



ಪ್ಯಾರಿಸ್ ಒಲಿಂಪಿಕ್ಸ್‌ಗೆ ಹೊಸ ಸಂಕಷ್ಟ

**ಪ್ಯಾರಿಸ್:** ಪ್ಯಾರಿಸ್ ಒಲಿಂಪಿಕ್ಸ್‌ಗೆ ಮತ್ತೊಂದು ವಿಘ್ನ ಎದುರಾಗಿದೆ. ಪ್ಯಾರಿಸ್ ಒಲಿಂಪಿಕ್ಸ್ ಉದ್ಘಾಟನಾ ಕಾರ್ಯಕ್ರಮಕ್ಕೆ ಗಂಟೆಗಳ ಮುನ್ನ ಇಡೀ ದೇಶದ ಹೈ ಸ್ಪೀಡ್ ರೈಲು ಸಂಪರ್ಕ ಜಾಲವನ್ನೇ ಹಾಳುಗೆಡವಿದ್ದ ದುಷ್ಕರ್ಮಿಗಳ ಕಣ್ಣು ಇದೀಗ ಫ್ರಾನ್ಸ್ ದೇಶದ ಮೊಬೈಲ್ ನೆಟ್‌ವರ್ಕ್ ಮೇಲೆ ಬಿದ್ದಿದೆ ದೇಶಾದ್ಯಂತ ಹಲವೆಡೆ ಮೊಬೈಲ್ ಸಂಪರ್ಕ ಜಾಲ, ಫೈಬರ್ ಕೇಬಲ್‌ಗಳನ್ನ ದುಷ್ಕರ್ಮಿಗಳು ಕಡಿತಗೊಳಿಸಿದ್ದಾರೆ.

ಫ್ರಾನ್ಸ್ ದೇಶಾದ್ಯಂತ ಹಲವು ನಗರಗಳಲ್ಲಿ ಮೊಬೈಲ್ ನೆಟ್‌ವರ್ಕ್ ಕಡಿತಗೊಂಡಿದೆ ಹಾಗೂ ಹೈಸ್ಪೀಡ್ ಇಂಟರ್‌ನೆಟ್ ಸೇವೆ ಸ್ಥಗಿತವಾಗಿದೆ. ದುಷ್ಕರ್ಮಿಗಳು ಹೈಸ್ಪೀಡ್ ರೈಲು ಸಂಪರ್ಕ ಜಾಲದ ಮೇಲೆ ದಾಳಿ ಮಾಡಿ ಬೆಂಕಿ ಇಟ್ಟ ರೀತಿಯಲ್ಲೇ ಮೊಬೈಲ್ ಸಂಪರ್ಕ ಜಾಲವನ್ನೂ ವ್ಯವಸ್ಥಿತವಾಗಿ ತುಂಡರಿಸಿದ್ದಾರೆ. ವಿಪರ್ಯಾಸವೆಂದರೆ, ಈ ರೀತಿಯ ಕೃತ್ಯ ಎಸಗುತ್ತಿರೋದು ಯಾರು ಎಂದು ಪತ್ತೆ ಮಾಡಲು ಈಗಲೂ ಫ್ರಾನ್ಸ್ ದೇಶದ ಪೊಲೀಸ್ ವ್ಯವಸ್ಥೆ ವಿಫಲವಾಗಿದೆ.

ಮೊಬೈಲ್ ಹಾಗೂ ಇಂಟರ್‌ನೆಟ್ ಸೇವೆ ಸ್ಥಗಿತ ಗೊಂಡಿರುವುದರ ಪರಿಣಾಮ ಪ್ಯಾರಿಸ್ ಒಲಿಂಪಿಕ್ಸ್ ಮೇಲೂ ಆಗಿದೆ. ಭಾನುವಾರ ತಡರಾತ್ರಿ ಹಾಗೂ ಸೋಮವಾರ ಬೆಳಗ್ಗೆಯ ಒಳಗೆ ದುಷ್ಕರ್ಮಿಗಳು ಅಹೋರಾತ್ರಿ ದುಷ್ಕೃತ್ಯಗಳನ್ನ ಎಸಗಿ ದ್ದಾರೆ. ರಾತ್ರೋರಾತ್ರಿ ತಮ್ಮ ಲ್ಲಾ ಸಂಪರ್ಕ ಜಾಲವನ್ನೂ ಹಾನಿ ಮಾಡಲಾಗಿದೆ ಎಂದು ಫ್ರಾನ್ಸ್ ದೇಶದ ಟೆಲಿಕಮ್ಯುನಿಕೇಷನ್ ಆಪರೇಟರ್‌ಗಳು ದೂರಿದ್ದಾರೆ. ಆದರೆ, ಇದರ ಪರಿಣಾಮ ಪ್ಯಾರಿಸ್ ಒಲಿಂಪಿಕ್ಸ್ ಮೇಲೆ ಆಗಿದೆ ಎಂದು ಒಪ್ಪಿಕೊಳ್ಳಲು ಸರ್ಕಾರ ಸಿದ್ದವಿಲ್ಲ. ಈ ಕುರಿತಾಗಿ ಅಧಿಕೃತ ಮಾಹಿತಿಯನ್ನೂ ನೀಡಿಲ್ಲ, ಘಟನೆ ಕುರಿತು ಪ್ರತಿಕ್ರಿಯೆ ನೀಡಿರುವ ಫ್ರಾನ್ಸ್ ಸರ್ಕಾರದ ಡಿಜಿಟಲ್ ವ್ಯವಹಾರಗಳ ಸಚಿವೆ ಮರೀನಾ ಫೆರಾರಿ, ಫ್ರಾನ್ಸ್ ದೇಶದ ಬಹು ತೇಕ ನಗರಗಳಲ್ಲಿ ಮೊಬೈಲ್ ಸಂಪರ್ಕ ಜಾಲ ಹಾನಿಗೀಡಾಗಿದೆ ಎಂದಿದ್ದಾರೆ. ಅವರು ಹೆಸರಿಸಿರುವ ಕೆಲವು ನಗರಗಳಲ್ಲಿ ಪ್ಯಾರಿಸ್ ಒಲಿಂಪಿಕ್ಸ್ 2024 ಪಂದ್ಯಾವಳಿಗಳು ನಡೆಯುತ್ತಿವೆ.

ಈ ಕುರಿತಾಗಿ ಫ್ರಾನ್ಸ್ ಪೊಲೀಸ್ ಇಲಾಖೆ ಅಧಿಕೃತ ಮಾಹಿತಿ ನೀಡಿದ್ದು, ದೇಶದ ಒಟ್ಟು 6 ಆಡಳಿತಾತ್ಮಕ ವಲಯಗಳು ಸಮಸ್ಯೆಗೆ ಸಿಲುಕಿವೆ ಎಂದು ಮಾಹಿತಿ ನೀಡಿದ್ದಾರೆ. ಒಲಿಂಪಿಕ್ಸ್‌ನ ಫುಟ್ಬಾಲ್ ಹಾಗೂ ಬೋಟಿಂಗ್ ಸ್ಪರ್ಧೆ ನಡೆಯುವ ಮೆಡಿಟರೇನಿಯನ್ ಭಾಗದ ಪ್ರದೇಶಗಳಲ್ಲೂ ಮೊಬೈಲ್ ಹಾಗೂ ಇಂಟರ್‌ನೆಟ್ ಸಂಪರ್ಕ ಕೈಕೊಟ್ಟಿದೆ. ಫ್ರಾನ್ಸ್ ದೇಶದ ಹಲವು ಖಾಸಗಿ ಮೊಬೈಲ್ ನೆಟ್‌ವರ್ಕ್ ಸಂಸ್ಥೆಗಳು ತಮ್ಮ ಮೊಬೈಲ್ ಹಾಗೂ ಇಂಟರ್‌ನೆಟ್ ಸೇವೆ ಸ್ಥಗಿತ ಆಗಿದೆ ಎಂದು ಮಾಧ್ಯಮಗಳಿಗೆ ಪ್ರಕಟಣೆ ನೀಡಿವೆ. ಆದಷ್ಟು ಬೇಗ ಮೊಬೈಲ್ ಸಂಪರ್ಕ ಜಾಲವನ್ನು ಪುನರ್ ಸ್ಥಾಪಿಸುವ ಭರವಸೆಯನ್ನು ನೀಡಿವೆ.

### ದಾಳಿಕೋರರು ಯಾರು? ಮುಂದಿನ ಗುರಿ ಏನು?

**ಪ್ಯಾರಿಸ್ ಒಲಿಂಪಿಕ್ಸ್ 2024 ಪಂದ್ಯಾವಳಿಗಳು ಫ್ರಾನ್ಸ್ ದೇಶದಾದ್ಯಂತ ನಡೆಯುತ್ತಿರುವ ಹೊತ್ತಲ್ಲೇ ದುಷ್ಕರ್ಮಿಗಳು ಸಂಘಟಿತವಾಗಿ ಆಯಕಟ್ಟಿನ ಸ್ಥಳಗಳ ಮೇಲೆ ದಾಳಿ ಮಾಡುತ್ತಿದ್ದಾರೆ. ಈ ರೀತಿಯ ಕೃತ್ಯ ಎಸಗುತ್ತಿರೋದು ಯಾರು ಅನ್ನೋ ಸುಳಿವೇ ಪೊಲೀಸರಿಗೆ ಸಿಗುತ್ತಿಲ್ಲ. ಫ್ರಾನ್ಸ್‌ನ ಹೈಸ್ಪೀಡ್ ರೈಲು ಸಂಪರ್ಕ ಜಾಲಕ್ಕೆ ಬೆಂಕಿ ಇಟ್ಟಿದ್ದ ದುಷ್ಕರ್ಮಿಗಳು, 8 ಲಕ್ಷ ಪ್ರಯಾಣಿಕರ ಓಡಾಟಕ್ಕೆ ಬ್ರೇಕ್ ಹಾಕಿದ್ದರು! ಇದೀಗ ಮೊಬೈಲ್ ನೆಟ್‌ವರ್ಕ್ ಹಾಗೂ ಇಂಟರ್‌ನೆಟ್ ಸೇವೆಗೆ ಅಡ್ಡಿ ಮಾಡಿದ್ದಾರೆ. ಈ ದುಷ್ಕರ್ಮಿಗಳ ಮುಂದಿನ ಗುರಿ ಏನು ಅನ್ನೋದು ಇದೀಗ ಫ್ರಾನ್ಸ್ ಸರ್ಕಾರಕ್ಕೆ ತಲೆನೋವಾಗಿದೆ.**

**ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾ ಕೂಟಗಳು ನಡೆಯುವಾಗ ಸಣ್ಣದೊಂದು ಅಹಿತಕರ ಘಟನೆ ನಡೆದರೂ ವಿಶ್ವಾದ್ಯಂತ ಸುದ್ದಿಯಾಗುತ್ತದೆ. ಹೀಗಾಗಿ, ಸರ್ಕಾರಗಳು ಭಾರೀ ಕಟ್ಟೆಚ್ಚರ ವಹಿಸುತ್ತವೆ. ಆದರೆ ಫ್ರಾನ್ಸ್‌ನಲ್ಲಿ ಪ್ಯಾರಿಸ್ ಒಲಿಂಪಿಕ್ಸ್ ಉದ್ಘಾಟನೆಗೆ ಕೆಲವೇ ಗಂಟೆ ಮುನ್ನ ರೈಲ್ವೆ ಸಂಪರ್ಕ ಜಾಲವನ್ನೇ ಹಾಳುಗೆಡವಿದ್ದ ದುಷ್ಕರ್ಮಿಗಳು, ಇದೀಗ ಮೊಬೈಲ್ ಹಾಗೂ ಇಂಟರ್‌ನೆಟ್ ಸಂಪರ್ಕ ವ್ಯವಸ್ಥೆ ಧ್ವಂಸ ಮಾಡಿದ್ದಾರೆ. ವಿಪರ್ಯಾಸವೆಂದರೆ ದುಷ್ಕೃತ್ಯ ಎಸಗುತ್ತಿರೋದು ಯಾರು ಅನ್ನೋದೇ ಗೊತ್ತಿಲ್ಲ!**

## ಮಿನಿ ನ್ಯೂಸ್

### ಬೈಡೆನ್ ವಿರುದ್ಧ ಸ್ವಪಕ್ಷದವರದ್ದೇ ಪಿತೂರಿ: ಟ್ರಂಪ್ ಆರೋಪ

**ವಾಷಿಂಗ್ಟನ್:** ಅಮೆರಿಕದ ಹಾಲಿ ಅಧ್ಯಕ್ಷ ಬೈಡೆನ್ ಅವರನ್ನು ಬಲವಂತವಾಗಿ ಅಧ್ಯಕ್ಷೀಯ ಸ್ಪರ್ಧೆಯಿಂದ ಹೊರಗಿರಿಸಲಾಗಿದೆ. ಇದು ಡೆಮಾಕ್ರಟಿಕ್ ಪಾರ್ಟಿಯ ಪಿತೂರಿಯಾಗಿದೆ ಎಂದು ರಿಪಬ್ಲಿಕನ್ ಅಧ್ಯಕ್ಷೀಯ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಪ್ರತಿಪಾದಿಸಿದ್ದಾರೆ. ಮಿನ್ನೆಸೋಟಾದಲ್ಲಿನ ಚುನಾವಣಾ ರ್‍ಯಾಲಿಯೊಂದರಲ್ಲಿ ಟ್ರಂಪ್ ಈ ಹೇಳಿಕೆ ನೀಡಿದ್ದಾರೆ.ಇದು ನಿಜವಾಗಿಯೂ ಡೆಮಾಕ್ರಟಿಕ್ ಪಕ್ಷದ ಒಂದು ಒಳಸಂಚಾಗಿದೆ. 14 ದಶಲಕ್ಷ ಮತಗಳನ್ನು ಹೊಂದಿರುವ ಅಧ್ಯಕ್ಷರ ವಿರುದ್ಧದ ಪಿತೂರಿಯಾಗಿದೆ.

ಬೈಡೆನ್ ಮುಂದುವರಿಯಲು ಇಚ್ಛಿಸಿದ್ದರು. ಆದರೆ ಅವರ ಪಕ್ಷ ಅದಕ್ಕೆ ಅವಕಾಶ ನೀಡಲಿಲ್ಲ. ಪಕ್ಷವು ಅವರನ್ನು ಭಯಾನಕವಾಗಿ ನಡೆಸಿಕೊಂಡಿದೆ ಎಂದು ಟ್ರಂಪ್ ನುಡಿದಿದ್ದಾರೆ. ನೀವು ನಿರ್ಗಮಿಸದಿದ್ದರೆ 25ನೇ ತಿದ್ದುಪಡಿ ಬಳಸಬೇಕಾಗುತ್ತದೆ ಎಂದು ಅವರಿಗೆ ಬೆದರಿಕೆಯೊಡ್ಡಲಾಗಿದೆ ಎಂದು 78 ವರ್ಷ ವಯಸ್ಸಿನ ಟ್ರಂಪ್ ಆರೋಪಿಸಿದ್ದಾರೆ.ಅಮೆರಿಕ ಸಂವಿಧಾನದ 25ನೇ ತಿದ್ದುಪಡಿಗೆ ಕಾಂಗ್ರೆಸ್ ಅನುಮೋದನೆ ನೀಡಿದ್ದು ಇದು ಮಾಜಿ ಅಧ್ಯಕ್ಷ ಜಾನ್ ಎಫ್ ಕೆನಡಿ ಅವರ ಹತ್ಯೆ ಬಳಿಕ ಅಧ್ಯಕ್ಷರ ಉತ್ತರಾಧಿಕಾರ ಕುರಿತದ್ದಾಗಿದೆ. 25ನೇ ತಿದ್ದುಪಡಿಯು ಓರ್ವ ಅಧ್ಯಕ್ಷರು ದೈಹಿಕವಾಗಿ ಅಸಮರ್ಥರು ಎಂದು ತೋರಿಬಂದರೆ ಅವರನ್ನು ಪದಚ್ಯುತಗೊಳಿಸಲು ಉಪಾಧ್ಯಕ್ಷರು ಮತ್ತು ಸಚಿವ ಸಂಪುಟಕ್ಕೆ ಅಧಿಕಾರ ನೀಡುತ್ತದೆ.

### ಟೋಕಿಯೊದಲ್ಲಿ ಜೈಶಂಕರ್ ಆಂಟೋನಿ ಬ್ಲಿಂಕನ್ ಭೇಟಿ, ಮಹತ್ವದ ಚರ್ಚೆ

**ಟೋಕಿಯೊ:** ವಿದೇಶಾಂಗ ವ್ಯವಹಾರಗಳ ಸಚಿವ ಎಸ್ ಜೈಶಂಕರ್ ಅವರು ಸೋಮವಾರ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಆಂಟೋನಿ ಬ್ಲಿಂಕನ್ ಅವರನ್ನು ಭೇಟಿ ಮಾಡಿ ದ್ವಿಪಕ್ಷೀಯ ಬಾಂಧವ್ಯ ಮತ್ತು ಪ್ರಾದೇಶಿಕ, ಜಾಗತಿಕ ವಿಷಯಗಳ ಕುರಿತು ವ್ಯಾಪಕ ಚರ್ಚೆ ನಡೆಸಿದರು. ಟೋಕಿಯೊದಲ್ಲಿ ಕ್ವಾಡ್ ವಿದೇಶಾಂಗ ಸಚಿವರ ಸಭೆಯ ಹಿನ್ನೆಲೆಯಲ್ಲಿ ಉಭಯ ನಾಯಕರು ಭೇಟಿ ಮಹತ್ವ ಪಡೆದುಕೊಂಡಿದೆ. ಸೋಮವಾರ ಟೋಕಿಯೊದಲ್ಲಿ ನಿಮನ್ನು ಭೇಟಿಯಾಗಲು ಉತ್ತಮವಾಗಿದೆ. ನಮ್ಮ ದ್ವಿಪಕ್ಷೀಯ ಕಾರ್ಯಸೂಚಿಯು ಸ್ಥಿರವಾಗಿ ಪ್ರಗತಿಯಲ್ಲಿದೆ.

ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಬಗ್ಗೆ ವ್ಯಾಪಕವಾದ ಚರ್ಚೆಯನ್ನು ನಡೆಸಿದೆ. ಇಂದು ಕ್ವಾಡ್‌ಗೆ ಹಾಜರಾಗಲು ಎದುರು ಡಬಹುದು ಎಂದು ಜೈಶಂಕರ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ನವೆಂಬರ್ 2017 ರಲ್ಲಿ, ಭಾರತ, ಜಪಾನ್, ಯುಎಸ್ ಮತ್ತು ಆಸ್ಟ್ರೇಲಿಯಾಗಳು ಇಂಡೋ–ಪೆಸಿಫಿಕ್‌ನಲ್ಲಿನ ನಿರ್ಣಾಯಕ ಸಮುದ್ರ ಮಾರ್ಗಗಳನ್ನು ಯಾವುದೇ ಪ್ರಭಾವದಿಂದ ಮುಕ್ತವಾಗಿಡಲು ಹೊಸ ಕಾರ್ಯತಂತ್ರವನ್ನು ಅಭಿವೃದ್ಧಿಪಡಿಸಲು ಕ್ವಾಡ್ ಅನ್ನು ಸ್ಥಾಪಿಸುವ ದೀರ್ಘಾವಧಿಯ ಪ್ರಸ್ತಾಪಕ್ಕೆ ರೂಪು ನೀಡಿತು.

ದಕ್ಷಿಣ ಚೀನಾ ಸಮುದ್ರವು ಪೆಸಿಫಿಕ್, ಹಿಂದೂ ಮಹಾಸಾಗರಗಳ ನಡುವಿನ ಜಂಕ್ಷನ್‌ನಲ್ಲಿದೆ. ದಕ್ಷಿಣ ಚೀನಾ ಸಮುದ್ರದ ಬಹುಭಾಗವನ್ನು ಚೀನಾ ತನ್ನದೆಂದು ಹೇಳಿಕೊಂಡರೆ, ಫಿಲಿಪೈನ್ಸ್, ವಿಯೆಟ್ನಾಂ, ಮಲೇಷ್ಯಾ, ಬ್ರೂನಿ, ತೈವಾನ್ ಕಡಲ ಪ್ರದೇಶದ ಮೇಲೆ ಪ್ರತಿವಾದ ಸಾಧಿಸುತ್ತಿದ್ದು ಇದನ್ನು ನಿಯಂತ್ರಿಸಲು ಈ ಸಭೆ ಮಹತ್ವ ಪಡೆದಿದೆ.

### ಕೇಜ್ರಿವಾಲ್ ವಿರುದ್ಧ ಸಿಬಿಐ ಚಾರ್ಜ್‌ಶೀಟ್ ಸಲ್ಲಿಕೆ

**ನವದೆಹಲಿ:** ಕೇಂದ್ರೀಯ ತನಿಖಾ ದಳ (ಸಿಬಿಐ) ಸೋಮವಾರ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ವಿರುದ್ಧ 2021–22ರ ದೆಹಲಿ ಅಬಕಾರಿ ನೀತಿಯ ಭ್ರಷ್ಟಾಚಾರ ತನಿಖೆಗೆ ಸಂಬಂಧಿಸಿದಂತೆ ಚಾರ್ಜ್ ಶೀಟ್ ಸಲ್ಲಿಸಿದೆ ಹಾಗೂ ಅವರನ್ನು ಕ್ರಿಮಿನಲ್ ಪಿತೂರಿಯ ಸಂಚುಕೋರರಲ್ಲಿ ಒಬ್ಬರು ಎಂದು ಕರೆದಿದೆ. ಕೇಜ್ರಿವಾಲ್ ಅವರ ನಿಕಟ ಸಹವರ್ತಿ ವಿಜಯ್ ನಾಯರ್ ಅವರು ವಿವಿಧ ಮದ್ಯ ತಯಾರಕರು ಮತ್ತು ವ್ಯಾಪಾರಿಗಳನ್ನು ಸಂಪರ್ಕಿಸುತ್ತಿದ್ದಾರೆ ಮತ್ತು ಮುಂಬರುವ ದೆಹಲಿ ಅಬಕಾರಿಯಲ್ಲಿ ಅವರಿಗೆ ಅನುಕೂಲಕರವಾದ ನಿಬಂಧನೆಗಳನ್ನು ಸೇರಿಸಲು ಮಾರ್ಚ್ 2021 ರಿಂದ ಅನಗತ್ಯ ತಪ್ಪಿಯನ್ನು ಕೋರುತ್ತಿದ್ದಾರೆ ಎಂದು ಸಿಬಿಐ ಆರೋಪಿಸಿದೆ.

ಏಪ್ರಿಲ್ 2023 ರಲ್ಲಿ ಕೇಜ್ರಿವಾಲ್ ಅವರನ್ನು ಮೊದಲ ಬಾರಿಗೆ ಪ್ರಶ್ನಿಸಿದ ಸಿಬಿಐ, ಕೇಜ್ರಿವಾಲ್ ಅವರ ಮಾಜಿ ಡಿಸಿಎಂ ಮನೀಶ್ ಸಿಸೋಡಿಯಾ ಮತ್ತು ಭಾರತ್ ರಾಷ್ಟ್ರ ಸಮಿತಿ ನಾಯಕಿ ಕೆ ಕವಿತಾ ಸೇರಿದಂತೆ 18 ಆರೋಪಿಗಳ ವಿರುದ್ಧ ಪ್ರಕರಣದಲ್ಲಿ ಇದುವರೆಗೆ ಐದು ಚಾರ್ಜ್ ಶೀಟ್‌ಗಳನ್ನು ಸಲ್ಲಿಸಿದೆ. ಹಿಂದಿನ ಚಾರ್ಜ್ ಶೀಟ್‌ನಲ್ಲಿ, ಎಎಪಿ 100 ಕೋಟಿ ಕಿಕ್‌ಬ್ಯಾಕ್ ಆಗಿ ಸ್ವೀಕರಿಸಿದೆ ಎಂದು ಹೇಳಲಾದ 44.45 ಕೋಟಿಯನ್ನು ಚುನಾವಣಾ ಪ್ರಚಾರಕ್ಕಾಗಿ ಹವಾಲಾ ಚಾನೆಲ್‌ಗಳ ಮೂಲಕ ಜೂನ್ 2021 ರಿಂದ ಜನವರಿ 2022 ರವರೆಗೆ ಗೋವಾಕ್ಕೆ ವರ್ಗಾಯಿಸಲಾಗಿದೆ ಎಂದು ಸಿಬಿಐ ಹೇಳಿಕೊಂಡಿದೆ

### ಹಳಿತಪ್ಪಿದ ಗೂಡ್ಸ್ ರೈಲು

**ಭುವನೇಶ್ವರ:** ಒಡಿಸಾದ ಭುವನೇಶ್ವರದಲ್ಲಿ ಸೋಮವಾರ ಮುಂಜಾನೆ ಗೂಡ್ಸ್ ರೈಲು ಹಳಿತಪ್ಪಿದೆ ಎಂದು ಪೂರ್ವ ಕರಾವಳಿ ರೈಲ್ವೆ ತಿಳಿಸಿದೆ. ಮಂಚೇಶ್ವರ ನಿಲ್ದಾಣದ ರೈಲ್ವೇ ಯಾರ್ಡ್‌ನಲ್ಲಿ ಬೆಳಗಿನ ಜಾವ 1.35ಕ್ಕೆ ಈ ಘಟನೆ ನಡೆದಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.ರೈಲು ಹಳಿತಪ್ಪಿದ್ದರಿಂದ ಯಾವುದೇ ಪ್ರಾಣಹಾನಿ ಅಥವಾ ಆಸ್ತಿಪಾಸ್ತಿಗಳಿಗೆ ಹಾನಿಯಾಗಿಲ್ಲ. ಈ ಘಟನೆಯಿಂದಾಗಿ ಎರಡು ರೈಲುಗಳನ್ನು ರದ್ದುಗೊಳಿಸಲಾಗಿದೆ ಮತ್ತು ಆರು ರೈಲುಗಳ ವೇಳಾಪಟ್ಟಿಯನ್ನು ಬದಲಿಸಲಾಗಿದೆ, ಇದೇ ವೇಳೆ ಪುರಿ–ರೂರ್ಕೆಲಾ ಎಕ್ಸ್‌ಪ್ರೆಸ್ ರೈಲನ್ನು ಎರಡೂ ದಿಕ್ಕುಗಳಲ್ಲಿ ಅಲ್ಪಾವಧಿಗೆ ನಿಲ್ಲಿಸಲಾಗಿತ್ತು. ಪರಿಹಾರ ಕಾರ್ಯಾಚರಣೆ ನಡೆದು ಬೆಳಗ್ಗೆ 5.05ಕ್ಕೆ ರೈಲುಗಳ ಸಂಚಾರಕ್ಕೆ ಮಾರ್ಗವನ್ನು ಅವಕಾಶ ನೀಡಲಾಗಿದೆ ಎಂದು ತಿಳಿಸಲಾಗಿದೆ.

### 3.6 ಲಕ್ಷ ಎಕರೆ ವ್ಯಾಪಿಸಿದ ಕಾಡ್ಗಿಚ್ಚು

**ವಾಷಿಂಗ್ಟನ್:** ಉತ್ತರ ಕ್ಯಾಲಿಫೋರ್ನಿಯಾದಲ್ಲಿ ಕಾಣಿಸಿಕೊಂಡಿರುವ ಕಾಳಿಚ್ಚು ಸುಮಾರು 3.6 ಲಕ್ಷ ಎಕರೆಗೂ ಹೆಚ್ಚು ಪ್ರದೇಶಕ್ಕೆ ವ್ಯಾಪಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ರಾಜ್ಯದಲ್ಲಿ ಕಾಣಿಸಿಕೊಂಡ ಬೆಂಕಿ, ಭಾನುವಾರದ ವೇಳೆಗೆ ನಾಲ್ಕು ಕೌಂಟಿಗಳಿಗೆ ಆವರಿಸಿದೆ ಎಂದು ಕ್ಯಾಲಿಫೋರ್ನಿಯಾದ ಅರಣ್ಯ ಮತ್ತು ಅಗ್ನಿ ಶಾಮಕ ಇಲಾಖೆ ಮಾಹಿತಿ ನೀಡಿದೆ. ಅಗ್ನಿಶಾಮಕ ದಳ ಹಾಗೂ ಇತರ ಇಲಾಖೆಗಳ ಸುಮಾರು 4,000 ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದಾರೆ. ಕನಿಷ್ಠ 67 ಸಂಕೀರ್ಣಗಳಿಗೆ ಹಾನಿಯಾಗಿದೆ. ಸುಮಾರು 4,000 ಕಟ್ಟಡಗಳಿಗೆ ಹಾನಿಯಾಗುವ ಭೀತಿ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬುಟ್ಟೇ, ತೆಹಾಮಾ ಕೌಂಟಿಗಳ ಸುಮಾರು 8 ಸಾವಿರ ಜನರಿಗೆ ಸುರಕ್ಷಿತ ಪ್ರದೇಶಗಳಿಗೆ ತೆರಳುವಂತೆ ಸೂಚಿಸಲಾಗಿದೆ.

# ಶ್ರೀಲಂಕಾ ತಲುಪಿದ ಭಾರತ ಏಕದಿನ ತಂಡದ ಆಟಗಾರರು



ಭಾರತಕ್ಕೆ ಗೆಲುವಿನ ವಿಶ್ವಾಸ

ಪ್ರಸ್ತುತ ಶ್ರೀಲಂಕಾ ಪ್ರವಾಸದಲ್ಲಿರುವ ಟೀಂ ಇಂಡಿಯಾ ಮೂರು ಪಂದ್ಯಗಳ ಟಿ20 ಸರಣಿಯಲ್ಲಿ ನಿರತವಾಗಿದೆ. ಈಗಾಗಲೇ ಎರಡು ಪಂದ್ಯಗಳು ಮುಗಿದಿದ್ದು, ಎರಡಕ್ಕೆ ಎರಡೂ ಪಂದ್ಯಗಳನ್ನು ಗೆದ್ದಿರುವ ಭಾರತ ತಂಡ ಈಗಾಗಲೇ ಸರಣಿ ಕೈವಶ ಮಾಡಿಕೊಂಡಿದೆ. ಇದೀಗ ಸರಣಿಯ ಕೊನೆಯ ಪಂದ್ಯ ಜುಲೈ 30ರಂದು ನಡೆಯಲಿದೆ.

ಆ ಬಳಿಕ ಮೂರು ಪಂದ್ಯಗಳ ಏಕದಿನ ಸರಣಿ ನಡೆಯಲ್ಲಿದ್ದು, ಈ ಸರಣಿಗೂ ಭಾರತ ತಂಡವನ್ನು ಪ್ರಕಟಿಸಲಾಗಿದೆ. ಅದರಂತೆ, ಟಿ20 ಸರಣಿಗೆ ಆಯ್ಕೆಯಾಗದ 6 ಆಟಗಾರರು ಏಕದಿನ ಸರಣಿಗಾಗಿ ಶ್ರೀಲಂಕಾಗೆ ಪ್ರಯಾಣ ಬೆಳೆಸಿದ್ದು, ಪ್ರತ್ಯೇಕವಾಗಿ ಅಭ್ಯಾಸ ಶುರು ಮಾಡಲಿದ್ದಾರೆ. ಭಾರತ ಮತ್ತು ಶ್ರೀಲಂಕಾ ನಡುವಿನ 3 ಏಕದಿನ ಪಂದ್ಯಗಳ ಸರಣಿ ಆಗಸ್ಟ್ 2 ರಿಂದ ಪ್ರಾರಂಭವಾಗಲಿದ್ದು, ಇದಕ್ಕಾಗಿ ರೋಹಿತ್ ಶರ್ಮಾ, ವಿರಾಟ್ ಕೊಹ್ಲಿ ಸೇರಿದಂತೆ ಏಕದಿನ ತಂಡದ ಎಲ್ಲಾ ಸದಸ್ಯರು ಕೊಲಂಬೊ ತಲುಪಿದ್ದಾರೆ. ಸಿಕ್ಕಿರುವ ಮಾಹಿತಿ ಪ್ರಕಾರ ಪಲ್ಲೆಕೆಲೆಯಿಂದ 152 ಕಿಲೋಮೀಟರ್ ದೂರದಲ್ಲಿರುವ ಕೊಲಂಬೊದಲ್ಲಿ ಈ ಏಕದಿನ ತಂಡದ ಆಟಗಾರರ ಅಭ್ಯಾಸ ಆರಂಭವಾಗಿದೆ.

ಏಕದಿನ ಸರಣಿಗಾಗಿ ಆಯ್ಕೆಯಾಗಿರುವ ಈ 6 ಆಟಗಾರರ ಪೈಕಿ ರೋಹಿತ್, ವಿರಾಟ್ ಹೊರತುಪಡಿಸಿ ಶ್ರೇಯಸ್ ಅಯ್ಯರ್, ಕುಲ್ದೀಪ್ ಯಾದವ್, ಹರ್ಷಿತ್ ರಾಣಾ ಮತ್ತು ಕೆಎಲ್ ರಾಹುಲ್ ಸೇರಿದ್ದಾರೆ. ಈ ಎಲ್ಲಾ ಆಟಗಾರರು ಹೊಸ ಮುಖ್ಯ ಕೋಚ್ ಗೌತಮ್ ಗಂಭೀರ್ ನೇತೃತ್ವದಲ್ಲಿ ಮೊದಲ ಬಾರಿಗೆ ಪಂದ್ಯವನ್ನಾಡಲಿದ್ದಾರೆ. ಇವರಲ್ಲಿ ಶ್ರೇಯಸ್ ಅಯ್ಯರ್ ಮತ್ತು ಹರ್ಷಿತ್ ರಾಣಾ ಐಪಿಎಲ್‌ನಲ್ಲಿ ಗಂಭೀರ್ ನಾಯಕತ್ವದಲ್ಲಿ ಕೆಕೆಆರ್ ಜೊತೆ ಆಡಿದ ಅನುಭವ ಹೊಂದಿದ್ದಾರೆ. ಈ ಆರು ಆಟಗಾರರು ಈಗಾಗಲೇ ಶ್ರೀಲಂಕಾಗೆ ತಲುಪಿರುವ ಫೋಟೋಗಳು ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿವೆ. ಪ್ರಮುಖವಾಗಿ ಟಿ20 ವಿಶ್ವಕಪ್ ಬಳಿಕ ಮೊದಲ ಸರಣಿ ಆಡುತ್ತಿರುವ ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿಗೆ ಈ ಸರಣಿ ಬಹು ಮುಖ್ಯವಾಗಿದೆ. ವರದಿ ಪ್ರಕಾರ ಟಿ20 ವಿಶ್ವಕಪ್ ಮುಗಿದ ಬಳಿಕ ಈ ಇಬ್ಬರು ಲಂಡನ್‌ನಲ್ಲಿ ಕುಟುಂಬದೊಂದಿಗೆ ಕಾಲ ಕಳೆದಿದ್ದು, ಇದೀಗ ನೇರವಾಗಿ ಕೊಲಂಬೊಕ್ಕೆ ಬಂದಿಳಿದ್ದಾರೆ. ಟಿ20 ಸರಣಿಯ ನಂತರ, ಶ್ರೀಲಂಕಾ ವಿರುದ್ಧದ ಏಕದಿನ ಸರಣಿಯು ಗೌತಮ್ ಗಂಭೀರ್ ಅವರ ಎರಡನೇ ದೊಡ್ಡ ಕೋಚಿಂಗ್ ಮಿಷನ್ ಆಗಿರುತ್ತದೆ. ಈಗಾಗಲೇ ಟಿ20 ಸರಣಿಯನ್ನು ಟೀಂ ಇಂಡಿಯಾ ಗೆದ್ದುಕೊಂಡಿದೆ. ಇದೀಗ ಏಕದಿನ ಸರಣಿಯ ಸರದಿಯಾಗಿದ್ದು, ರೋಹಿತ್ ಶರ್ಮಾ ತಂಡವನ್ನು ಮುನ್ನಡೆಸಲಿದ್ದಾರೆ. ಭಾರತ ಮತ್ತು ಶ್ರೀಲಂಕಾ ನಡುವಿನ ಮೊದಲ ಏಕದಿನ ಪಂದ್ಯ ಆಗಸ್ಟ್ 2 ರಂದು ನಡೆಯಲಿದೆ. ಹಾಗೆಯೇ ಎರಡನೇ ಏಕದಿನ ಪಂದ್ಯ ಆಗಸ್ಟ್ 4 ರಂದು ನಡೆಯಲಿದೆ. ಮೂರನೇ ಮತ್ತು ಕೊನೆಯ ಏಕದಿನ ಪಂದ್ಯ ಆಗಸ್ಟ್ 7 ರಂದು ನಡೆಯಲಿದೆ. ಈ ಮೂರು ಪಂದ್ಯಗಳು ಕೊಲಂಬೊದಲ್ಲಿ ಮಾತ್ರ ನಡೆಯಲಿವೆ.

**ಭಾರತ ಏಕದಿನ ತಂಡ:** ರೋಹಿತ್ ಶರ್ಮಾ (ನಾಯಕ), ಶುಭ್‌ಮನ್ ಗಿಲ್ (ಉಪನಾಯಕ), ವಿರಾಟ್ ಕೊಹ್ಲಿ, ಕೆಎಲ್ ರಾಹುಲ್ (ವಿಕೆಟ್ ಕೀಪರ್), ರಿಷಬ್ ಪಂತ್ (ವಿಕೆಟ್ ಕೀಪರ್), ಶ್ರೇಯಸ್ ಅಯ್ಯರ್, ಶಿವಂ ದುಬೆ, ಕುಲ್ದೀಪ್ ಯಾದವ್, ಮೊಹಮ್ಮದ್ ಸಿರಾಜ್, ವಾಷಿಂಗ್ಟನ್ ಸುಂದರ್, ಅರ್ಷದೀಪ್ ಸಿಂಗ್, ರಿಯಾನ್ ಪರಾಗ್, ಅಕ್ಷರ್ ಪಟೇಲ್, ಖಲೀಲ್ ಅಹ್ಮದ್, ಹರ್ಷಿತ್ ರಾಣಾ.

## 2025 ರ ಏಷ್ಯಾ ಕಪ್‌ಗೆ ಭಾರತದ ಆತಿಥ್ಯ
# 6 ತಂಡಗಳ ನಡುವೆ ಫೈಟ್



2025ರ ಚಾಂಪಿಯನ್ಸ್ ಟ್ರೋಫಿಗೆ ಪಾಕಿಸ್ತಾನ ಆತಿಥ್ಯವಹಿಸುತ್ತಿರುವುದು ಎಲ್ಲಾರಿಗೂ ಗೊತ್ತಿರುವ ಸಂಗತಿಯೇ. ಆದರೆ ಈ ಟೂರ್ನಿಯಲ್ಲಿ ಪಾಲ್ಗೊಳ್ಳಲು ಟೀಂ ಇಂಡಿಯಾ ಪಾಕಿಸ್ತಾನಕ್ಕೆ ತೆರಳಲಿದೆಯೇ ಅಥವಾ ಇಲ್ಲವೇ ಎಂಬುದು ಭಾರಿ ಚರ್ಚೆ ಹುಟ್ಟುಹಾಕಿದೆ. ಒಂದೆಡೆ ಪಾಕಿಸ್ತಾನ ಕ್ರಿಕಟ್ ಮಂಡಳಿ, ನಾವು ಏಕದಿನ ವಿಶ್ವಕಪ್ ಆಡಲು ಭಾರತಕ್ಕೆ ನಮ್ಮ ತಂಡವನ್ನು ಕಳುಹಿಸಿದ್ದೇವು. ಹೀಗಾಗಿ ಇದೀಗ ಚಾಂಪಿಯನ್ಸ್ ಟ್ರೋಫಿ ಆಡಲು ಬಿಸಿಸಿಐ, ತನ್ನ ತಂಡವನ್ನು ಪಾಕಿಸ್ತಾನಕ್ಕೆ ಕಳುಹಿಸಬೇಕು ಎಂಬ ವಾದ ಮುಂದಿಟ್ಟಿದೆ. ಆದರೆ ಈ ನಿರ್ಧಾರವನ್ನು ಭಾರತ ಸರ್ಕಾರದ ಹೆಗಲಿಗೆ ಹೊರಿಸಿರುವ ಬಿಸಿಸಿಐ ಅಡ್ಡಗೋಡೆಯ ಮೇಲೆ ದೀಪ ಇಟ್ಟಿದೆ.

ಇದೆಲ್ಲದರ ನಡುವೆ ದೊಡ್ಡ ಸುದ್ದಿಯೊಂದು ಹೊರ ಬಿದ್ದಿದ್ದು, ಮುಂದಿನ ವರ್ಷ ಪಾಕಿಸ್ತಾನ ಕ್ರಿಕೆಟ್ ತಂಡ ಭಾರತ ಪ್ರವಾಸ ಕೈಗೊಳ್ಳಬಹುದು ಎಂದು ಹೇಳಲಾಗುತ್ತಿದೆ. ಇದಕ್ಕೆ ಪ್ರಮುಖ ಕಾರಣ ಮುಂದಿನ ವರ್ಷ ನಡೆಯಲ್ಲಿರುವ ಏಷ್ಯಾಕಪ್‌ಗೆ ಭಾರತ ಆತಿಥ್ಯವಹಿಸುತ್ತಿರುವುದು.

**ಭಾರತಕ್ಕೆ ಬರಲಿದೆ ಪಾಕಿಸ್ತಾನ ಕ್ರಿಕೆಟ್ ತಂಡ**

ವರದಿಗಳ ಪ್ರಕಾರ, ಭಾರತವು 2025 ರ ಪುರುಷರ ಏಷ್ಯಾಕಪ್ ಅನ್ನು ಆಯೋಜಿಸುವ ಹಕ್ಕು ಪಡೆದಿದೆ. ಈ ಟೂರ್ನಿ 20 ಓವರ್‌ಗಳ ಮಾದರಿಯಲ್ಲಿ ನಡೆಯಲಿದೆ. ಇದರಲ್ಲಿ 6 ತಂಡಗಳು ಭಾಗವಹಿಸಲಿದ್ದು, ಈಗಾಗಲೇ ಭಾರತ, ಪಾಕಿಸ್ತಾನ, ಶ್ರೀಲಂಕಾ, ಬಾಂಗ್ಲಾದೇಶ, ಅಫ್ಘಾನಿಸ್ತಾನ ತಂಡಗಳು ಅರ್ಹತೆ ಪಡೆದುಕೊಂಡಿದ್ದು, ಆರನೇ ತಂಡವನ್ನು ಅರ್ಹತಾ ಸುತ್ತಿನ ಮೂಲಕ ನಿರ್ಧರಿಸಲಾಗುತ್ತದೆ ಎಂದು ಹೇಳಲಾಗುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಪಾಕಿಸ್ತಾನ ಮುಂದಿನ ವರ್ಷ ಭಾರತಕ್ಕೆ ಭೇಟಿ ನೀಡಬೇಕಾಗುತ್ತದೆ.

ವಾಸ್ತವವಾಗಿ 2023 ರ ಏಷ್ಯಾಕಪ್ ಅನ್ನು ಆಯೋಜಿಸುವ ಹಕ್ಕನ್ನು ಪಾಕಿಸ್ತಾನಕ್ಕೆ ನೀಡಲಾಗಿತ್ತು. ಆದರೆ ಈ ಟೂರ್ನಿಗಾಗಿ ಟೀಂ ಇಂಡಿಯಾವನ್ನು ಪಾಕಿಸ್ತಾನಕ್ಕೆ ಕಳುಹಿಸಲು ಭಾರತ ಸರ್ಕಾರ ನಿರಾಕರಿಸಿತ್ತು.

ಇದರಿಂದಾಗಿ ಪಂದ್ಯಾವಳಿಯನ್ನು ಹೈಬ್ರಿಡ್ ಮಾದರಿಯಲ್ಲಿ ನಡೆಸಲಾಯಿತು. ಅದರ ಪ್ರಕಾರ ಭಾರತದ ಪಂದ್ಯಗಳು ಶ್ರೀಲಂಕಾದಲ್ಲಿ ನಡೆದಿದ್ದವು.

**ಏಷ್ಯಾ ಕ್ರಿಕೆಟ್ ಮಂಡಳಿಯ ಮಹತ್ವದ ನಿರ್ಧಾರ**

ಏಷ್ಯಾ ಕ್ರಿಕೆಟ್ ಕೌನ್ಸಿಲ್ ಬಿಡುಗಡೆ ಮಾಡಿದ ದಾಖಲೆಯ ಪ್ರಕಾರ, ಭಾರತವು 2025 ರಲ್ಲಿ ನಡೆಯಲ್ಲಿರುವ ಪುರುಷರ ಏಷ್ಯಾಕಪ್‌ಗೆ ಆತಿಥ್ಯವಹಿಸಲಿದೆ. ಈ ಟೂರ್ನಿ ಟಿ20 ಸ್ವರೂಪದಲ್ಲಿ ನಡೆಯಲ್ಲಿದೆ. ಅದೇ ಸಮಯದಲ್ಲಿ, 2027 ರ ಏಷ್ಯಾಕಪ್ ಆಯೋಜಿಸುವ ಹಕ್ಕನ್ನು ಬಾಂಗ್ಲಾದೇಶಕ್ಕೆ ನೀಡಲಾಗಿದೆ. ಆದರೆ 2027ರ ಏಷ್ಯಾಕಪ್ ಏಕದಿನ ಮಾದರಿಯಲ್ಲಿ ನಡೆಯಲಿದ್ದು, ಈ ಎರಡೂ ಆವೃತ್ತಿಗಳಲ್ಲೂ ತಲಾ 13 ಪಂದ್ಯಗಳು ನಡೆಯಲಿವೆ. ವೇಳಾಪಟ್ಟಿ, ದಿನಾಂಕ, ಸ್ವರೂಪ ಮತ್ತು ಸ್ಥಳ ಸೇರಿದಂತೆ ಈ ಎಲ್ಲಾ ಮಾಹಿತಿಯನ್ನು ಏಷ್ಯಾ ಕ್ರಿಕೆಟ್ ಕೌನ್ಸಿಲ್ ಕೂಡ ಬದಲಾಯಿಸಬಹುದು ಎಂದು ದಾಖಲೆಯಲ್ಲಿ ಹೇಳಲಾಗಿದೆ.

**ಭಾರತಕ್ಕೆ ಎರಡನೇ ಅವಕಾಶ**

ಏಷ್ಯಾಕಪ್ ಅನ್ನು 1984 ರಲ್ಲಿ ಪ್ರಾರಂಭಿಸಲಾಯಿತು. ಇದುವರೆಗೆ ಈ ಟೂರ್ನಿಯ 16 ಆವೃತ್ತಿಗಳನ್ನು ಆಡಲಾಗಿದೆ. ಆದರೆ ಭಾರತ ಒಮ್ಮೆ ಮಾತ್ರ ಏಷ್ಯಾಕಪ್‌ಗೆ ಆತಿಥ್ಯ ವಹಿಸಿದೆ. ಭಾರತವು 1990/91 ರ ಆವೃತ್ತಿಯ ಏಷ್ಯಾಕಪ್ ಅನ್ನು ಆಯೋಜಿಸಿತ್ತು. ಆ ಆವೃತ್ತಿಯಲ್ಲಿ ಭಾರತ ಚಾಂಪಿಯನ್ ಆಗಿ ಹೊರಹೊಮ್ಮಿತ್ತು. ಇಂತಹ ಪರಿಸ್ಥಿತಿಯಲ್ಲಿ 2025ರ ಏಷ್ಯಾಕಪ್ ತುಂಬಾ ವಿಶೇಷವಾಗಿರಲಿದೆ. 34 ವರ್ಷಗಳ ಬಳಿಕ ಭಾರತದಲ್ಲಿ ಈ ಟೂರ್ನಿ ನಡೆಯಲಿದೆ.

**ಏಷ್ಯಾಕಪ್‌ನಲ್ಲಿ ಟೀಂ ಇಂಡಿಯಾದ ಪ್ರಾಬಲ್ಯ**

ಈ ಟೂರ್ನಿಯಲ್ಲಿ ಟೀಂ ಇಂಡಿಯಾ ಅತ್ಯಂತ ಯಶಸ್ವಿ ತಂಡವಾಗಿದೆ. ಭಾರತ ಇದುವರೆಗೆ 8 ಬಾರಿ ಏಷ್ಯಾಕಪ್ ಪ್ರಶಸ್ತಿ ಗೆದ್ದಿದೆ.

ಅದೇ ಸಮಯದಲ್ಲಿ, ಶ್ರೀಲಂಕಾ ಈ ಪಟ್ಟಿಯಲ್ಲಿ 6 ಪ್ರಶಸ್ತಿಗಳೊಂದಿಗೆ ಎರಡನೇ ಸ್ಥಾನದಲ್ಲಿದೆ. ಪಾಕಿಸ್ತಾನ ತಂಡ ಏಷ್ಯಾಕಪ್‌ನಲ್ಲಿ ಎರಡು ಬಾರಿ ಮಾತ್ರ ಚಾಂಪಿಯನ್ ಆಗಲು ಸಾಧ್ಯವಾಗಿದೆ. ಕಳೆದ ಏಷ್ಯಾಕಪ್ ಅನ್ನು ಭಾರತ ಗೆದ್ದುಕೊಂಡಿತ್ತು. ಟೀಂ ಇಂಡಿಯಾ ಫೈನಲ್‌ನಲ್ಲಿ ಶ್ರೀಲಂಕಾವನ್ನು ಸೋಲಿಸಿ ದಾಖಲೆಯ 8ನೇ ಬಾರಿಗೆ ಏಷ್ಯನ್ ಕಿರೀಟ ತೊಟ್ಟಿತ್ತು.

# ಭಾರತ- ಲಂಕಾ 3ನೇ ಟಿ20 ಪಂದ್ಯ; ಬೆಂಚ್ ಕಾದವರಿಗೆ ಸಿಗುತ್ತಾ ಅವಕಾಶ




ಸಂಜು ಸ್ಯಾಮ್ಸನ್‌ಗೆ ಮತ್ತೊಂದು ಅವಕಾಶ

ಭಾರತ ಮತ್ತು ಶ್ರೀಲಂಕಾ ನಡುವೆ ನಡೆಯುತ್ತಿರುವ ಮೂರು ಪಂದ್ಯಗಳ ಟಿ20 ಸರಣಿಯ ಕೊನೆಯ ಪಂದ್ಯ ಮಂಗಳವಾರ (ಜುಲೈ 30) ನಡೆಯಲಿದೆ. ಈಗಾಗಲೇ ಸರಣಿ ಕೈವಶ ಮಾಡಿಕೊಂಡಿರುವ ಟೀಂ ಇಂಡಿಯಾ ಕೊನೆಯ ಪಂದ್ಯವನ್ನೂ ಗೆದ್ದು ಆತಿಥೇಯರಿಗೆ ಕ್ಲೀನ್ ಸ್ವೀಪ್ ಶಾಕ್ ನೀಡುವ ಗುರಿ ಇಟ್ಟುಕೊಂಡಿದೆ. ಇತ್ತ ತವರಿನಲ್ಲಿ ಟಿ20 ಸರಣಿ ಸೋತಿರುವ ಶ್ರೀಲಂಕಾ ತಂಡ ಕೊನೆಯ ಪಂದ್ಯವನ್ನು ಗೆದ್ದು ಸರಣಿಯನ್ನು 2-1 ಅಂತರದಿಂದ ಕೊನೆಗೊಳಿಸಲು ಪ್ರಯತ್ನಿಸಲಿದೆ. ಇನ್ನು ಮೂರನೇ ಟಿ20 ಪಂದ್ಯಕ್ಕೆ ಗಂಭೀರ್ ಯಾವ ತಂಡವನ್ನು ಕಣಕ್ಕಿಳಿಸುತ್ತಾರೆ ಎಂಬುದು ಪ್ರಶ್ನೆಯಾಗಿದೆ. ಏಕೆಂದರೆ ಇಡೀ ಸರಣಿಯಲ್ಲಿ ಅವಕಾಶ ಸಿಗದ ಕೆಲವು ಆಟಗಾರರು ತಂಡದಲ್ಲಿದ್ದಾರೆ. ಹೀಗಾಗಿ ಈಗಾಗಲೇ ಸರಣಿ ಗೆದ್ದಿರುವುದರಿಂದ ಬೆಂಚ್ ಕಾದ ಆಟಗಾರರಿಗೆ ಈ ಪಂದ್ಯದಲ್ಲಿ ಅವಕಾಶ ಸಿಗುತ್ತಾ ಎಂಬುದು ಪ್ರಶ್ನೆಯಾಗಿದೆ.

**ಸಂಜುಗೆ ಮತ್ತೊಂದು ಅವಕಾಶ**

ಟಾಪ್ ಆರ್ಡರ್ ವಿಚಾರಕ್ಕೆ ಬರುವುದಾದರೆ, ಅನಾರೋಗ್ಯಕ್ಕೀಡಾಗಿರುವ ಶುಭ್‌ಮನ್ ಗಿಲ್, ಮೂರನೇ ಟಿ20 ಪಂದ್ಯಕ್ಕೂ ಅಲಭ್ಯರಾಗುವ ಸಾಧ್ಯತೆಗಳಿವೆ. ಹೀಗಾಗಿ 2ನೇ ಟಿ20 ಪಂದ್ಯದಲ್ಲಿ ಅವರ ಬದಲಿಯಾಗಿ ತಂಡ ಸೇರಿಕೊಂಡಿದ್ದ ಸಂಜು ಸ್ಯಾಮ್ಸನ್‌ಗೆ ಮತ್ತೊಂದು ಅವಕಾಶ ಸಿಗುವ ಸಾಧ್ಯತೆಗಳಿವೆ. ಆದರೆ ಎರಡನೇ ಟಿ20 ಪಂದ್ಯದಲ್ಲಿ ಸಂಜು ಸೊನ್ನೆ ಸುತ್ತಿರುವುದರಿಂದ ಅವರ ಸ್ಥಾನಕ್ಕೆ ಅಪಾಯ ಎದುರಾಗಿದೆ. ಅದಾಗ್ಯೂ ಟೀಂ ಮ್ಯಾನೇಜ್ಮೆಂಟ್ ಈಗಾಗಲೇ ಸಂಜುಗೆ ಮತ್ತೊಂದು ಅವಕಾಶ ನೀಡುವುದಾಗಿ ಹೇಳಿದೆ. ಈ ಕಾರಣಕ್ಕಾಗಿ, ಅವರು ಮತ್ತೊಮ್ಮೆ ಟೀಮ್ ಇಂಡಿಯಾದ ಆಡುವ ಹನ್ನೊಂದರಲ್ಲಿ ಕಾಣಿಸಿಕೊಳ್ಳಬಹುದು.

**ಖಲೀಲ್‌ಗೆ ಅವಕಾಶ ಸಿಗಬಹುದು**


ಇದುವರೆಗಿನ ಈ ಸರಣಿಯಲ್ಲಿ ಮೊಹಮ್ಮದ್ ಸಿರಾಜ್ ಪ್ರದರ್ಶನ ವಿಶೇಷವೇನೂ ಆಗಿಲ್ಲ. ಎರಡು ಪಂದ್ಯಗಳಲ್ಲಿ ಕೇವಲ ಒಂದು ವಿಕೆಟ್ ಪಡೆದಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಟೀಂ ಮ್ಯಾನೇಜ್‌ಮೆಂಟ್ ಸಿರಾಜ್‌ಗೆ ಈ ಪಂದ್ಯದಿಂದ ವಿಶ್ರಾಂತಿ ನೀಡಬಹುದು. ಅವರ ಜಾಗದಲ್ಲಿ ಮತ್ತೊಬ್ಬ ವೇಗಿ ಖಲೀಲ್ ಅಹ್ಮದ್‌ಗೆ ಅವಕಾಶ ನೀಡಬಹುದು.

**ಸುಂದರ್‌ಗೂ ಅವಕಾಶ**

ಇದುವರೆಗಿನ ಈ ಸರಣಿಯಲ್ಲಿ ಅಕ್ಷರ್ ಪಟೇಲ್ ಉತ್ತಮ ಪ್ರದರ್ಶನ ನೀಡಿದ್ದಾರೆ. ಅಗತ್ಯ ಸಮಯದಲ್ಲಿ ಟೀಂ ಇಂಡಿಯಾಗೆ ವಿಕೆಟ್ ತದ್ದುಕೊಟ್ಟಿದ್ದಾರೆ. ಆದಾಗ್ಯೂ, ಸರಣಿ ಕೈವಶವಾಗಿರುವುದರಿಂದ ಬೆಂಚ್ ಕಾಯ್ದಿರುವ ಸುಂದರ್‌ಗೆ ಅವಕಾಶ ನೀಡುವ ಸಾಧ್ಯತೆಗಳಿವೆ. ಇದಕ್ಕೆ ಪೂರವಾಗಿ ಸುಂದರ್ ಅವರನ್ನು ಉತ್ತಮ ಆಲ್‌ರೌಂಡರ್ ಆಗಿ ರೂಪಿಸುವುದು ಆಡಳಿತ ಮಂಡಳಿಯ ಮಹತ್ವದ ಗುರಿಯಾಗಿರುವುದರಿಂದ ಸುಂದರ್‌ಗೂ ಅವಕಾಶ ಸಿಗಬಹುದು.

**ಭಾರತ ಸಂಭಾವ್ಯ ತಂಡ:** ಯಶಸ್ವಿ ಜೈಸ್ವಾಲ್, ಸಂಜು ಸ್ಯಾಮ್ಸನ್, ಸೂರ್ಯಕುಮಾರ್ ಯಾದವ್ (ನಾಯಕ), ರಿಷಭ್ ಪಂತ್ (ವಿಕೆಟ್ ಕೀಪರ್), ಹಾರ್ದಿಕ್ ಪಾಂಡ್ಯ, ರಿಯಾನ್ ಪರಾಗ್, ರಿಂಕು ಸಿಂಗ್, ವಾಷಿಂಗ್ಟನ್ ಸುಂದರ್, ಅರ್ಶ್‌ದೀಪ್ ಸಿಂಗ್, ರವಿ ಬಿಷ್ಣೋಯ್, ಖಲೀಲ್ ಅಹ್ಮದ್.

# ಮತ್ತೆ 'ಕಾಂತಾರ 1' ಶೂಟಿಂಗ್ ಶುರು ಮಾಡಿದ ರಿಷಬ್ ಶೆಟ್ಟಿ



ಮಳೆ ಅವಾಂತರದ ನಂತರ ಮತ್ತೆ 'ಕಾಂತಾರ ಚಾಪ್ಟರ್ 1' ಚಿತ್ರೀಕರಣವನ್ನು ರಿಷಬ್ ಶೆಟ್ಟಿ ಶುರು ಮಾಡಿದ್ದಾರೆ. ಪ್ಯಾನ್ ಇಂಡಿಯಾ ಸಿನಿಮಾ ಶೂಟಿಂಗ್‌ಗೆ ಮತ್ತೆ ಚಾಲನೆ ಸಿಕ್ಕಿದೆ. 'ಕಾಂತಾರ' ಸಿನಿಮಾ ಸಕ್ಸಸ್ ನಂತರ 'ಕಾಂತಾರ ಚಾಪ್ಟರ್ 1' ಕೂಡ ಉತ್ತಮ ಕಥೆಯೊಂದಿಗೆ ಅದ್ದೂರಿಯಾಗಿ ತರಲು ತೆರೆಮರೆಯಲ್ಲಿ ಕೆಲಸ ನಡೆಯುತ್ತಿದೆ. ಇತ್ತೀಚೆಗೆ ಮಳೆಯ ಅವಾಂತರದಿಂದ 'ಕಾಂತಾರ 1' ಸಿನಿಮಾದ ಚಿತ್ರೀಕರಣಕ್ಕೆ ಬ್ರೇಕ್ ಕೊಟ್ಟಿದ್ದರು. ಮಳೆ ಕಮ್ಮಿಯಾದ ಹಿನ್ನೆಲೆ ಮತ್ತೆ ಶೂಟಿಂಗ್ ಭರದಿಂದ ನಡೆಯುತ್ತಿದೆ. ಅಂದಹಾಗೆ, 'ಕಾಂತಾರ ಚಾಪ್ಟರ್ 1' ಸಿನಿಮಾದ ರಿಷಬ್ ಫಸ್ಟ್ ಲುಕ್‌ಗೆ ಅಭಿಮಾನಿಗಳಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿತ್ತು. ವಿಭಿನ್ನ ಅವತಾರದಲ್ಲಿ ರಿಷಬ್ ಮಿಂಚಿದ್ದರು. ಹಾಗಾಗಿ ಈ ಸಿನಿಮಾದ ಮೇಲೆ ಫ್ಯಾನ್ಸ್‌ಗೆ ಭಾರೀ ನಿರೀಕ್ಷೆಯಿದೆ.

# ದುಲ್ಕರ್ ಸಲ್ಮಾನ್ ಹೊಸ ಚಿತ್ರಕ್ಕೆ ಟೈಟಲ್ ಫಿಕ್ಸ್



ಮಾಲಿವುಡ್ ನಟ ದುಲ್ಕರ್ ಸಲ್ಮಾನ್ ನಟನೆಯ ತೆಲುಗಿನ ಚಿತ್ರಕ್ಕೆ ಕ್ಯಾಚಿ ಆಗಿರುವ ಟೈಟಲ್‌ವೊಂದು ಫಿಕ್ಸ್ ಆಗಿದೆ. ಮಹಾನದಿ, ಸೀತಾರಾಮಂ ಸಿನಿಮಾ ನಂತರ ಮತ್ತೆ ನಟನೆಗೆ ಮರಳಿದ್ದಾರೆ. ಟಾಲಿವುಡ್‌ನಲ್ಲಿ ಇದೀಗ ಮತ್ತೆ ಹೊಸ ಚಿತ್ರವೊಂದನ್ನು ದುಲ್ಕರ್ ಸಲ್ಮಾನ್ ಒಪ್ಪಿಕೊಂಡಿದ್ದಾರೆ. ಅದಕ್ಕೆ 'ಆಕಾಶಂ ಲೋ ಒಕ ತಾರಾ' ಎಂಬ ಟೈಟಲ್ ಇಡಲಾಗಿದೆ. ಪೋಸ್ಟರ್‌ನಲ್ಲಿ ಸಿಂಪಲ್ ಆಗಿ ಕಂಡರೂ ನೋಡುಗರಿಗೆ ಆಕರ್ಷಕವಾಗಿ ಕಾಣಿಸಿಕೊಂಡಿದ್ದಾರೆ. ದುಲ್ಕರ್ ಈ ಚಿತ್ರಕ್ಕೆ ಪವನ್ ಸಾದಿನೇನಿ ಎಂಬುವವರು ನಿರ್ದೇಶನ ಮಾಡುತ್ತಿದ್ದಾರೆ. ತೆಲುಗು, ತಮಿಳು, ಹಿಂದಿ ಮತ್ತು ಮಲಯಾಳಂ ಭಾಷೆಗಳಲ್ಲಿ ಈ ಚಿತ್ರ ಮೂಡಿ ಬರಲಿದೆ.

# ದೀಪಿಕಾ ಜೊತೆ ಇಂಟಿಮೇಟ್ ದೃಶ್ಯ ನಿಭಾಯಿಸಿದ್ದು ಅಷ್ಟು ಸುಲಭವಾಗಿರಲಿಲ್ಲ




**'ಗೆಹ್ರೈಯಾನ್' ಚಿತ್ರದಲ್ಲಿ ದೀಪಿಕಾ ಜೊತೆ ಹಸಿ ಬಿಸಿ ದೃಶದಲ್ಲಿ ನಟಿಸುವಾಗ ತುಂಬಾ ನರ್ವಸ್ ಆಗಿದ್ದೆ. ಕರಣ್ ಜೋಹರ್ ಅವರ ಬಳಿ ಕೂಡ ನನ್ನ ಕಳವಳ ವ್ಯಕ್ತಪಡಿಸಿದ್ದೆ. ವೃತ್ತಿಪರವಾಗಿ ಪರಿಸ್ಥಿತಿಯನ್ನು ನಿಭಾಯಿಸಲು ನನಗೆ ಪ್ರೋತ್ಸಾಹಿಸಿದರು ಎಂದು ನಟ ಸಿದ್ಧಾಂತ್ ಮಾತನಾಡಿದ್ದಾರೆ.**

ಬಾಲಿವುಡ್ ನಟ ಸಿದ್ಧಾಂತ್ ಚತುರ್ವೇದಿ ಸದ್ಯ ಕರಣ್ ಜೋಹರ್ ನಿರ್ಮಾಣದ ಸಿನಿಮಾ ಸೇರಿದಂತೆ ಹಲವು ಚಿತ್ರಗಳಲ್ಲಿ ಬ್ಯುಸಿಯಾಗಿದ್ದಾರೆ. ಇದೀಗ ಅವರು ನೀಡಿದ ಸಂದರ್ಶನವೊಂದರಲ್ಲಿ ದೀಪಿಕಾ ಪಡುಕೋಣೆ ಜೊತೆ ಇಂಟಿಮೇಟ್ ದೃಶ್ಯ ನಿಭಾಯಿಸಿದ್ದು ಅಷ್ಟು ಸುಲಭವಾಗಿರಲಿಲ್ಲ ಎಂದು ಮಾತನಾಡಿದ್ದಾರೆ. ಭಾರತದ ಅನೇಕರು ಸಿಕ್ಕ ಒಳ್ಳೆಯ ಅವಕಾಶವನ್ನು ಕಳೆದುಕೊಳ್ಳಲು ಬಯಸುವುದಿಲ್ಲ. ಮಾತ್ರವಲ್ಲ ಇಂತಹ ದೃಶ್ಯಗಳನ್ನು ನಿಭಾಯಿಸುವಾಗ ತಂದೆಯ ಸಹಕಾರ ಕೂಡ ನನಗಿತ್ತು. 'ಗೆಹ್ರೈಯಾನ್' ಚಿತ್ರದಲ್ಲಿ ದೀಪಿಕಾ ಜೊತೆ ಹಸಿ ಬಿಸಿ ದೃಶದಲ್ಲಿ ನಟಿಸುವಾಗ ತುಂಬಾ ನರ್ವಸ್ ಆಗಿದ್ದೆ. ಕರಣ್ ಜೋಹರ್ ಅವರ ಬಳಿ ಕೂಡ ನನ್ನ ಕಳವಳ ವ್ಯಕ್ತಪಡಿಸಿದ್ದೆ. ವೃತ್ತಿಪರವಾಗಿ ಪರಿಸ್ಥಿತಿಯನ್ನು ನಿಭಾಯಿಸಲು ನನಗೆ ಪ್ರೋತ್ಸಾಹಿಸಿದರು ಎಂದು ನಟ ಸಿದ್ಧಾಂತ್ ಮಾತನಾಡಿದ್ದಾರೆ. ಧರ್ಮ ಪ್ರೊಡಕ್ಷನ್ಸ್ ಮತ್ತು ದೀಪಿಕಾ ಪಡುಕೋಣೆ ಹಾಗೂ ನಿರ್ದೇಶಕ ಶಕುನ್ ಬಾತ್ರಾ ಜೊತೆ ಕೆಲಸ ಮಾಡುವ ಒಳ್ಳೆಯ ಅವಕಾಶ ನನ್ನದಾಗಿತ್ತು ಎಂದು ಹೇಳಿದ್ದಾರೆ.

ಇನ್ನೂ ದೀಪಿಕಾ ಪಡುಕೋಣೆ ಸ್ವೀಟ್ ವ್ಯಕ್ತಿಯಾಗಿದ್ದರು. ಈ ಸಿನಿಮಾ ಮಾಡುವಾಗ ಬೆಂಬಲಿಸಿದ್ದರು. ಆ ಬಾಂಧವ್ಯದಿಂದಲೇ ನಾವು ಉತ್ತಮ ಸ್ನೇಹಿತರಾದೆವು ಎಂದು ಸಿದ್ಧಾಂತ್ ಚರ್ತುರ್ವೇದಿ ಮಾತನಾಡಿದ್ದಾರೆ.

ಅಂದಹಾಗೆ, 'ಗೆಹ್ರೈಯಾನ್' ಸಿನಿಮಾ 2022ರಲ್ಲಿ ರಿಲೀಸ್ ಆಗಿ ಪ್ರೇಕ್ಷಕರಿಂದ ಮೆಚ್ಚುಗೆ ಗಳಿಸಿತ್ತು. ಈ ಚಿತ್ರವನ್ನು ಕರಣ ಜೋಹರ್ ನಿರ್ಮಾಣ ಮಾಡಿದ್ದರು.

# ಪರಿಸರ ಸ್ನೇಹಿ ಇನ್ವಿಟೇಷನ್ ಮೂಲಕ ಮಾದರಿ



ಕನ್ನಡ ಸಿನಿಮಾರಂಗದ ಸ್ಟಾರ್ ನಿರ್ದೇಶಕ ತರುಣ್ ಸುಧೀರ್ ಹಾಗೂ ಸೋನಲ್ ವಿವಾಹಕ್ಕೆ ಇನ್ನು ಕೆಲವೇ ದಿನಗಳು ಬಾಕಿ ಉಳಿದಿದೆ. ಈಗಾಗಲೇ ಈ ಜೋಡಿ ಇಡೀ ಚಿತ್ರರಂಗ ಹಾಗೂ ಸ್ನೇಹಿತರು ಮತ್ತು ಸಂಬಂಧಿಕರಿಗೆ ತಮ್ಮ ವಿವಾಹದ ಇನ್ವಿಟೇಷನ್ ಕೊಟ್ಟು ಆಹ್ವಾನ ಮಾಡಲು ಶುರು ಮಾಡಿದ್ದಾರೆ. ಸಿನಿಮಾದಲ್ಲಿ ಸದಾ ಸರ್ಪ್ರೈಸ್ ಪ್ಲಾನ್ ಮಾಡಿ ಪ್ರೇಕ್ಷಕರನ್ನ ಖುಷಿಪಡಿಸೋ ನಿರ್ದೇಶಕ ತರುಣ್ ತಮ್ಮ ಮದುವೆ ಇನ್ವಿಟೇಷನ್ ಅನ್ನು ಸೂಪರ್ ಆಗಿಯೇ ಪ್ಲಾನ್ ಮಾಡಿದ್ದಾರೆ. ಸಾಮಾನ್ಯವಾಗಿ ಸೆಲಬ್ರೆಟಿಗಳು ಇನ್ವಿಟೇಷನ್ ಜೊತೆ ಒಂದು ಗಿಡಕೊಟ್ಟು ತಮ್ಮ ಮದುವೆಗೆ ಕರೆಯೋದು ಕಾಮನ್. ಆದರೆ ತರುಣ್ ಮತ್ತು ಸೋನಲ್ ತಮ್ಮ ವಿವಾಹ ಪತ್ರಿಕೆಯನ್ನ ಕಂಪ್ಲೀಟ್ ಆಗಿ ಪರಿಸರ ಸ್ನೇಹಿಯಾಗಿ ಮಾಡಿದ್ದಾರೆ. ತರುಣ್ ನೀಡುತ್ತಿರುವ ಈ ಇನ್ವಿಟೇಷನ್‌ನಲ್ಲಿ ಮದುವೆ ಪತ್ರಿಕೆ, ಒಂದು ಖಾಲಿ ಪುಸ್ತಕ ಅದರಲ್ಲಿ ಬರೆಯೋದಕ್ಕೆ ಎರಡು ಪೆನ್ಸಿಲ್ ಹಾಗೂ ಎರಡು ಪೆನ್ ಮತ್ತು ಒಂದು ಸೀಡ್ ಬಾಲ್ ಇವೆ. ವಿಶೇಷ ಅಂದರೆ ಮದುವೆ ಮುಗಿದ ನಂತ್ರ ಪತ್ರಿಕೆ ಏನ್ ಮಾಡೋದು ಅಂತ ಯೋಚನೆ ಮಾಡೋ ಹಾಗಿಲ್ಲ, ಯಾಕಂದರೆ ಸೋನಲ್ ಮತ್ತು ತರುಣ್ ಮದುವೆಯ ಪತ್ರಿಕೆಯನ್ನ ಒಂದು ಮಣ್ಣಿನ ಪಾಟ್‌ನಲ್ಲಿ ಹಾಕಿದ್ರೆ ಅದು ಮಣ್ಣಿನಲ್ಲಿ ಬೆರೆತು ಗಿಡ ಬೆಳೆಯುತ್ತದೆ. ಅದಷ್ಟೇ ಅಲ್ಲ, ಖಾಲಿ ಪುಸ್ತಕದಲ್ಲಿ ಬರೆದು ಹಾಳೆ ಖಾಲಿ ಆದ ನಂತರ ಅದು ಮಣ್ಣು ಸೇರಿದ್ರೆ ಅದ್ರಿಂದಲೂ ಹೂವಿನ ಗಿಡ ಬೆಳೆಯುತ್ತೆ. ಇನ್ನು ಪೆನ್ ಮತ್ತು ಪೆನ್ಸಿಲ್ ಬರೆದು ಖಾಲಿ ಆದರೆ ಅದನ್ನು ಮಣ್ಣಿಗೆ ಹಾಕಿದ್ರೆ ಚಂದದ ಹೂವಿನ ಹಾಗೂ ತರಕಾರಿ ಗಿಡ ಬೆಳೆಯುತ್ತೆ. ಹೀಗೆ ತಮ್ಮ ವಿವಾಹದ ಆಹ್ವಾನ ಪತ್ರಿಕೆ ಸಖತ್ ಸ್ಪೆಷಲ್ ಮತ್ತು ಪರಿಸರ ಸ್ನೇಹಿ ಆಗಿರಲಿ ಅಂತ ತರುಣ್ ಈ ರೀತಿ ಪ್ಲ್ಯಾನ್ ಮಾಡಿದ್ದಾರೆ. ಇನ್ನು ಆಗಸ್ಟ್ 10, 11ರಂದು ನಡೆಯಲಿರುವ ತರುಣ್ ಮತ್ತು ಸೋನಲ್ ಮದುವೆಗೆ ಈಗಾಗಲೇ ಸಖಲ ಸಿದ್ಧತೆಗಳು ನಡೆದಿದೆ. ಸ್ಯಾಂಡಲ್‌ವುಡ್‌ನ ಸ್ಟಾರ್ ನಿರ್ದೇಶಕ ಹಾಗೂ ನಾಯಕಿಯ ಮದುವೆಗೆ ಇಡೀ ಚಿತ್ರರಂಗ ಸಾಕ್ಷಿ ಆಗಲಿದೆ. ಸದ್ಯ ಮದುವೆ ಇನ್ವಿಟೇಷನ್‌ನಲ್ಲಿ ಸ್ಪೆಷಲ್ ಅನ್ನಿಸ್ತಿರೋ ಈ ಜೋಡಿ ಮದುವೆಯಲ್ಲಿ ಏನೆಲ್ಲಾ ಸರ್ಪ್ರೈಸ್ ಪ್ಲ್ಯಾನ್ ಮಾಡಿದೆ ಅಂತ ಕಾದು ನೋಡಬೇಕಿದೆ.




# 'ಸರ್ದಾರ್ 2' ಸಿನಿಮಾ ರಿಜೆಕ್ಟ್ ಮಾಡಿದ ಶ್ರೀಲೀಲಾ

ಕನ್ನಡದ ನಟಿ ಶ್ರೀಲೀಲಾ ಸದ್ಯ ಟಾಲಿವುಡ್ ಅಂಗಳದ ಸೆನ್ಸೇಷನ್ ಹೀರೋಯಿನ್ ಆಗಿದ್ದಾರೆ. ಹೀಗಿರುವಾಗ ತಮಿಳಿನ ಸಿನಿಮಾವೊಂದರ ವಿಚಾರವಾಗಿ ನಟಿ ಸದ್ದು ಮಾಡುತ್ತಿದ್ದಾರೆ. ಕಾರ್ತಿ ನಟನೆಯ ಚಿತ್ರವೊಂದನ್ನು ನಟಿ ತಿರಸ್ಕರಿಸಿದ್ದಾರೆ. 'ಕಿಸ್' ನಟಿ ಶ್ರೀಲೀಲಾ ಈಗ ತೆಲುಗಿನಲ್ಲಿ ಸೆಟಲ್ ಆಗಿದ್ದಾರೆ. ಸಾಲು ಸಾಲು ಸಿನಿಮಾಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಇದೀಗ ತಮಿಳು ನಟ ಕಾರ್ತಿ ನಟನೆಯ 'ಸರ್ದಾರ್ 2' ಚಿತ್ರವನ್ನು ಶ್ರೀಲೀಲಾ ರಿಜೆಕ್ಟ್ ಮಾಡಿದ್ದಾರೆ.

'ಸರ್ದಾರ್ 2' ಸಿನಿಮಾದಲ್ಲಿ ಇಬ್ಬರೂ ನಾಯಕಿಯರಿದ್ದರು. ಸಿಂಗಲ್ ಹೀರೋಯಿನ್ ಆಗಿ ತೆಲುಗಿನಲ್ಲಿ ಸೈ ಎನಿಸಿಕೊಂಡಿದ್ದಾರೆ. ಆದರೆ ತಮಿಳಿನಲ್ಲಿ ಮತ್ತೊರ್ವ ನಟಿಯ ಜೊತೆ ತೆರೆಹಂಚಿಕೊಳ್ಳಲು ಶ್ರೀಲೀಲಾ ಒಪ್ಪದೇ ಚಿತ್ರವನ್ನು ಕೈಬಿಟ್ಟಿದ್ದಾರೆ. ಸಕ್ಸಸ್‌ಫುಲ್ ನಟಿ ಎನಿಸಿಕೊಂಡಿರುವ ಶ್ರೀಲೀಲಾಗೆ ಪೂರ್ಣಪ್ರಮಾಣದ ನಾಯಕಿಯಾಗಿ ಕಾಣಿಸಿಕೊಳ್ಳಬೇಕೆಂದಿದ್ದಾರೆ. ಕಥೆ ಮತ್ತು ಪಾತ್ರಕ್ಕೂ ಕೂಡ ಅಷ್ಟೇ ಪ್ರಾಮುಖ್ಯತೆ ಕೊಡುತ್ತಾರೆ. ಅಂದಹಾಗೆ, ರಾಬಿನ್‌ಹುಡ್, ಪವನ್ ಕಲ್ಯಾಣ್ ಜೊತೆಗಿನ ಸಿನಿಮಾ ಮತ್ತು ಬಾಲಿವುಡ್‌ನಲ್ಲಿ 2 ಚಿತ್ರಗಳನ್ನು ನಟಿ ಒಪ್ಪಿದ್ದಾರೆ.

# ಧ್ರುವ ಸರ್ಜಾ ಮುಂದೆ 'ಧಾಕ್ ದೇವ'ನಾಗಿ ಬಂದ ಸಂಜಯ್ ದತ್- ರಿವೀಲ್ ಆಯ್ತು 'ಕೆಡಿ' ಲುಕ್



ಬಾಲಿವುಡ್ ನಟ ಸಂಜಯ್ ದತ್ 'ಕೆಜಿಎಫ್ 2' ಚಿತ್ರದ ಸಕ್ಸಸ್ ನಂತರ ಕನ್ನಡದ ಸಿನಿಮಾಗಳಿಗೆ ಹೆಚ್ಚು ಪ್ರಾಮುಖ್ಯತೆ ಕೊಡ್ತಿದ್ದಾರೆ. ಹೀಗಿರುವಾಗ ಅವರ ಹುಟ್ಟುಹಬ್ಬದ ಪ್ರಯುಕ್ತ 'ಕೆಡಿ' ಸಿನಿಮಾದ ಲುಕ್ ರಿವೀಲ್ ಆಗಿದೆ. 'ಧಾಕ್ ದೇವ'ನಾಗಿ ಅಧೀರ ಖಡಕ್ ಆಗಿ ಕಾಣಿಸಿಕೊಂಡಿದ್ದಾರೆ. ಧ್ರುವ ಸರ್ಜಾ ನಟನೆಯ ಪ್ಯಾನ್ ಇಂಡಿಯಾ 'ಕೆಡಿ' ಸಿನಿಮಾದಲ್ಲಿ ಸಂಜಯ್ ದತ್ ಕೂಡ ಪ್ರಮುಖ ಪಾತ್ರದಲ್ಲಿ ಬಣ್ಣ ಹಚ್ಚಿದ್ದಾರೆ. ತಲೆಗೆ ಪೊಲೀಸ್ ಹ್ಯಾಟ್ ಧರಿಸಿ ವಿಭಿನ್ನ ಲುಕ್‌ನಲ್ಲಿ ನಟ ಧಾಕ್ ದೇವನಾಗಿ ಮಿಂಚಿದ್ದಾರೆ. ನಟನ ಲುಕ್‌ಗೆ ಅಭಿಮಾನಿಗಳಿಂದ ಭಾರೀ ಮೆಚ್ಚುಗೆ ವ್ಯಕ್ತವಾಗಿದೆ. ಅಂದಹಾಗೆ, 70ರ ದಶಕದ ಗ್ಯಾಂಗ್‌ಸ್ಟರ್ ಕುರಿತ ನೈಜ ಕಥೆಯನ್ನೇ ಸಿನಿಮಾ ರೂಪದಲ್ಲಿ ತಂದಿದ್ದಾರೆ ನಿರ್ದೇಶಕ ಜೋಗಿ ಪ್ರೇಮ್. ರೆಟ್ರೋ ಲುಕ್‌ನಲ್ಲಿ ಈ 'ಕೆಡಿ' ಚಿತ್ರ ಮೂಡಿ ಬಂದಿದೆ. ಮಲ್ಟಿಸ್ಟಾರ್‌ಗಳು ಇರುವ ಈ ಸಿನಿಮಾ ಭಿನ್ನವಾಗಿ ಮೂಡಿ ಬಂದಿದೆ. ಧ್ರುವ ಸರ್ಜಾ, ಸಂಜಯ್ ದತ್ ಜೊತೆ ರೀಷ್ಮಾ ನಾಣಯ್ಯ, ರವಿಚಂದ್ರನ್, ಶಿಲ್ಪಾ ಶೆಟ್ಟಿ, ನೋರಾ ಫತೇಹಿ ಸೇರಿದಂತೆ ಅನೇಕರು ನಟಿಸಿದ್ದಾರೆ. ಬಹುಭಾಷೆಗಳಲ್ಲಿ ಚಿತ್ರ ಮೂಡಿ ಬಂದಿದ್ದು, ಡಿಸೆಂಬರ್‌ನಲ್ಲಿ ರಿಲೀಸ್ ಆಗಲಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966